24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

www.dehalivaarthe.com

EDITION: NEW DELHI / CIRCULATION IN U.P. & HARYANA | EDITOR : K.R. RENU | RNI No. DELKAN/2003/10363 | ಪುಟ 8 | ಸಂಪುಟ 24 | ಸಂಚಿಕೆ 109 | ನವದೆಹಲಿ | ಬೆಲೆ ₹ 10 | ಅಕ್ಟೋಬರ್, 15, 2026, ಗುರುವಾರ




## ಶ್ರೀ ಲಕ್ಷ್ಮಣ ಸವದಿ

ಸಹಕಾರ ಇಲಾಖೆ ಸಚಿವರು,
ಕರ್ನಾಟಕ ಸರ್ಕಾರ

24 ವರ್ಷಗಳಿಂದ ದೆಹಲಿಯಲ್ಲಿ ಪ್ರಕಟವಾಗುತ್ತಿರುವ ಪ್ರಪ್ರಥಮ ರಾಷ್ಟ್ರೀಯ ಕನ್ನಡ ದಿನಪತ್ರಿಕೆ

# ದೆಹಲಿ ವಾರ್ತೆ

ಅಕ್ಟೋಬರ್, 15, 2026, ಗುರುವಾರ

## ಒಳಪುಟಗಳಲ್ಲಿ

ಸ್ಟಿಂಗ್ ಆಪರೇಷನ್ ಪ್ರಕರಣಕ್ಕೆ ತೆರೆ ಅಗತ್ಯ: ಬಿ.ಕೆ.ಹರಿಪ್ರಸಾದ್ ಒತ್ತಾಯ - ಪು.4

ಮಹಾತ್ಮರಿಗೆ ಶುದ್ಧ ಮನಸ್ಸಿನಿಂದ ಸಮರ್ಪಿಸಿದ್ದು ಹತ್ತಾಗಿ ಮರಳುತ್ತದೆ: ರಾಘವೇಶ್ವರ ಭಾರತೀ ಅಭಿಮತ - ಪು.5

ರೇಣುಕಾಸ್ವಾಮಿ ಹತ್ಯೆ ಪ್ರಕರಣ: ಮಾಫಿ ಸಾಕ್ಷಿ ಕೋರಿ ಸಲ್ಲಿಸಿದ್ದ ಅರ್ಜಿ ಹಿಂಪಡೆದ 10ನೇ ಆರೋಪಿ ವಿನಯ್ - ಪು.6

# ಕರ್ನಾಟಕದ ಇತರ ಜಿಲ್ಲೆಗಳಲ್ಲೂ ಹೂಡಿಕೆ ಮಾಡಿ: ಸಿಎಂ ಮನವಿ

**ಝೆಕ್ ಉಪಪ್ರಧಾನಿ ಕಾರೆಲ್ ಹಾವ್ಲಿಕ್ ನೇತೃತ್ವದ ನಿಯೋಗದಿಂದ ಸಿಎಂ ಡಿ.ಕೆ. ಶಿವಕುಮಾರ್ ಭೇಟಿ**

**ಆಟೋಮೊಬೈಲ್, ಭವಿಷ್ಯದ ಸಂಚಾರ, ಬಾಹ್ಯಾಕಾಶ, ರಕ್ಷಣಾ ಕ್ಷೇತ್ರಗಳಲ್ಲಿ ಹೂಡಿಕೆ ಚರ್ಚೆ**



ಬೆಂಗಳೂರು, ಅ.14 ಕರ್ನಾಟಕವು ಝೆಕ್ ಗಣರಾಜ್ಯದ ದೀರ್ಘಾವಧಿ ಪಾಲುದಾರನಾಗಲಿದ್ದು, ಝೆಕ್ ಕಂಪನಿಗಳು ಕೇವಲ ಬೆಂಗಳೂರಿಗೆ ಸೀಮಿತವಾಗದೆ ಕರ್ನಾಟಕದ ವಿವಿಧ ಜಿಲ್ಲೆಗಳಲ್ಲಿ ಹೂಡಿಕೆ ಮಾಡಬೇಕು" ಎಂದು ಸಿಎಂ ಡಿ.ಕೆ.ಶಿವಕುಮಾರ್ ಮನವಿ ಮಾಡಿದ್ದಾರೆ.

ಝೆಕ್ ಗಣರಾಜ್ಯದ ಉಪ ಪ್ರಧಾನಮಂತ್ರಿ ಕಾರೆಲ್ ಹಾವ್ಲಿಕ್ ಅವರ ನೇತೃತ್ವದ ನಿಯೋಗವು ಸಿಎಂ ಡಿ.ಕೆ.ಶಿವಕುಮಾರ್ ಅವರನ್ನು ವಿಧಾನಸೌಧ ದಲ್ಲಿ ಬುಧವಾರ ಭೇಟಿ ಮಾಡಿ ಸಮಾಲೋಚನೆ ನಡೆಸಿತು. ಈ ವೇಳೆ ನಿಯೋಗವನ್ನು ಉದ್ದೇಶಿಸಿ ಮಾತನಾಡಿದ ಶಿವಕುಮಾರ್ ಅವರು, "ಕೃಷಿ, ಅರಣ್ಯ, ತೋಟಗಾರಿಕೆ ಮತ್ತು ಪುಷ್ಪಕೃಷಿಯ ವಿಷಯದಲ್ಲಿ ನಾವು ಅತ್ಯಂತ ಮುಂದುವರಿದ ರಾಜ್ಯಗಳಲ್ಲಿ ಒಂದಾಗಿದ್ದೇವೆ. ಕರ್ನಾಟಕವನ್ನು ಒಂದು ಸಂಭಾವ್ಯ ಹೂಡಿಕೆ ತಾಣವಾಗಿ ಪರಿಗಣಿಸುವಂತೆ" ಸಲಹೆ ನೀಡಿದರು.

**ಇಂಧನ ಕ್ಷೇತ್ರದಲ್ಲಿ ಹೂಡಿಕೆಗೆ ಕರ್ನಾಟಕದಲ್ಲಿ ಅಪಾರ ಅವಕಾಶಗಳಿವೆ**

"ಕರ್ನಾಟಕವು ದೇಶದ ಕೆಲವು ಅತಿದೊಡ್ಡ ಸೌರವಿದ್ಯುತ್ ಸ್ಥಾವರಗಳು, ಅತ್ಯಂತ ಹಳೆಯ ಜಲವಿದ್ಯುತ್ ಸ್ಥಾವರಗಳಿಗೆ ನೆಲೆಯಾಗಿದೆ. ಬೃಹತ್ ಇಂಧನ ಅಗತ್ಯಗಳನ್ನು ಹೊಂದಿರುವ ರಾಜ್ಯವಾಗಿದೆ. ಆದ್ದರಿಂದ ರಾಜ್ಯದ ಇಂಧನ ಕ್ಷೇತ್ರದಲ್ಲಿ ಹೂಡಿಕೆಗೆ ಅಪಾರ ಅವಕಾಶಗಳಿವೆ. ಕರ್ನಾಟಕವನ್ನು ಹೂಡಿಕೆಯ ತಾಣವಾಗಿ ಪರಿಶೀಲಿಸಲು ನಾವು ಆಹ್ವಾನಿಸಲು ಬಯಸುತ್ತೇವೆ" ಎಂದು ತಿಳಿಸಿದರು.

ಮೋಟಾರು ವಾಹನ ಬಿಡಿಭಾಗಗಳು, ವಿದ್ಯುತ್ ಮತ್ತು ಮುಂದಿನ ಪೀಳಿಗೆಯ ವಾಹನಗಳು, ಪರೀಕ್ಷೆ ಮತ್ತು ವಿಶೇಷ ಉತ್ಪಾದನೆಯಲ್ಲಿ ಸಹಕಾರವನ್ನು ನೀವು ಕರ್ನಾಟಕ ರಾಜ್ಯದಲ್ಲಿ ಅನ್ವೇಷಣೆ ಮಾಡಬಹುದು. ವೈಮಾಂತರಿಕ್ಷ ಕ್ಷೇತ್ರದಲ್ಲಿ ಹೂಡಿಕೆಗೆ ಮುಂದಾಗಿರುವ ಮಾಹಿತಿ ನನಗೆ ನೀಡಲಾಗಿದೆ. ಈ ಪಾಲುದಾರಿಕೆಯು ಕರ್ನಾಟಕ ಮತ್ತು ಚೆಕ್ ಗಣರಾಜ್ಯದ ನಡುವೆ ಹೆಚ್ಚಿನ ಸಹಕಾರದ ಹಾದಿಗಳನ್ನು ತೆರೆಯುತ್ತದೆ" ಎಂದು ತಿಳಿಸಿದರು.

ಕರ್ನಾಟಕ ಸರ್ಕಾರವು ಇನ್ವೆಸ್ಟ್ ಕರ್ನಾಟಕ ಕರ್ನಾಟಕ ಉದ್ಯೋಗ ಮಿತ್ರ, ಕೆಐಎಡಿಬಿ ಮತ್ತು ರಾಜ್ಯದ ಏಕಗವಾಕ್ಷಿ ವ್ಯವಸ್ಥೆಯ ಮೂಲಕ, ಆಸಕ್ತ ಕಂಪನಿಗಳಿಗೆ ಸೂಕ್ತ ಸ್ಥಳಗಳನ್ನು ಮೌಲ್ಯಮಾಪನ ಮಾಡಲು, ಅನ್ವಯಿಸುವ ಅನುಮೋದನೆಗಳನ್ನು ಅರ್ಥಮಾಡಿಕೊಳ್ಳಲು ಮತ್ತು ಸಂಬಂಧಿತ ಇಲಾಖೆಗಳೊಂದಿಗೆ ಸಂಪರ್ಕ ಸಾಧಿಸಲು ಸಹಾಯ ಮಾಡುತ್ತಿದೆ" ಎಂದು ವಿವರಿಸಿದರು.

"ತಂತ್ರಜ್ಞಾನವನ್ನು ತರುವ, ಸ್ಥಳೀಯ ಉದ್ಯಮವನ್ನು ಬಲಪಡಿಸುವ, ಗುಣಮಟ್ಟದ ಉದ್ಯೋಗವನ್ನು ಸೃಷ್ಟಿಸುವ ಮತ್ತು ರಫ್ತಿಗೆ ಬೆಂಬಲ ನೀಡುವ ಹೂಡಿಕೆಯನ್ನು ಆಕರ್ಷಿಸುವುದು ನಮ್ಮ ಆದ್ಯತೆಯಾಗಿದೆ. ಝೆಕ್ ಉದ್ಯಮ ಸಮುದಾಯ, ಝೆಕ್ ಟ್ರೇಡ್ ಗಳು ಕರ್ನಾಟಕ ಸರ್ಕಾರದ ನಡುವೆ ಸಂಪರ್ಕ ಸೇತುವೆಯಾಗಲಿವೆ" ಎಂದು ಭರವಸೆ ವ್ಯಕ್ತಪಡಿಸಿದರು.

"ಝೆಕ್ ಬಿಸಿನೆಸ್ ಇನ್‌ಕ್ಯುಬೇಟರ್ ಝೆಕ್ ಟ್ರೇಡ್‌ನ ಬೆಂಗಳೂರು ಕಚೇರಿ ಮತ್ತು ಝೆಕ್ ಇಂಡಸ್ಟ್ರಿಯಲ್ ಕ್ಲಸ್ಟರ್‌ಗಳು, ಉದ್ಯಮ ಸಂಬಂಧ ಗಳನ್ನು ಬೆಳೆಸಿ, ಸ್ಥಳೀಯ ಪಾಲುದಾರರನ್ನು ಗುರುತಿಸಲು ಮತ್ತು ಝೆಕ್ ಕಂಪನಿಗಳಿಗೆ ಕರ್ನಾಟಕದಲ್ಲಿರುವ ಅವಕಾಶಗಳನ್ನು ಅರ್ಥಮಾಡಿ ಕೊಳ್ಳಲು ಉಪಯುಕ್ತ ಅಡಿಪಾಯ ಒದಗಿಸುತ್ತವೆ" ಎಂದರು. "ಬೆಂಗಳೂರು ಭಾರತದ ತಂತ್ರಜ್ಞಾನ, ಸಂಶೋಧನೆ ಮತ್ತು ಉದ್ಯಮಶೀಲತೆಯ ಪ್ರಮುಖ ಕೇಂದ್ರಗಳಲ್ಲಿ ಒಂದಾಗಿದೆ. ಇಲ್ಲಿನ ಎಂಜಿನಿಯರಿಂಗ್ ಪ್ರತಿಭೆ, ಕೈಗಾರಿಕಾ ಅಡಿಪಾಯ ಮತ್ತು ಸ್ಟಾರ್ಟ್‌ಅಪ್ ವ್ಯವಸ್ಥೆ ಇದೆ. ಭಾರತದಲ್ಲಿ ವಿಸ್ತರಿಸಲು ಬಯಸುವ ಝೆಕ್ ಕಂಪನಿಗಳಿಗೆ ಕರ್ನಾಟಕವನ್ನು ಬಲವಾದ ವೇದಿಕೆಯಾಗಲಿದೆ. ಝೆಕ್ ಗಣರಾಜ್ಯವು ನಿಖರ ಎಂಜಿನಿಯರಿಂಗ್ ಯಂತ್ರೋಪಕರಣಗಳು, ಆಟೋಮೊಬೈಲ್ ಬಿಡಿಭಾಗಗಳು, ಕೈಗಾರಿಕಾ ಯಂತ್ರೋಪಕರಣಗಳು, ಸಾರಿಗೆ ತಂತ್ರಜ್ಞಾನಗಳು ಮತ್ತು ಅನ್ವಯಿಕ ಸಂಶೋಧನೆಯಲ್ಲಿ ಗಣನೀಯ ಸಾಮರ್ಥ್ಯಗಳನ್ನು ಹೊಂದಿದೆ. ಈ ಸಾಮರ್ಥ್ಯಗಳು ಕರ್ನಾಟಕದ ಉತ್ಪಾದನೆ, ವೈಮಾಂತರಿಕ್ಷ ಎಲೆಕ್ಟ್ರಾನಿಕ್ಸ್ ಮತ್ತು ತಂತ್ರಜ್ಞಾನ ಕ್ಷೇತ್ರಗಳಿಗೆ ಪೂರಕವಾಗಿವೆ" ಎಂದು ಸಿಎಂ ಅಭಿಪ್ರಾಯಪಟ್ಟರು.

## ಜ್ಞಾನೇಶ್ ಕುಮಾರ್ ರಾಜೀನಾಮೆತನಕ ಹೋರಾಟ ನಿಲ್ಲದು




**ನವರಾತ್ರಿ ಬಳಿಕ ಬೃಹತ್ ಪ್ರತಿಭಟನೆಗೆ ಇಂಡಿಯಾ ಒಕ್ಕೂಟ ಸಿದ್ಧತೆ**

**ತಾಲೂಕು, ಜಿಲ್ಲಾ ಮಟ್ಟದಲ್ಲೂ ಹೋರಾಟ ತೀವ್ರಗೊಳಿಸಲು ನಿರ್ಧಾರ**

ನವದೆಹಲಿ, ಅ.14: ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ರಾಜೀನಾಮೆ ನೀಡುವವರೆಗೂ ಹಾಗೂ ಮತದಾರರ ಪಟ್ಟಿ ವಿಶೇಷ ತೀವ್ರ ಪರಿಷ್ಕರಣೆ ಪ್ರಕ್ರಿಯೆ ಕುರಿತು ತಮ್ಮ ಬೇಡಿಕೆಗಳಿಗೆ ಸ್ಪಷ್ಟ ಪರಿಹಾರ ಸಿಗುವವರೆಗೂ ಹೋರಾಟ ಮುಂದುವರಿಸಲು ಇಂಡಿಯಾ ಒಕ್ಕೂಟ ನಿರ್ಧರಿಸಿದೆ.

ನವರಾತ್ರಿ ಬಳಿಕ ರಾಷ್ಟ್ರವ್ಯಾಪಿ ಬೃಹತ್ ಪ್ರತಿಭಟನೆ ನಡೆಸುವ ಸಾಧ್ಯತೆಯಿದ್ದು, ಹೋರಾಟವನ್ನು ತಾಲೂಕು ಮತ್ತು ಜಿಲ್ಲಾಮಟ್ಟಕ್ಕೆ ವಿಸ್ತರಿಸಿ ಜನಸಾಮಾನ್ಯರನ್ನು ಹೆಚ್ಚಿನ ಸಂಖ್ಯೆಯಲ್ಲಿ ತೊಡಗಿಸಿಕೊಳ್ಳಲು ಪ್ರತಿಪಕ್ಷಗಳು ಕಾರ್ಯತಂತ್ರ ರೂಪಿಸಿವೆ.

ಇಂಡಿಯಾ ಒಕ್ಕೂಟದ ಸಂಸದರು ಹಾಗೂ ವಿವಿಧ ಪಕ್ಷಗಳ ನಾಯಕರ ಸಭೆಯಲ್ಲಿ ಮುಂದಿನ ಹೋರಾಟದ ರೂಪು–ರೇಷೆಗಳ ಕುರಿತು ಚರ್ಚೆ ನಡೆದಿದೆ. ಪ್ರಸ್ತುತ ರಾಜಕೀಯ ಪರಿಸ್ಥಿತಿ ಮತ್ತು ಪ್ರತಿಭಟನೆಗೆ ದೊರೆಯುವ ಬೆಂಬಲವನ್ನು ಗಮನದಲ್ಲಿಟ್ಟುಕೊಂಡು ಮುಂದಿನ ಹಂತದ ಹೋರಾಟದ ದಿನಾಂಕ ಹಾಗೂ ಸ್ವರೂಪವನ್ನು ಅಂತಿಮಗೊಳಿಸಲು ನಿರ್ಧರಿಸಲಾಗಿದೆ. ಈ ನಡುವೆ ಯಾವುದೇ ಕ್ಷಣದಲ್ಲಿ ಬೃಹತ್ ಪ್ರತಿಭಟನೆಗೆ ಕರೆ ನೀಡುವ ಸಾಧ್ಯತೆಯಿರುವುದರಿಂದ ನಾಯಕರು ಸಿದ್ಧರಾಗಿರುವಂತೆ ಸೂಚಿಸಲಾಗಿದೆ. ಒಕ್ಕೂಟದ ನಾಯಕರು ತಮ್ಮೊಳಗೆ ಒಗ್ಗಟ್ಟು ಕಾಯ್ದುಕೊಂಡು ಹೋರಾಟ ಮುಂದುವರಿಸುವ ಸಂಕಲ್ಪ ವ್ಯಕ್ತಪಡಿಸಿದ್ದಾರೆ. ಎಸ್‌ಐಆರ್ ಪ್ರಕ್ರಿಯೆ ಕುರಿತು ತಮಗೆ ತೃಪ್ತಿಕರವಾದ ನಿರ್ಧಾರ ದೊರೆಯುವವರೆಗೆ ಪ್ರತಿಭಟನೆಯಿಂದ ಹಿಂದೆ ಸರಿಯುವುದಿಲ್ಲ ಎಂಬ ಸಂದೇಶವನ್ನು ನೀಡಿದ್ದಾರೆ.

# ಬರ ಪರಿಹಾರ: ಕೇಂದ್ರಕ್ಕೆ ಅಂತಿಮ ಮನವಿ ಸಲ್ಲಿಸಲು ಸಿದ್ಧತೆ

## ಇನ್ನೊಂದು ವಾರದಲ್ಲಿ ಪ್ರಕ್ರಿಯೆ ಪೂರ್ಣ: ಡಿಸಿಎಂ ಪರಮೇಶ್ವರ್



ಬೆಂಗಳೂರು, ಅ.14: ರಾಜ್ಯದಲ್ಲಿ ಬರದಿಂದ ಉಂಟಾಗಿರುವ ನಷ್ಟದ ಕುರಿತು ಪರಿಹಾರ ಪಡೆಯಲು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲು ಅಂತಿಮ ಮನವಿ ಸಿದ್ಧಪಡಿಸ ಲಾಗುತ್ತಿದ್ದು, ಬಹುಶಃ ಇನ್ನೊಂದು ವಾರದಲ್ಲಿ ಈ ಪ್ರಕ್ರಿಯೆ ಪೂರ್ಣಗೊಳ್ಳಲಿದೆ ಎಂದು ಉಪಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ. ಜಿ. ಪರಮೇಶ್ವರ್ ತಿಳಿಸಿದರು.

ಸದಾಶಿವನಗರದ ತಮ್ಮ ನಿವಾಸದ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇಂದು ಮತ್ತೆ 9 ತಾಲ್ಲೂಕುಗಳನ್ನು ಬರಪೀಡಿತ ತಾಲೂಕುಗಳೆಂದು ಘೋಷಿಸ ಲಾಗುತ್ತಿದ್ದು, ಈ ಮೂಲಕ ಬರಪೀಡಿತ ತಾಲ್ಲೂಕುಗಳ ಸಂಖ್ಯೆ 226ಕ್ಕೆ ಏರಿಕೆಯಾಗಲಿದೆ. ಈ ತಾಲೂಕುಗಳಲ್ಲಿ ಗ್ರೌಂಡ್ ಟ್ರೂಥಿಂಗ್ ಪ್ರಕ್ರಿಯೆ ಪೂರ್ಣಗೊಂಡಿದೆ. ಇನ್ನುಳಿದ ಕೆಲವು ತಾಲೂಕುಗಳಲ್ಲಿ ಟ್ರಿಗರ್–1 ಮಾನದಂಡಗಳ ಪರಿಶೀಲನೆ ನಡೆಯುತ್ತಿದೆ. ಅವುಗಳು ಅರ್ಹತೆ ಪಡೆದರೆ ಗ್ರೌಂಡ್ ಟ್ರೂಥಿಂಗ್‌ಗೆ ಕಳುಹಿಸಲಾಗುವುದು ಎಂದು ಹೇಳಿದರು.

ರಾಜ್ಯದಲ್ಲಿ ಬರದಿಂದ ಉಂಟಾಗಿರುವ ಒಟ್ಟು ನಷ್ಟದ ಅಂದಾಜು ಅಂತಿಮ ಮನವಿಪತ್ರ ಸಿದ್ಧಪಡಿಸುವ ಸಂದರ್ಭದಲ್ಲಿ ಸ್ಪಷ್ಟವಾಗಲಿದೆ. ಅದರ ಪ್ರಮಾಣಕ್ಕೆ ಅನುಗುಣವಾಗಿ ಎನ್‌ಡಿಆರ್‌ಎಫ್ ಮಾರ್ಗಸೂಚಿಗಳ ಪ್ರಕಾರ ಪರಿಹಾರದ ಮೊತ್ತವನ್ನು ಲೆಕ್ಕಹಾಕಲಾಗುವುದು. ಕಳೆದ ವರ್ಷ 18 ಸಾವಿರ ಕೋಟಿ ಪರಿಹಾರ ಕೋರಲಾಗಿತ್ತು. ಈ ಬಾರಿ ಇಡೀ ರಾಜ್ಯದಲ್ಲಿ ನಷ್ಟ ಸಂಭವಿಸಿದ್ದು, ಇನ್ನಷ್ಟು ತಾಲೂಕುಗಳು ಅರ್ಹತೆ ಪಡೆದರೆ ನಷ್ಟದ ಪ್ರಮಾಣ ಮತ್ತಷ್ಟು ಹೆಚ್ಚಾಗಲಿದೆ. ಹೀಗಾಗಿ, ಈ ಬಾರಿ ಕೇಂದ್ರದಿಂದ ಕೋರಲಾಗುವ ಪರಿಹಾರದ ಮೊತ್ತವೂ ಹೆಚ್ಚಾಗುವ ಸಾಧ್ಯತೆಯಿದೆ ಎಂದು ತಿಳಿಸಿದರು.

ಬರ ಪರಿಹಾರಕ್ಕೆ ಸಂಬಂಧಿಸಿದಂತೆ ಎನ್‌ಡಿಆರ್‌ಎಫ್ ಮಾರ್ಗಸೂಚಿಗಳನ್ನು ಸಡಿಲಗೊಳಿಸುವಂತೆ ರಾಜ್ಯ ಸರ್ಕಾರ ಕೇಂದ್ರಕ್ಕೆ ಮನವಿ ಸಲ್ಲಿಸಿದೆ. ಈ ಕುರಿತು ನಾನು ಮತ್ತು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಪತ್ರ ಬರೆದಿದ್ದೇವೆ. ಇದಕ್ಕೆ ಸಂಬಂಧಿಸಿದಂತೆ ನನಗೆ ಕೇಂದ್ರ ಕೃಷಿ ಸಚಿವರಿಂದ ಪತ್ರ ಬಂದಿದ್ದು, ವಿಷಯವನ್ನು ಪರಿಶೀಲಿಸುವುದಾಗಿ ತಿಳಿಸಿದ್ದಾರೆ. ಇದನ್ನು ಹೊರತುಪಡಿಸಿ ಕೇಂದ್ರದಿಂದ ಬೇರೆ ಯಾವುದೇ ಪ್ರತಿಕ್ರಿಯೆ ಬಂದಿಲ್ಲ ಎಂದು ಹೇಳಿದರು.

ಅಂತಿಮ ಮನವಿಪತ್ರ ಸಿದ್ಧವಾದ ಬಳಿಕ ಮುಖ್ಯಮಂತ್ರಿ, ನಾನು ಹಾಗೂ ಇತರರನ್ನು ಒಳಗೊಂಡ ನಿಯೋಗ ದೆಹಲಿ ಭೇಟಿಯ ಕುರಿತು ಅಂತಿಮ ನಿರ್ಧಾರ ಕೈಗೊಳ್ಳಲಾಗುವುದು. ನಿಯೋಗವು ಖುದ್ದಾಗಿ ದೆಹಲಿಗೆ ತೆರಳಿ ಕೇಂದ್ರ ಸರ್ಕಾರಕ್ಕೆ ಮೆಮೊರಾಂಡಮ್ ಸಲ್ಲಿಸಲಿದೆ. ನಷ್ಟದ ವಿವರವನ್ನು ಪ್ರಸ್ತಾಪಿಸಿ ಪರಿಹಾರಕ್ಕೆ ಕೋರಲಾಗುವುದು ಎಂದು ತಿಳಿಸಿದರು.

### ಹೊಸ 9 ತಾಲೂಕುಗಳು ಬರಪೀಡಿತ ಪಟ್ಟಿಗೆ

ಬೆಂಗಳೂರು, ಅ.14: ಕರ್ನಾಟಕದಲ್ಲಿ ಬರಪೀಡಿತ ತಾಲೂಕುಗಳ ಸಂಖ್ಯೆ 217ರಿಂದ 226ಕ್ಕೆ ಏರಿಕೆಯಾಗಿದೆ. ರಾಜ್ಯ ಸರ್ಕಾರವು ಹೊಸದಾಗಿ 9 ತಾಲೂಕುಗಳನ್ನು ಮಧ್ಯಮ ಬರಪೀಡಿತ ಪಟ್ಟಿಗೆ ಸೇರ್ಪಡೆ ಮಾಡಿದೆ. ಬೆಳಗಾವಿ ಜಿಲ್ಲೆಯ ಖಾನಾಪುರ, ಶಿವಮೊಗ್ಗ ಜಿಲ್ಲೆಯ ಹೊಸನಗರ ಮತ್ತು ಸಾಗರ, ದಕ್ಷಿಣ ಕನ್ನಡ ಜಿಲ್ಲೆಯ ಮೂಡುಬಿದಿರೆ, ಪುತ್ತೂರು ಮತ್ತು ಮುಲ್ಕಿ, ಉತ್ತರ ಕನ್ನಡ ಜಿಲ್ಲೆಯ ಜೋಯಿಡಾ ಮತ್ತು ದಾಂಡೇಲಿ ಸೇರಿದಂತೆ ತಾಲೂಕುಗಳನ್ನು ಬರಪೀಡಿತ ಎಂದು ಗುರುತಿಸಲಾಗಿದೆ.

### ಎಸ್‌ಸಿ/ಎಸ್‌ಟಿ ಮೀಸಲಾತಿ ಚರ್ಚೆ

ಎಸ್‌ಸಿ–ಎಸ್‌ಟಿ ಮೀಸಲಾತಿಗೆ ಸಂಬಂಧಿಸಿದಂತೆ ಹೈಕೋರ್ಟ್ ತೀರ್ಪು ವಿಚಾರವಾಗಿ ಗುರುವಾರ ನಡೆಯಲಿರುವ ಸಚಿವ ಸಂಪುಟ ಸಭೆಯಲ್ಲಿ ಪ್ರಸ್ತಾಪಿಸಿ ಚರ್ಚಿಸಲಾಗುವುದು. ಈ ವಿಚಾರದಲ್ಲಿ ಸುಪ್ರೀಂ ಕೋರ್ಟ್‌ಗೆ ಮೇಲನವಿ ಸಲ್ಲಿಸಬೇಕೇ ಅಥವಾ ಒಂಬತ್ತನೇ ಶೆಡ್ಯೂಲ್‌ಗೆ ಸೇರಿಸುವಂತೆ ಭಾರತ ಸರ್ಕಾರಕ್ಕೆ ಮನವಿ ಸಲ್ಲಿಸಬೇಕೇ ಎಂಬುದರ ಕುರಿತು ಸಂಪುಟದಲ್ಲಿ ಚರ್ಚಿಸಿ ತೀರ್ಮಾನ ಕೈಗೊಳ್ಳಬೇಕಿದೆ. ಸಚಿವ ಸಂಪುಟದ ನಿರ್ಧಾರದ ಬಳಿಕ ಮುಂದಿನ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಡಾ.ಜಿ. ಪರಮೇಶ್ವರ್ ಹೇಳಿದರು.



ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರು ಬೆಂಗಳೂರಿನ ಲೋಕಭವನದಲ್ಲಿ ನಿರ್ಗಮಿತ ರಾಜ್ಯಪಾಲ ಥಾವರ್‌ಚಂದ್ ಗೆಹ್ಲೋತಅವರನ್ನು ಬುಧವಾರ ಭೇಟಿಯಾಗಿ ಸರ್ಕಾರದ ಪರವಾಗಿ ಅವರಿಗೆ ಧನ್ಯವಾದ ತಿಳಿಸಿದರು. ಅವರ ಭವಿಷ್ಯದ ಬದುಕಿಗೆ ಶುಭ ಹಾರೈಸಿದರು.

# ಶಿವಮೊಗ್ಗ-ಶಿಕಾರಿಪುರ-ರಾಣೆಬೆನ್ನೂರು ರೈಲು ಯೋಜನೆಗೆ ಹೊಸ ಟೆಂಡರ್ ಕರೆಯಲು ನಿರ್ಧಾರ: ಕೇಂದ್ರ ಸಚಿವ ವಿ. ಸೋಮಣ್ಣ



**ಶಿವಮೊಗ್ಗ, ಅ.14:** ದೀರ್ಘಕಾಲದಿಂದ ಬಾಕಿ ಉಳಿದಿರುವ ಶಿವಮೊಗ್ಗ–ಶಿಕಾರಿಪುರ–ರಾಣೆಬೆನ್ನೂರು ರೈಲು ಯೋಜನೆಗೆ ಹೊಸ ಟೆಂಡರ್ ಕರೆಯಲು ನಿರ್ಧರಿಸಲಾಗಿದೆ. ಮುಂದಿನ ಎರಡು ತಿಂಗಳೊಳಗೆ ಈ ಪ್ರಕ್ರಿಯೆಯನ್ನು ಪ್ರಾರಂಭಿಸುವುದಾಗಿ ಕೇಂದ್ರ ರೈಲ್ವೆ ಮತ್ತು ಜಲಶಕ್ತಿ ಖಾತೆಯ ರಾಜ್ಯ ಸಚಿವ ವಿ. ಸೋಮಣ್ಣ ಪ್ರಕಟಿಸಿದ್ದಾರೆ.

ಶಿವಮೊಗ್ಗದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಗುತ್ತಿಗೆದಾರರ ಲೋಪದೋಷಗಳು ಮತ್ತು ವಿಳಂಬದ ಕಾರಣದಿಂದಾಗಿ ಈ ಹಿಂದಿನ ಟೆಂಡರ್ ರದ್ದುಗೊಳಿಸಿದ ನಂತರ ಈ ಕ್ರಮ ಕೈಗೊಳ್ಳಲಾಗಿದೆ. ಪ್ರಸ್ತಾವಿತ ಕ್ರಮದ ಭಾಗವಾಗಿ ಹಿಂದಿನ ಗುತ್ತಿಗೆದಾರರನ್ನು ಕಪ್ಪು ಪಟ್ಟಿಗೆ ಸೇರಿಸಲಾಗುವುದು. ಹೊಸ ಟೆಂಡರ್ ಪ್ರಕ್ರಿಯೆಯು ಯೋಜನೆಯನ್ನು ತ್ವರಿತಗೊಳಿಸಲು ಸಹಾಯ ಮಾಡುತ್ತದೆ ಮತ್ತು ಈ ಪ್ರದೇಶದಲ್ಲಿ ರೈಲು ಸಂಪರ್ಕವನ್ನು ಬಲಪಡಿಸುತ್ತದೆ ಎಂದು ಭರವಸೆ ನೀಡಿದರು.

ಕರ್ನಾಟಕದಲ್ಲಿ ಕೊಂಕಣ ರೈಲ್ವೆ ಮತ್ತು ಇತರ ರೈಲ್ವೆ ಯೋಜನೆಗಳ ನಿರಂತರ ಅಭಿವೃದ್ಧಿಗಾಗಿ ಕೇಂದ್ರ ಸರ್ಕಾರವು 9,000 ಕೋಟಿ ರೂ.ಗಳನ್ನು ಮಂಜೂರು ಮಾಡಿದೆ ಎಂದು ಸಚಿವರು ಘೋಷಿಸಿದರು. ರಾಜ್ಯಾದ್ಯಂತ ಸುಮಾರು 52,000 ಕೋಟಿ ರೂ. ಮೌಲ್ಯದ ರೈಲ್ವೆ ಮೂಲಸೌಕರ್ಯ ಕಾಮಗಾರಿಗಳು ಪ್ರಸ್ತುತ ನಡೆಯುತ್ತಿವೆ ಎಂದು ಅವರು ತಿಳಿಸಿದರು.

ಶಿವಮೊಗ್ಗ–ಬೀರೂರು ರೈಲು ಜೋಡಿಮಾರ್ಗದ ಕಾಮಗಾರಿಯು ಪ್ರಸ್ತುತ ಸಮೀಕ್ಷೆಯ ಹಂತದಲ್ಲಿದೆ. ಅದೇ ಸಮಯದಲ್ಲಿ, ಪ್ರಸ್ತಾವಿತ ತಳಗುಪ್ಪ–ಹೊನ್ನಾವರ ರೈಲು ಮಾರ್ಗದ ಯೋಜನಾ ವೆಚ್ಚವು ಅಂದಾಜು 1,511 ಕೋಟಿ ರೂ.ಗಳಷ್ಟಿದೆ. ಮಂಗಳೂರು, ಉಡುಪಿ ಮತ್ತು ಶಿವಮೊಗ್ಗದಲ್ಲಿ ರೈಲು ಸಂಪರ್ಕವನ್ನು ವಿಸ್ತರಿಸುವ ಕುರಿತಾದ ಚರ್ಚೆಗಳು ಹಾಗೂ ಶೃಂಗೇರಿ ಪ್ರದೇಶದ ಮೂಲಕ ಹೊಸ ಮಾರ್ಗದ ಪ್ರಸ್ತಾವನೆಗಳ ಬಗ್ಗೆಯೂ ಸಚಿವರು ಪ್ರಸ್ತಾಪಿಸಿದರು.

# ಕಾಶಿ ದೇವಾಲಯದಲ್ಲಿ ಚಿನ್ನ ಕಣ್ಮರೆ: ಪಿಎಂಒಗೆ ಪತ್ರ

**ನವದೆಹಲಿ, ಅ.14:** ಅಯೋಧ್ಯೆಯ ರಾಮಮಂದಿರದ ಕಾಣಿಕೆಯಲ್ಲಿ ದುರ್ಬಳಕೆಯಾಗಿದೆ ಎಂಬ ಆರೋಪದ ಮೇಲೆ ನ್ಯಾಯಾಲಯ ಚಾರ್ಜ್‌ಶೀಟ್ ಸಲ್ಲಿಸಿದ ಕೆಲವೇ ದಿನಗಳಲ್ಲಿ, ಪ್ರಧಾನಿ ನರೇಂದ್ರ ಮೋದಿ ಪ್ರತಿನಿಧಿಸುವ ಲೋಕಸಭಾ ಕ್ಷೇತ್ರವಾದ ವಾರಣಾಸಿಯ ಪ್ರಸಿದ್ಧ ಕಾಶಿ ವಿಶ್ವನಾಥ ದೇವಾಲಯದಲ್ಲಿ ಚಿನ್ನ ಕಣ್ಮರೆ ಆರೋಪ ಕೇಳಿಬಂದಿದೆ. ವಾರಣಾಸಿಯ ವಕೀಲ ಹಾಗೂ ವಕೀಲರ ಸಂಘದ (ಬಾರ್ ಅಸೋಸಿ ಯೇಷನ್) ಮಾಜಿ ಪ್ರಧಾನಕಾರ್ಯದರ್ಶಿ ನಿತ್ಯಾನಂದ ರೈ ಅವರು ಈ ಕುರಿತು ಪ್ರಧಾನ ಮಂತ್ರಿಗಳ ಕಚೇರಿಗೆ (ಪಿಎಂಒ) ಪತ್ರ ಬರೆದಿದ್ದಾರೆ. ದೇವಾಲಯದ ಶಿಖರ ಸೇರಿದಂತೆ ಹಲವು ಕಡೆಗಳಿಂದ ಚಿನ್ನ ಕಣ್ಮರೆಯಾಗಿದೆ ಮತ್ತು ಈ ವಿಷಯವನ್ನು ಮುಚ್ಚಿಹಾಕುವ ಉದ್ದೇಶದಿಂದ ದೇವಾಲಯದ ಆಡಳಿತ ಮಂಡಳಿಯು ಆ ಜಾಗಗಳಿಗೆ ಬಣ್ಣ ಬಳಿದಿದೆ ಎಂದು ಆರೋಪಿಸಿದ್ದಾರೆ.

ವಾರಣಾಸಿಯಲ್ಲಿ ಮಾಧ್ಯಮ ಗಳೊಂದಿಗೆ ಮಾತನಾಡಿದ ರಾಯ್, ಈ ವಿಷಯವಾಗಿ ಪ್ರಶ್ನೆಗಳಿಗೆ ಉತ್ತರ ಬಯಸಿ ಕಳೆದ ತಿಂಗಳು ವಾರಣಾಸಿಯ ಆಯುಕ್ತರು, ಜಿಲ್ಲಾಧಿಕಾರಿ, ಮುಖ್ಯಮಂತ್ರಿಗಳ ಕಚೇರಿ ಹಾಗೂ ಪ್ರಧಾನಿ ಕಚೇರಿಗೆ ಪತ್ರ ಬರೆದಿರುವುದಾಗಿ ತಿಳಿಸಿದ್ದಾರೆ. ಆದರೆ, ಪ್ರಧಾನ ಮಂತ್ರಿಗಳ ಕಚೇರಿಯನ್ನು ಹೊರತುಪಡಿಸಿ ಮತ್ತಾವ ಕಚೇರಿಯೂ ಇದಕ್ಕೆ ಪ್ರತಿಕ್ರಿಯಿಸಲಿಲ್ಲ. ಪಿಎಂಒ ತಮ್ಮ ದೂರನ್ನು ಪರಿಗಣಿಸಿದ್ದು, ವಿವರ ಪಡೆಯಲು ತಮ್ಮನ್ನು ಸಂಪರ್ಕಿಸಿತ್ತು ಎಂದು ಅವರು ಹೇಳಿದ್ದಾರೆ.

ದೇವಾಲಯದ ಉತ್ತರ ಭಾಗದ ಮೇಲ್ಭಾಗದ ಎರಡು ಸ್ಥಳಗಳಿಂದ ಸ್ವರ್ಣಕಲಶ (ಚಿನ್ನದ ಕಲಶ) ಕಣ್ಮರೆಯಾಗಿದೆ ಎಂದು ರೈ ಆರೋಪಿಸಿದ್ದಾರೆ.

ಇದು ಗಂಭೀರ ವಿಷಯವಾಗಿದ್ದು, ಸಮಗ್ರ ತನಿಖೆ ನಡೆಯಬೇಕಿದೆ ಎಂದು ಮಾತನಾಡಿ ದ್ದಾರೆ. ಜೊತೆಗೆ ದೇವಾಲಯದ ಯಾವ ಭಾಗಗಳಲ್ಲಿ ಚಿನ್ನ ಮತ್ತು ಬೆಳ್ಳಿಯನ್ನು ಬಳಸಲಾಗಿದೆ ಎಂಬ ವಿವರಗಳನ್ನು ಒಳಗೊಂಡ ಶ್ವೇತಪತ್ರವನ್ನು ಆಡಳಿತ ಮಂಡಳಿ ಹೊರಡಿಸಬೇಕು ಮತ್ತು ಅದನ್ನು ದೇವಾಲಯದ ಅಧಿಕೃತ ವೆಬ್‌ಸೈಟ್‌ನಲ್ಲಿ ಹಂಚಿಕೊಳ್ಳಬೇಕು ಎಂದು ಆಗ್ರಹಿಸಿದ್ದಾರೆ.

### ದೇವಾಲಯದ ಅಧಿಕಾರಿ ಸ್ಪಷ್ಟನೆ

ದೇವಾಲಯದ ಹಿರಿಯ ಅಧಿಕಾರಿಯೊಬ್ಬರು ಈ ಆರೋಪಗಳನ್ನು ತಳ್ಳಿಹಾಕಿದ್ದು, ಅವು ಸುಳ್ಳು ಮತ್ತು 'ಆಧಾರರಹಿತ' ಎಂದು ಸ್ಪಷ್ಟಪಡಿಸಿದ್ದಾರೆ. ಈ ಕುರಿತು ವಾರಾಣಸಿಯ ಆಯುಕ್ತ ಎಸ್. ರಾಜಲಿಂಗಂ, ಸುಮಾರು 3 ತಿಂಗಳ ಹಿಂದೆ ಸುರಿದ ಆಲಿಕಲ್ಲು ಮಳೆಯ ಸಮಯದಲ್ಲಿ ದೇವಾಲಯದ ಪ್ರವೇಶದ್ವಾರದ ನೇರ ಮೇಲ್ಭಾಗದಲ್ಲಿದ್ದ ಗುಮ್ಮಟದ ಒಂದು ಭಾಗ ಕುಸಿದಿತ್ತು ಹಾಗೂ ಅದನ್ನು ದೇವಾಲಯದ ಆಡಳಿತ ಮಂಡಳಿಯ ಸುರಕ್ಷಿತ ವಶದಲ್ಲಿ ಇಡಲಾಗಿದೆ ಎಂದು ತಿಳಿಸಿದ್ದಾರೆ. ದೇವಾಲಯದ ಶಿಖರದ ರಚನಾತ್ಮಕ ಸ್ಥಿರತೆ ಮತ್ತು ಸುರಕ್ಷತೆಯನ್ನು ಪರೀಕ್ಷಿಸಲು ತಾಂತ್ರಿಕ ಅಧ್ಯಯನ ನಡೆಸುವಂತೆ ಐಐಟಿ–ಮದ್ರಾಸ್ ಸಂಸ್ಥೆಗೆ ಜವಾಬ್ದಾರಿ ವಹಿಸಲಾಗಿದ್ದು, ಅವರ ಶಿಫಾರಸುಗಳಿಗೆ ಅನುಗುಣವಾಗಿ ದುರಸ್ತಿ ಕಾರ್ಯವನ್ನು ಕೈಗೊಳ್ಳಲಾಗುವುದು ಎಂದು ವಿವರಿಸಿದ್ದಾರೆ.

# ಶೃಂಗೇರಿ ಮರುಮತ ಎಣಿಕೆ ಪ್ರಕರಣ: ಚುನಾವಣಾ ಆಯೋಗಕ್ಕೆ ಸುಪ್ರೀಂ ಕೋರ್ಟ್ ತರಾಟೆ



**2023ರ ಮೂಲ ವಿಡಿಯೋ ಹಾಜರುಪಡಿಸಲು ತಾಕೀತು; ದಾಖಲೆ ನೀಡದಿದ್ದರೆ ಪ್ರತಿಕೂಲ ಅಭಿಪ್ರಾಯ ದಾಖಲಿಸುವ ಎಚ್ಚರಿಕೆ**

**ನವದೆಹಲಿ, ಅ.14:** ಶೃಂಗೇರಿ ವಿಧಾನಸಭಾ ಕ್ಷೇತ್ರದ ಚುನಾವಣಾ ಫಲಿತಾಂಶದ ಮರುಮತ ಎಣಿಕೆ ಪ್ರಶ್ನಿಸಿ ಶಾಸಕ ರಾಜೇಗೌಡ ಸಲ್ಲಿಸಿರುವ ಅರ್ಜಿಯ ವಿಚಾರಣೆ ವೇಳೆ ಸುಪ್ರೀಂ ಕೋರ್ಟ್ ಚುನಾವಣಾ ಆಯೋಗವನ್ನು ತೀವ್ರ ತರಾಟೆಗೆ ತೆಗೆದುಕೊಂಡಿದೆ.

2023ರ ವಿಧಾನಸಭಾ ಚುನಾವಣೆಯ ಮತ ಎಣಿಕೆಯ ಮೂಲ ವಿಡಿಯೋವನ್ನು ನ್ಯಾಯಾಲಯಕ್ಕೆ ಹಾಜರುಪಡಿಸುವಂತೆ ತಾಕೀತು ಮಾಡಿರುವ ಪೀಠ, ಅಗತ್ಯ ದಾಖಲೆಗಳನ್ನು ಸಲ್ಲಿಸದಿದ್ದರೆ ಚುನಾವಣಾ ಆಯೋಗದ ವಿರುದ್ಧ ಪ್ರತಿಕೂಲ ಅಭಿಪ್ರಾಯ ದಾಖಲಿಸಬೇಕಾಗುತ್ತದೆ ಎಂದು ಎಚ್ಚರಿಸಿದೆ.

ನ್ಯಾಯಮೂರ್ತಿ ಸಂಜಯ್ ಕುಮಾರ್ ನೇತೃತ್ವದ ಪೀಠದ ಮುಂದೆ ಪ್ರಕರಣದ ವಿಚಾರಣೆ ನಡೆಯಿತು. ಈ ವೇಳೆ ಮರುಮತ ಎಣಿಕೆಯ ವಿಡಿಯೋವನ್ನು ಒದಗಿಸಲಾಗಿದ್ದರೂ, 2023ರ ಮೂಲ ಮತ ಎಣಿಕೆಯ ವಿಡಿಯೋ ಲಭ್ಯವಾಗುತ್ತಿಲ್ಲ ಎಂದು ಚುನಾವಣಾ ಆಯೋಗದ ಪರವಾಗಿ ತಿಳಿಸಲಾಯಿತು.

**ಮೂಲ ವಿಡಿಯೋ ಎಲ್ಲಿ?** ಮೂಲ ವಿಡಿಯೋ ಲಭ್ಯವಿಲ್ಲ ಎಂಬ ಚುನಾವಣಾ ಆಯೋಗದ ಹೇಳಿಕೆಗೆ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ನ್ಯಾಯಪೀಠ, ಮೂಲ ವಿಡಿಯೋವನ್ನು ಹಾಜರುಪಡಿಸುವುದು ಹೇಗೆ ಸಾಧ್ಯವಿಲ್ಲ ಎಂದು ಪ್ರಶ್ನಿಸಿತು. ಸಂಬಂಧಪಟ್ಟ ಅಧಿಕಾರಿಗಳು ವರ್ಗಾವಣೆಯಾಗಿರು ವುದರಿಂದ ದಾಖಲೆಗಳನ್ನು ಒದಗಿಸುವುದು ಕಷ್ಟವಾಗುತ್ತಿದೆ ಎಂಬ ಆಯೋಗದ ವಾದವನ್ನು ಪೀಠ ಒಪ್ಪಲಿಲ್ಲ.

ಅಧಿಕಾರಿಗಳು ವರ್ಗಾವಣೆಯಾಗಿದ್ದಾರೆ ಎಂಬ ಕಾರಣಕ್ಕೆ ಮಹತ್ವದ ಚುನಾವಣಾ ದಾಖಲೆಗಳು ಲಭ್ಯವಾಗದಿರುವುದನ್ನು ಸಹಿಸಲು ಸಾಧ್ಯವಿಲ್ಲ ಎಂದು ನ್ಯಾಯಪೀಠ ಸ್ಪಷ್ಟಪಡಿಸಿತು. ಪ್ರಕರಣಕ್ಕೆ ಸಂಬಂಧಿಸಿದ ಎಲ್ಲ ದಾಖಲೆಗಳನ್ನು ಸಲ್ಲಿಸುವಂತೆ ಸೂಚಿಸಿದ ಪೀಠ, ದಾಖಲೆಗಳನ್ನು ಒದಗಿಸಲು ವಿಫಲವಾದರೆ ಚುನಾವಣಾ ಆಯೋಗದ ವಿರುದ್ಧ ಪ್ರತಿಕೂಲ ಅಭಿಪ್ರಾಯ ದಾಖಲಿಸಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿತು. ಪ್ರಕರಣದ ಮುಂದಿನ ವಿಚಾರಣೆಯನ್ನು ಫೆಬ್ರವರಿ 15ಕ್ಕೆ ಮುಂದೂಡಲಾಗಿದೆ.

# ಬರ ಪರಿಸ್ಥಿತಿ ವಾಸ್ತವ ಅರಿಯಲು ಕರ್ನಾಟಕಕ್ಕೆ ಬನ್ನಿ: ರಾಹುಲ್‌ಗೆ ಅಶೋಕ್ ಸವಾಲು



ಬೆಂಗಳೂರು, ಅ.14: ಕರ್ನಾಟಕದಲ್ಲಿ ಬರದ ತೀವ್ರತೆ ಹೆಚ್ಚಾಗಿದ್ದರೂ ರೈತರಿಗೆ ಸಮರ್ಪಕ ಪರಿಹಾರ ನೀಡುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ ಎಂದು ಆರೋಪಿಸಿರುವ ವಿಧಾನಸಭೆ ಪ್ರತಿಪಕ್ಷ ನಾಯಕ ಆರ್.ಅಶೋಕ್ ಅವರು, ಬರ ಪರಿಸ್ಥಿತಿಯ ನೈಜ ಸ್ಥಿತಿ ಅರಿಯಲು ಕರ್ನಾಟಕಕ್ಕೆ ಭೇಟಿ ನೀಡಿ ಎಂದು ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿಗೆ ಪತ್ರ ಬರೆದಿದ್ದು, ಮುಂದುವರಿದು ಬರಪೀಡಿತ ಪ್ರದೇಶಗಳ ವಾಸ್ತವ ಪರಿಸ್ಥಿತಿ ಪರಿಶೀಲಿಸಬೇಕು ಮತ್ತು ರೈತರಿಗೆ ಹೆಚ್ಚಿನ ಪರಿಹಾರ ಒದಗಿಸುವಂತೆ ರಾಜ್ಯ ಸರ್ಕಾರದ ಮೇಲೆ ಒತ್ತಡ ಹೇರುವಂತೆ ಆಗ್ರಹಿಸಿದ್ದಾರೆ. ನಾಲ್ಕು ತಿಂಗಳಿಂದಲೂ ರಾಜ್ಯದಲ್ಲಿ ಬರ ಆವರಿಸಿದ್ದರೂ ರೈತರಿಗೆ ಸಮರ್ಪಕ ಪರಿಹಾರ ದೊರೆತಿಲ್ಲ. ಮುಖ್ಯಮಂತ್ರಿ ಹಾಗೂ ಸಚಿವರು ಬರಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ರೈತರ ಸಂಕಷ್ಟವನ್ನು ಅರಿತುಕೊಳ್ಳಬೇಕು. ಪರಿಹಾರ ವಿತರಣೆಯಲ್ಲಿ ವಿಳಂಬ ಮಾಡದೆ ತಕ್ಷಣ ಕ್ರಮ ಕೈಗೊಳ್ಳುವಂತೆ ಸರ್ಕಾರಕ್ಕೆ ಸೂಚಿಸಬೇಕು ಎಂದು ಪತ್ರದಲ್ಲಿ ಒತ್ತಾಯಿಸಿದ್ದಾರೆ.

217 ತಾಲೂಕುಗಳು ಬರಪೀಡಿತ, 46 ಸಾವಿರ ಕೋಟಿಗೂ ಅಧಿಕ ನಷ್ಟದ ಅಂದಾಜು

ಕರ್ನಾಟಕವು ಇತ್ತೀಚಿನ ವರ್ಷಗಳಲ್ಲೇ ತೀವ್ರ ಬರ ಎದುರಿಸುತ್ತಿದೆ. ನೈಋತ್ಯ ಮುಂಗಾರು ಮಳೆಯಲ್ಲಿ ಶೇ.35ರಷ್ಟು ಕೊರತೆಯಾಗಿದ್ದು, ರಾಜ್ಯದ 217 ತಾಲೂಕುಗಳನ್ನು ಬರಪೀಡಿತ ಎಂದು ಘೋಷಿಸಲಾಗಿದೆ. ಸುಮಾರು 47.09 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ನಷ್ಟವಾಗಿದ್ದು, ಅಂದಾಜು 46,324.50 ಕೋಟಿ ನಷ್ಟ ಸಂಭವಿಸಿದೆ ಎಂದು ಅಶೋಕ್ ಪತ್ರದಲ್ಲಿ ಉಲ್ಲೇಖಿಸಿದ್ದಾರೆ. ಇಷ್ಟೊಂದು ದೊಡ್ಡ ಪ್ರಮಾಣದ ಬೆಳೆ ನಷ್ಟವಾಗಿದ್ದರೂ ರಾಜ್ಯ ಸರ್ಕಾರ ಪ್ರತಿ ರೈತನಿಗೆ ಕೇವಲ 2,500 ರೂ. ಇನ್‌ಪುಟ್ ಸಬ್ಸಿಡಿ ಘೋಷಿಸಿರುವುದು ಸಮರ್ಪಕವಲ್ಲ ಎಂದು ಟೀಕಿಸಿದ್ದಾರೆ.

ಬರ ಘೋಷಣೆಯಲ್ಲೂ ವಿಳಂಬ

ಬರಪೀಡಿತ ತಾಲೂಕುಗಳನ್ನು ಗುರುತಿಸುವಲ್ಲಿ ಮತ್ತು ಅವುಗಳನ್ನು ಅಧಿಕೃತವಾಗಿ ಘೋಷಿಸುವಲ್ಲಿ ವಿಳಂಬವಾಗಿದೆ ಎಂದು ಅಶೋಕ್ ಆರೋಪಿಸಿದ್ದಾರೆ. ಬರದಿಂದ ಬೆಳೆಗಳು ಒಣಗುತ್ತಿರುವಾಗ ರೈತರು ಸರ್ಕಾರದ ಅಧಿಸೂಚನೆಗಾಗಿ ಕಾಯಲು ಸಾಧ್ಯವಿಲ್ಲ. ಪ್ರತಿಯೊಂದು ದಿನದ ವಿಳಂಬವೂ ರೈತರ ಆರ್ಥಿಕ ಸಂಕಷ್ಟವನ್ನು ಹೆಚ್ಚಿಸುತ್ತದೆ ಎಂದು ಅವರು ಹೇಳಿದ್ದಾರೆ. ಬರಪೀಡಿತ ಪ್ರದೇಶಗಳ ಘೋಷಣೆಯಲ್ಲಿನ ವಿಳಂಬದ ಕುರಿತು ಕಾಂಗ್ರೆಸ್ ಶಾಸಕರೂ ಅಸಮಾಧಾನ ವ್ಯಕ್ತಪಡಿಸಿದ್ದಾರೆ ಎಂದು ಪತ್ರದಲ್ಲಿ ಉಲ್ಲೇಖಿಸಿದ್ದಾರೆ.

Chief reporter : SANDEEP RENU ✆ 99728 72151 | Executive Editor : SHARAT JYOTSNA B.R ✆ 9886766483 ✉ vaarthe@gmail.com

Published from: K10,'A'/4, Khriki Extension, Malviya Nagar, New Delhi-110 017. Phone: 95-120-3917916-20
Printed at: Jyoti Printers, E-94, Sector 6, Noida, UP. Phone: 0120-4232687 Off : E-94,Sector 6, Noida,UP | RNI No. DELKAN/2003/10363




# ಬಿ.ಡಿ.ಎ ನಿವೇಶನವನ್ನು ನಿಮ್ಮದಾಗಿಸಿಕೊಳ್ಳಲು ಒಂದು ಸುವರ್ಣಾವಕಾಶ

## 2,815 ನಿವೇಶನಗಳು
### ಸಾರ್ವಜನಿಕ ಹಂಚಿಕೆಗಾಗಿ ಲಭ್ಯ

30x40 ಅಡಿ | 40 x 60 ಅಡಿ | 50 x 80 ಅಡಿ

**ಹಂಚಿಕೆ ದರ**

₹ 6,000 ಪ್ರತಿ ಚದರ ಅಡಿ

₹ 64,584 ಪ್ರತಿ ಚದರ ಮೀಟರ್

**ಅವಧಿ ವಿಸ್ತರಣೆ**

**ಅರ್ಜಿ ಸಲ್ಲಿಸಲು 31ನೇ ಅಕ್ಟೋಬರ್ 2026 ಮಧ್ಯಾಹ್ನ 12.00 ಗಂಟೆವರೆಗೆ ವಿಸ್ತರಿಸಲಾಗಿದೆ**

ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಿ https://bdakarnataka.in

| ನಿವೇಶನದ ಅಳತೆ | ಲಭ್ಯವಿರುವ ನಿವೇಶನಗಳ ಸಂಖ್ಯೆ | ನಿವೇಶನದ ಅಂದಾಜು ಮೌಲ್ಯ (₹) | ನೋಂದಣಿ ಶುಲ್ಕ (₹) | ಆರಂಭಿಕ ಠೇವಣಿ (₹) | |
|---|---|---|---|---|---|
| | | | | (ಪ್ರವರ್ಗ-1 / ಪ.ಜಾ/ಪ.ಪಂ) | (ಇತರ ವರ್ಗಗಳು) |
| 30X40 ಅಡಿ 9X12 ಮೀಟರ್ | 2,500 | 69,75,072/- | 2,000/- | 3,48,754/- | 8,71,884/- |
| 40X60 ಅಡಿ 12X18 ಮೀಟರ್ | 300 | 1,39,50,144/- | 4,000/- | 6,97,507/- | 17,43,768/- |
| 50X80 ಅಡಿ 15X24 ಮೀಟರ್ | 15 | 2,32,50,240/- | 5,000/- | 11,62,512/- | 29,06,280/- |

**ಅರ್ಜಿ ಶುಲ್ಕ**

- ₹500 ಪ್ರವರ್ಗ-1/ಪ.ಜಾ/ಪ.ಪಂ ವರ್ಗದವರಿಗೆ
  ₹1,000 ಇತರ ಎಲ್ಲಾ ವರ್ಗದವರಿಗೆ
- ವಿಕಲಚೇತನ ವ್ಯಕ್ತಿಗಳಿಗೆ ನಿವೇಶನ ಮೌಲ್ಯದಲ್ಲಿ **5% ರಿಯಾಯಿತಿ** ಇರುತ್ತದೆ (ಸರ್ಕಾರಿ / ಬಿ.ಡಿ.ಎ ನಿಯಮಾವಳಿಗಳ ಪ್ರಕಾರ ಗರಿಷ್ಠ ರೂ. 1 ಲಕ್ಷದ ಮಿತಿಗೆ ಒಳಪಟ್ಟು)
- ಮೇಲಿನ ನಿವೇಶನ ಮೌಲ್ಯವು ಅಂದಾಜು ಮಾತ್ರವಾಗಿದ್ದು, ಅಧಿಸೂಚನೆಗೆ ಅನುಗುಣವಾಗಿ ಬದಲಾವಣೆಗೆ ಒಳಪಟ್ಟಿರುತ್ತದೆ.

### ಅರ್ಜಿ ಸಲ್ಲಿಸುವ ಸರಳ 5 ಹಂತಗಳು:

1. **ನಿವೇಶನದ ಅಳತೆಯನ್ನು ಆಯ್ಕೆ ಮಾಡಿ**
   30x40 ಅಡಿ
   40x60 ಅಡಿ
   50x80 ಅಡಿ
   ಗಮನಿಸಿ: ಈ ಅಧಿಸೂಚನೆಯಲ್ಲಿ 20x30 ಅಡಿ ನಿವೇಶನಗಳು ಲಭ್ಯವಿಲ್ಲ.
2. **ನೋಂದಾಯಿಸಿ ಹಾಗೂ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ**
   https:-bdakarnataka.in ವೆಬ್‌ಸೈಟ್ ಮೂಲಕ ಮಾತ್ರ ಅರ್ಜಿ ಸಲ್ಲಿಸಬೇಕು. ಬೆಂಗಳೂರು ಒನ್ / ಕರ್ನಾಟಕ ಒನ್ / ಬಿ.ಡಿ.ಎ ಕೇಂದ್ರಗಳಲ್ಲಿ ಆನ್‌ಲೈನ್ ನೆರವು ಲಭ್ಯವಿದೆ.
3. **ನಿಗದಿತ ಶುಲ್ಕಪಾವತಿಸಿ**
   ಅರ್ಜಿ ಶುಲ್ಕ + ನೋಂದಣಿ ಶುಲ್ಕ + ಆರಂಭಿಕ ಠೇವಣಿ ಮೊತ್ತವನ್ನು ಚಲನ್ ಜನರೇಟ್ ಮಾಡಿ, RTGS / NEFT / DD / ಬ್ಯಾಂಕ್ ವರ್ಗಾವಣೆ ಮೂಲಕ ನಿರ್ದಿಷ್ಟಪಡಿಸಿದ ಬ್ಯಾಂಕ್‌ಗಳಲ್ಲಿ ಪಾವತಿಸಿ.
4. **ದಾಖಲೆಗಳನ್ನು ಅಪ್‌ಲೋಡ್ ಮಾಡಿ**
   ನಿವಾಸಿ ಪ್ರಮಾಣಪತ್ರ, ಬ್ಯಾಂಕ್ ಪಾಸ್‌ಬುಕ್ / ರದ್ದುಗೊಳಿಸಿದ ಚೆಕ್, ಉದ್ಯೋಗ ಪ್ರಮಾಣಪತ್ರ, ಜಾತಿ ಪ್ರಮಾಣಪತ್ರ, ವಿಕಲಚೇತನ ಪ್ರಮಾಣಪತ್ರ, ಮಾಜಿ ಸೈನಿಕ ಪ್ರಮಾಣಪತ್ರ, ಸಹಿ ಹಾಗೂ ಬ್ಯಾಂಕ್ ಚಲನ್ ವಿವರಗಳನ್ನು ಅಪ್‌ಲೋಡ್ ಮಾಡಿ.
5. **ಪರಿಶೀಲಿಸಿ / ಅಂತಿಮ ಸಲ್ಲಿಕೆ ಮಾಡಿ**
   ಎಲ್ಲಾ ವಿವರಗಳನ್ನು ಎಚ್ಚರಿಕೆಯಿಂದ ಪರಿಶೀಲಿಸಿ ಸಲ್ಲಿಕೆ ಮಾಡಿ (ಒಮ್ಮೆ ಸಲ್ಲಿಸಿದ ನಂತರ ತಿದ್ದುಪಡಿಗೆ ಅವಕಾಶವಿಲ್ಲ).

ನಿಗದಿಪಡಿಸಿದ ಬ್ಯಾಂಕುಗಳು: ಕೆನರಾ ಬ್ಯಾಂಕ್ । ಆಕ್ಸಿಸ್ ಬ್ಯಾಂಕ್ । ಪಂಜಾಬ್ ನ್ಯಾಷನಲ್ ಬ್ಯಾಂಕ್ । ಸೌತ್ ಇಂಡಿಯನ್ ಬ್ಯಾಂಕ್ । ಎಚ್‌ಡಿಎಫ್‌ಸಿ ಬ್ಯಾಂಕ್ । ಕರ್ನಾಟಕ ಬ್ಯಾಂಕ್ । ಫೆಡರಲ್ ಬ್ಯಾಂಕ್ । ಕೋಟಕ್ ಮಹೀಂದ್ರಾ ಬ್ಯಾಂಕ್ । ಬ್ಯಾಂಕ್ ಆಫ್ ಬರೋಡಾ । ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ

### ಅರ್ಜಿ ಸಲ್ಲಿಸಲು ಯಾರು ಅರ್ಹರು?

1. ಅಧಿಸೂಚನೆ ದಿನಾಂಕದ ವೇಳೆಗೆ 18 ವರ್ಷ ಅಥವಾ ಅದಕ್ಕಿಂತ ಹೆಚ್ಚಿನ ವಯಸ್ಸಿನವರಾಗಿರಬೇಕು.
2. ನೋಂದಣಿಗೆ ಕನಿಷ್ಠ 15 ವರ್ಷಗಳ ಮುಂಚಿನಿಂದ ಕರ್ನಾಟಕದ ಖಾಯಂ ನಿವಾಸಿಯಾಗಿರಬೇಕು. (ಬಿ.ಡಿ.ಎ ನಿಯಮಗಳ ಅಡಿಯಲ್ಲ ನಿರ್ದಿಷ್ಟ ವರ್ಗಗಳಿಗೆ ರಿಯಾಯಿತಿ ಅನ್ವಯಿಸುತ್ತದೆ).
3. ಬಿ.ಡಿ.ಎ (ನಿವೇಶನ ಹಂಚಿಕೆ) ನಿಯಮಗಳು, 1984ರ ಅಡಿಯಲ್ಲಿ ಸೂಚಿಸಲಾದ ಆಸ್ತಿ ಮಾಲೀಕತ್ವ / ಹಿಂದಿನ ಹಂಚಿಕೆ ಅರ್ಹತಾ ಷರತ್ತುಗಳನ್ನು ಪೂರೈಸಿರಬೇಕು.
4. ಅಖಿಲ ಭಾರತ ಸೇವಾ ಅಧಿಕಾರಿಗಳು (All India Service Officers) ಹಾಗೂ ಹಾಲಿ ಕರ್ತವ್ಯದಲ್ಲಿರುವ ರಕ್ಷಣಾ ಸಿಬ್ಬಂದಿ ಸೇರಿದಂತೆ ನಿರ್ದಿಷ್ಟ ವರ್ಗಗಳಿಗೆ ಪ್ರತ್ಯೇಕ ನಿಯಮಗಳು ಅನ್ವಯಿಸುತ್ತವೆ.



**ಡಾ. ಜಿ. ಪರಮೇಶ್ವರ**
ಮಾನ್ಯ ಉಪಮುಖ್ಯಮಂತ್ರಿಗಳು

**ಹಂಚಿಕೆ ವಿಧಾನ**

- ಬಿ.ಡಿ.ಎ (ನಿವೇಶನ ಹಂಚಿಕೆ) ನಿಯಮಗಳು, 1984ರ ಅನ್ವಯ ಪಾರದರ್ಶಕವಾಗಿ, ಗಣಕೀಕೃತ (Computerised) ವ್ಯವಸ್ಥೆಯ ಮೂಲಕ ಹಂಚಿಕೆ ಪ್ರಕ್ರಿಯೆ ನಡೆಯುತ್ತದೆ.
- ಆಯಾ ಮೀಸಲಾತಿ ವರ್ಗಗಳಲ್ಲಿ ಹಿಂದಿನ ಅರ್ಹ ಪ್ರಯತ್ನಗಳನ್ನು (Attempts) ಗಣನೆಗೆ ತೆಗೆದುಕೊಳ್ಳಲಾಗುತ್ತದೆ.

**ನಿಮ್ಮ ಹಿಂದಿನ ಪ್ರಯತ್ನಗಳನ್ನು ಹೇಗೆ ಪರಿಗಣಿಸಲಾಗುತ್ತದೆ**

- ಅದೇ ಅಳತೆಯ ಅಥವಾ ಅದಕ್ಕಿಂತ ಚಿಕ್ಕದಾದ ನಿವೇಶನಕ್ಕೆ ಅರ್ಜಿ ಸಲ್ಲಿಸುತ್ತಿದ್ದೀರಾ?
  ಬಿಡಿಎ ನಿಯಮಗಳ ಪ್ರಕಾರ, ಅದೇ ಅಳತೆಯ ಅಥವಾ ಅದಕ್ಕಿಂತ ದೊಡ್ಡ ಅಳತೆಯ ನಿವೇಶನಕ್ಕಾಗಿ ಈ ಹಿಂದೆ ಮಾಡಿರುವ ಅರ್ಹ ಪ್ರಯತ್ನಗಳನ್ನು ಪರಿಗಣಿಸಬಹುದು.
- ದೊಡ್ಡ ಅಳತೆಯ ನಿವೇಶನಕ್ಕೆ ಅರ್ಜಿ ಸಲ್ಲಿಸುತ್ತಿದ್ದೀರಾ?
  ಈ ಹಿಂದೆ ಚಿಕ್ಕ ಅಳತೆಯ ನಿವೇಶನಕ್ಕಾಗಿ ಮಾಡಿರುವ ಪ್ರಯತ್ನಗಳನ್ನು ಪರಿಗಣಿಸಲಾಗುವುದಿಲ್ಲ.
- ಅರ್ಹ ಅರ್ಜಿದಾರರ ಪ್ರಯತ್ನಗಳ ಸಂಖ್ಯೆ ಸಮನಾಗಿದ್ದು, ಲಭ್ಯವಿರುವ ನಿವೇಶನಗಳ ಸಂಖ್ಯೆಗಿಂತ ಅರ್ಜಿದಾರರ ಸಂಖ್ಯೆ ಹೆಚ್ಚಿದ್ದರೆ, ಅನ್ವಯವಾಗುವ ಬಿಡಿಎ ನಿಯಮಗಳ ಪ್ರಕಾರ ಆದ್ಯತೆಯನ್ನು ನಿರ್ಧರಿಸಲಾಗುತ್ತದೆ.
  ನಿಯಮಗಳಲ್ಲಿ ವಯಸ್ಸಿನ ಆಧಾರದ ಆದ್ಯತೆಯನ್ನು ನಿಗದಿಪಡಿಸಿದ್ದರೆ, ಅದನ್ನೂ ಪರಿಗಣಿಸಲಾಗುತ್ತದೆ.
- ನಿವೇಶನ ಹಂಚಿಕೆ ಪ್ರಕ್ರಿಯೆಯು ಸಂಪೂರ್ಣ ಪಾರದರ್ಶಕವಾಗಿದ್ದು, ಗಣಕೀಕೃತ ವ್ಯವಸ್ಥೆಯ ಮೂಲಕ ಸ್ವಯಂಚಾಲಿತವಾಗಿ ನಿರ್ಧರಿಸುವ ಕಾರ್ಯವಿಧಾನ.

"ಯೋಜಿತ ಅಭಿವೃದ್ಧಿಯ ಮೂಲಕ ಬೆಂಗಳೂರಿನ ಬೆಳವಣಿಗೆಯ ರೂಪುರೇಷೆಗಳನ್ನು ರೂಪಿಸಿದ ಹೆಮ್ಮೆಯ ಪರಂಪರೆಯನ್ನು ಹೊಂದಿರುವ ಬಿಡಿಎ, ಡಾ. ಕೆ. ಶಿವರಾಮ ಕಾರಂತ ಬಡಾವಣೆಯಲ್ಲಿ ಅತ್ಯುತ್ತಮ ನಿವೇಶನಗಳನ್ನು ನಿಮಗಾಗಿ ಒದಗಿಸುತ್ತಿದೆ. ನಿಮ್ಮದೇ ಆದ ವಿಶಿಷ್ಟ ನಿವಾಸವನ್ನು ರೂಪಿಸುವತ್ತ ಮೊದಲ ಹೆಜ್ಜೆಯನ್ನಿಡಿ.

**ಎನ್.ಎ. ಹ್ಯಾರಿಸ್**
ಅಧ್ಯಕ್ಷರು, ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ) ಹಾಗೂ ಶಾಸಕರು, ಶಾಂತಿನಗರ ವಿಧಾನಸಭಾ ಕ್ಷೇತ್ರ



ಎಚ್ಚರಿಕೆ: ನಿವೇಶನ ಹಂಚಿಕೆಗೆ ಸಂಬಂಧಿಸಿದಂತೆ ಸಾರ್ವಜನಿಕರು ಯಾವುದೇ ಮಧ್ಯವರ್ತಿಗಳು ಅಥವಾ ದಲ್ಲಾಳಿಗಳ ಮಾತನ್ನು ನಂಬಿ ಮೋಸಹೋಗಬಾರದು. ಅಧಿಕೃತ ಮಾಹಿತಿಗಾಗಿ ಪ್ರಾಧಿಕಾರವನ್ನು ನೇರವಾಗಿ ಸಂಪರ್ಕಿಸಿ.

**ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿ.ಡಿ.ಎ)**
ಟಿ. ಚೌಡಯ್ಯ ರಸ್ತೆ, ಕುಮಾರ ಪಾರ್ಕ್ ಪಶ್ಚಿಮ, ಬೆಂಗಳೂರು-560020

**24/7 ಸಹಾಯವಾಣಿ / ವಾಟ್ಸಾಪ್: 94831 66622**
https://bdakarnataka.in / @BDAOfficialGoK

## ನಿತ್ಯ ಪಂಚಾಂಗ 15.10.2026 ಗುರುವಾರ



ಶ್ರೀಶಕ 1949 ಶ್ರೀ ಪರಾಭವ ನಾಮ ಸಂವತ್ಸರ, ದಕ್ಷಿಣಾಯಣ ಶರದ್ ಋತು, ಚಾಂದ್ರಮಾನ ಶ್ರಾವಣ-ಆಶ್ವಯುಜ ಮಾಸ

ಆಶ್ವಯುಜ ಶುದ್ಧ, ಪಂಚಮಿ, ಜ್ಯೇಷ್ಠ ನಕ್ಷತ್ರ, ಉಪಾಂಗಲಲಿತಾ ವ್ರತ, ಗರುಡ ಪಂಚಮಿ, ಪಂಚರಾತ್ರಾರಂಭ, ಒಡಿಯೂರು ಉತ್ಸವ, ವಿಶ್ವ ಅಂಧರ ದಿನ

| ದಿನ | ರಾಹುಕಾಲ | ಯಮಗಂಡ | ಗುಳಿಕಕಾಲ |
|---|---|---|---|
| ಭಾನು | ಸ. 5.04– 6.33 | 12.00– 1.30 | 3.00– 4.00 |
| ಸೋಮ | ಬೆ. 7.20– 9.04 | 10.30–12.00 | 1.30– 3.00 |
| ಮಂಗಳ | ಮ. 3.25– 4.59 | 9.00–10.30 | 12.00– 1.30 |
| ಬುಧ | ಮ.12.16– 1.50 | 7.30– 9.00 | 10.30– 12.00 |
| ಗುರು | ಮ. 1.50– 3.29 | 6.00– 7.30 | 9.00– 10.30 |
| ಶುಕ್ರ | ಬೆ.10.42–12.16 | 3.00– 4.30 | 7.30– 9.00 |
| ಶನಿ | ಬೆ. 9.07–10.41 | 1.30– 3.00 | 6.00– 7.30 |

# ಗ್ರಾಮಪಂಚಾಯಿತಿಗಳ ಆರ್ಥಿಕ ಪರಿಸ್ಥಿತಿ ಸುಧಾರಣೆಗೆ ಕ್ರಮ: ಸಿಎಂ ಡಿಕೆಶಿ

**ಬೆಂಗಳೂರು, ಅ.14:** "ಗ್ರಾಮ ಪಂಚಾಯಿತಿಗಳ ಆರ್ಥಿಕ ಪರಿಸ್ಥಿತಿಯನ್ನು ಸುಧಾರಿಸುವ ಮೂಲಕ ವಿಕೇಂದ್ರೀಕರಣ ವ್ಯವಸ್ಥೆಯನ್ನು ಇನ್ನಷ್ಟು ಬಲಪಡಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುವುದು" ಎಂದು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ತಿಳಿಸಿದರು.

ಸಿಎಂ ಗೃಹ ಕಚೇರಿ ಶಿವಕುಮಾರ್ ಅವರು ಬುಧವಾರ ಕೃಷ್ಣಾದಲ್ಲಿ ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಸಭೆನಡೆಸಿ ಮಾತನಾಡಿ, 5ನೇ ಹಣಕಾಸು ಆಯೋಗದ ವರದಿಯ ಹಣಕಾಸು ಹಂಚಿಕೆ ಹಾಗೂ ಆಡಳಿತ ಸುಧಾರಣೆಗೆ ಸಂಬಂಧಿಸಿದ ಶಿಫಾರಸುಗಳನ್ನು ಅನುಷ್ಠಾನಕ್ಕೆ ತರುವ ಕುರಿತಾಗಿ ಗ್ರಾಮೀಣಾಭಿವೃದ್ಧಿ ಸಚಿವರ ಅಧ್ಯಕ್ಷತೆಯಲ್ಲಿ ಸಮಿತಿಯನ್ನು ರಚಿಸಲಾಗುವುದು. ಸಮಿತಿಯು ಅನುಷ್ಠಾನಗೊಳಿಸಬಹುದಾದ ಶಿಫಾರಸುಗಳನ್ನು ಪರಿಶೀಲಿಸಿ ವರದಿ ಸಲ್ಲಿಸಲಿದೆ ಎಂದರು.

5ನೇ ರಾಜ್ಯ ಹಣಕಾಸು ಆಯೋಗದ ವರದಿಯಂತೆ ಗ್ರಾಮ ಪಂಚಾಯಿತಿಗಳಿಗೆ ಒಟ್ಟು ರೂ. 1261 ಕೋಟಿ, ತಾಲೂಕು ಪಂಚಾಯಿತಿಗಳಿಗೆ ಒಟ್ಟು ರೂ. 557 ಕೋಟಿ ಹಾಗೂ ಜಿಲ್ಲಾ ಪಂಚಾಯಿತಿಗಳಿಗೆ 183 ಕೋಟಿ ರೂ. ಬಿಡುಗಡೆ ಮಾಡಲಾಗಿದೆ" ಎಂದು ವಿವರಿಸಿದರು.

ಸಂವಿಧಾನದ 74ನೇ ತಿದ್ದುಪಡಿಯ ಆಶಯದಂತೆ ನಗರ ಸ್ಥಳೀಯ ಸಂಸ್ಥೆಗಳು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಎಲ್ಲಾ ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು. ಈ ನಿಟ್ಟಿನಲ್ಲಿ ಕಾಯ್ದೆಗಳಿಗೆ ಸೂಕ್ತ ತಿದ್ದುಪಡಿ ತರುವ ಕುರಿತಾಗಿ ನ್ಯಾಷನಲ್ ಲಾ ಕಾಲೇಜಿನ ತಜ್ಞರೊಂದಿಗೆ ಸಮಾಲೋಚನೆ ನಡೆಸಲಾಗುವುದು" ಎಂದು ಹೇಳಿದರು.

**ಗ್ರಾಮಸಭೆಗಳ ಮಾದರಿಯಲ್ಲಿ ವಾರ್ಡ್ ಸಭೆ:** "ಗ್ರಾಮಸಭೆಗಳ ಮಾದರಿಯಲ್ಲಿ ವಾರ್ಡ್ ಸಭೆಗಳ ಮೂಲಕ ನಗರ ಸ್ಥಳೀಯ ಸಂಸ್ಥೆಗಳಲ್ಲಿ ಯೋಜನೆಗಳನ್ನು ರೂಪಿಸಿ ಅನುಷ್ಠಾನಗೊಳಿಸಬೇಕಾಗಿದೆ. ಈಗಾಗಲೇ ಜಿಲ್ಲಾಮಟ್ಟದಲ್ಲಿ, ತಾಲೂಕು ಮಟ್ಟದಲ್ಲಿ ಹಾಗೂ ಗ್ರಾಮಮಟ್ಟದಲ್ಲಿ ಜಿಲ್ಲಾ ಯೋಜನಾ ಸಮಿತಿಗಳನ್ನು ರಚಿಸಲಾಗಿದ್ದು, ಈ ಎಲ್ಲಾ ಸಮಿತಿಗಳು



ಮೂರು ತಿಂಗಳಿಗೊಮ್ಮೆ ಕಡ್ಡಾಯವಾಗಿ ಸಭೆ ನಡೆಸಿ ವರದಿಯನ್ನು ಸಲ್ಲಿಸುವಂತೆ" ಸೂಚನೆ ನೀಡಿದರು.

**'ಜನರ ಯೋಜನೆ' ಜಾರಿಗೆ ಮಾರ್ಗಸೂಚಿ:** "ಜಿಲ್ಲಾ ಮತ್ತು ತಾಲೂಕು ಮಟ್ಟದಲ್ಲಿ ಯೋಜನಾ ನಿರ್ವಹಣಾ ಘಟಕಗಳನ್ನು ಸ್ಥಾಪಿಸಲು ಅವಶ್ಯವಾದ ಅನುದಾನ ಒದಗಿಸಬೇಕು. ತಳಮಟ್ಟದಿಂದ ಜನರ ಬೇಡಿಕೆಗಳನ್ನು ಪಡೆದು ರಾಜ್ಯ ಆಯವ್ಯಯದಲ್ಲಿ ಒಳಗೂಡಿಸುವ ನಿಟ್ಟಿನಲ್ಲಿ ಜನರ ಯೋಜನೆಯನ್ನು ಜಾರಿಗೊಳಿಸುವುದಾಗಿ ಬಜೆಟ್‌ನಲ್ಲಿ ನಾವು ಘೋಷಿಸಿದ್ದೇವೆ. ಈ ಕುರಿತಾಗಿ ಗ್ರಾಮೀಣಾಭಿವೃದ್ಧಿ ಇಲಾಖೆ ಹಾಗೂ ನಗರಾಭಿವೃದ್ಧಿ ಇಲಾಖೆಗಳು ಸೂಕ್ತ ಮಾರ್ಗಸೂಚಿಗಳನ್ನು ಹೊರಡಿಸಬೇಕು. ಇದಕ್ಕೆ ಅಗತ್ಯವಾದ ತಂತ್ರಾಂಶವನ್ನು ರೂಪಿಸಿ" ಎಂದು ನಿರ್ದೇಶನ ನೀಡಿದರು.

**ಸ್ಥಳೀಯ ಸಂಸ್ಥೆಗಳಿಗೆ ಜಿಎಸ್‌ಟಿ ಪಾಲು: ಜಿಎಸ್‌ಟಿ ಮಂಡಳಿಗೆ ಪ್ರಸ್ತಾವನೆ**

ಕರ್ನಾಟಕ ಪಂಚಾಯತ್ ಆಡಳಿತಾತ್ಮಕ ಸೇವೆಯನ್ನು ಪ್ರಾರಂಭಿಸುವ ಕುರಿತಾಗಿ ಇಲಾಖೆಯ ಸಚಿವರಿಂದ ಪ್ರಸ್ತಾವನೆಯನ್ನು ಪಡೆಯಲಾಗುವುದು. ಗ್ರಾಮೀಣ ಹಾಗೂ ನಗರ ಸ್ಥಳೀಯ ಸಂಸ್ಥೆಗಳಿಗೆ ಜಿಎಸ್‌ಟಿಯಲ್ಲಿ ಪಾಲು ನೀಡುವ ಪ್ರಸ್ತಾಪಕ್ಕೆ ಪ್ರತಿಕ್ರಿಯಿಸಿದ ಅವರು, ಈ ಕುರಿತು ಜಿಎಸ್ಟಿ ಮಂಡಳಿಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗುವುದು" ಎಂದು ಡಿ.ಕೆ. ಶಿವಕುಮಾರ್ ಹೇಳಿದರು.

ಕೈಗಾರಿಕೆಗಳಿಗೆ ತೆರಿಗೆ ಹಾಕುವ ಅಧಿಕಾರವನ್ನು ಗ್ರಾಮ ಪಂಚಾಯಿತಿಗಳಿಂದ ಕೆ.ಐ.ಎ.ಡಿ.ಬಿ ಹಿಂಪಡೆದಿರುವುದರಿಂದ ಗ್ರಾಮ ಪಂಚಾಯಿತಿಗಳ ಆದಾಯ ಕಡಿತವಾಗಿರುವುದು ಗಮನಕ್ಕೆ ಬಂದಿದೆ. ಪ್ರಾಧಿಕಾರವು ಸಂಗ್ರಹಿಸಿದ ಸ್ವತ್ತಿನ ತೆರಿಗೆಯ ಶೇ.30 ರಷ್ಟು ಗ್ರಾಮ ಪಂಚಾಯಿತಿಗಳಿಗೆ ನೀಡಲು ಅಧಿನಿಯಮದಲ್ಲಿ ಅವಕಾಶ ಕಲ್ಪಿಸಲಾಗಿದೆ. ಪ್ರಾಧಿಕಾರ ಇದುವರೆಗೆ ಸಂಗ್ರಹಿಸಿರುವ ತೆರಿಗೆ ಮೊತ್ತ ಹಾಗೂ ಗ್ರಾಮ ಪಂಚಾಯಿತಿಗಳಿಗೆ ಹಂಚಿಕೆ ಮಾಡಿರುವ ಮೊತ್ತದ ಸಂಪೂರ್ಣ ವಿವರಗಳನ್ನು ಒದಗಿಸಿ" ಎಂದು ಅಧಿಕಾರಿಗಳಿಗೆ ಸೂಚಿಸಿದರು.

## ಗೃಹಲಕ್ಷ್ಮಿ ಯೋಜನೆಯ 33ನೇ ಕಂತಿನ 2482 ಕೋಟಿ ರೂ. ಬಿಡುಗಡೆ



**ಬೆಂಗಳೂರು, ಅ.14:** ಗೃಹಲಕ್ಷ್ಮಿ ಯೋಜನೆಯ 33ನೇ ಕಂತಿನ 2482 ಕೋಟಿ ರೂ. ಹಣವನ್ನು ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರು ಬಿಡುಗಡೆ ಮಾಡಿದ್ದಾರೆ. ಇನ್ನೆರಡು ದಿನಗಳಲ್ಲಿ ರಾಜ್ಯದ 1.24 ಕೋಟಿ ಮಹಿಳೆಯರಿಗೆ 79,433 ಕೋಟಿ ರೂ. ಹಣ ತಲುಪಲಿದೆ ಎಂದು ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷ ದಿನೇಶ್ ಗೂಳಿಗೌಡ ಹೇಳಿದರು.

ಗೃಹಲಕ್ಷ್ಮಿ ಯೋಜನೆಯಡಿ ಇದುವರೆಗೂ 32 ಕಂತುಗಳಲ್ಲಿ 64,000 ರೂ. ಹಣ ತಲುಪಿದೆ. ಈಗ 33ನೇ ಕಂತಿನ ಹಣ ಬಿಡುಗಡೆ ಆಗಿದ್ದು ಫಲಾನುಭವಿಗಳ ಖಾತೆಗೆ ಹಣ ಜಮೆಯಾಗಲಿದೆ. ಈ ಮೂಲಕ ಪ್ರತಿ ಫಲಾನುಭವಿಗೆ 66,000 ರೂ. ತಲುಪಿದಂತಾಗಲಿದೆ ಎಂದರು.ಬರದ ಈ ಸಂದರ್ಭದಲ್ಲಿ ಗೃಹಲಕ್ಷ್ಮಿ ಹಣ ಮಹಿಳೆಯರಿಗೆ ಆರ್ಥಿಕವಾಗಿ ಶಕ್ತಿ ನೀಡಲಿದೆ. ದಸರಾ ಹಬ್ಬದ ಈ ಸಂದರ್ಭದಲ್ಲಿ ಗೃಹಲಕ್ಷ್ಮಿ ಹಣ ಬಿಡುಗಡೆ ಮಾಡಿರುವ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಧನ್ಯವಾದ ತಿಳಿಸಿದರು.

## ಸ್ಟಿಂಗ್ ಆಪರೇಷನ್‌ನ ನಿರ್ದೇಶಕ, ನಿರ್ಮಾಪಕ ಎಲ್ಲರೂ ಕಾಂಗ್ರೆಸ್‌ನವರೇ!



**ಬೆಂಗಳೂರು, ಅ.14:** ಸ್ಟಿಂಗ್‌ನ ಸೂತ್ರಧಾರಿ, ಪಾತ್ರಧಾರಿ ಎಲ್ಲರೂ ಕಾಂಗ್ರೆಸ್‌ನವರೇ. ತನಿಖೆ ಮಾಡಿದರೆ ನಿರ್ದೇಶಕರು, ನಿರ್ಮಾಪಕರು ಅವರೇ ಎಂದು ತಿಳಿಯುತ್ತದೆ ಮಾಜಿ ಸಚಿವ ಸಿಟಿ ರವಿ ಹೇಳಿದ್ದಾರೆ.

ಮುಖ್ಯಮಂತ್ರಿಗಳು ಸ್ಟಿಂಗ್ ಅಂದ ಮೇಲೆ ಯಾರಾದರೂ ತನಿಖೆ ನಡೆಸಬೇಕಲ್ಲ, ಸಿಬಿಐ ತನಿಖೆ ನಡೆಸಿದರೆ ಸೂಕ್ತ. ಆದರೆ ಸ್ಟಿಂಗ್ ಆಪರೇಷನ್ ಬಗ್ಗೆ ಗೃಹ ಸಚಿವರು ಏನು ಮಾತಾನಾಡುತ್ತಿಲ್ಲ. ಎಲ್ಲಾ ತಿಳಿದು ಅವರು ಏಕೆ ಮಾತನಾಡುತ್ತಿಲ್ಲ. ಕಾಂಗ್ರೆಸ್ ಮರ್ಯಾದೆ ಹೋಗುತ್ತೆ ಅಂತಾ ಮಾತನಾಡುತ್ತಿಲ್ಲ. ಗೃಹ ಸಚಿವರು ಇದರ ಬಗ್ಗೆ ಮಾತನಾಡಬೇಕು. ಸಿದ್ದರಾಮಯ್ಯ ಸಿಎಂ ಸ್ಥಾನದಿಂದ ಇಳಿದ ಮೇಲೆ ಸರಿಯಾಗಿ ನಡೆಸಿಕೊಳ್ಳುತ್ತಿಲ್ಲ. ಇದರ ಸೂತ್ರಧಾರಿ ಹಾಗೂ ಪಾತ್ರಧಾರಿಗಳು ಎಲ್ಲರೂ ಕಾಂಗ್ರೆಸ್‌ನವರೇ ಇದ್ದಾರೆ ಎಂದು ತಿಳಿಸಿದ್ದಾರೆ.

**ಗ್ಯಾರಂಟಿ ಸರ್ಕಾರದಲ್ಲಿ ಹಗರಣಗಳೇ ಗ್ಯಾರಂಟಿ**

ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ 3 ವರ್ಷದಿಂದ ಗ್ಯಾರಂಟಿ ಮೂಲಕ ಬಂದ ಸರ್ಕಾರ. ಆದರೆ ಇದೀಗ ಹಗರಣಗಳ ಗ್ಯಾರಂಟಿಯಾಗಿದೆ. ರಾಜ್ಯದಲ್ಲಿ ಹಗರಣಗಳದೇ ಸದ್ದು ನಡೆಯುತ್ತಿದೆ. ಹೀಗಾಗಿ ಈ ವಿಷಯ ಮುಚ್ಚಿ ಹಾಕಲು ಸ್ಟಿಂಗ್ ಆಪರೇಷನ್ ತಂದಿದ್ದಾರೆ. ಈ ವಿಚಾರವಾಗಿ ಸಿಎಂ ಡಿಕೆಶಿ ಅವರಿಂದ ಸರಣಿ ಸಭೆ ಬಗ್ಗೆ ಮಾತನಾಡಿ, ಹೆಚ್ಚಿನ ಮಾಹಿತಿ ಸಿಎಂ ಅವರಿಗೆ ಗೊತ್ತಿದೆ. ಹೀಗಾಗಿ ಬ್ರೈನ್ ಮ್ಯಾಪಿಂಗ್ ಮಾಡಬೇಕು. ಕಾಂಗ್ರೆಸ್‌ನವರ ಬ್ರೈನ್ ಮ್ಯಾಪಿಂಗ್ ಮಾಡಬೇಕಾಗಿದೆ.

ಬೇಕಿದ್ದರೆ ಬಿಜೆಯಿಯವರದ್ದು ಬ್ರೈನ್ ಮ್ಯಾಪಿಂಗ್ ಮಾಡಲಿ. ಸ್ಟಿಂಗ್ ಬಗ್ಗೆ ಮೊದಲು ಮಾತನಾಡಿದ್ದು ಡಿ.ಕೆ. ಶಿವಕುಮಾರ್, ಹಾಗಾಗಿ ಅವರ ಬ್ರೈನ್ ಮ್ಯಾಪಿಂಗ್ ಮೊದಲು ಮಾಡಬೇಕಿದೆ ಎಂದಿದ್ದಾರೆ.



ಅಕ್ಟೋಬರ್ 23ರಂದು ಸಂಸತ್ತಿನ ಪ್ರೇರಣಾ ಸ್ಥಳದಲ್ಲಿರುವ ರಾಣಿ ಚೆನ್ನಮ್ಮ ಅವರ ಪ್ರತಿಮೆಯ ಬಳಿ ನಡೆಯಲಿರುವ ಕಿತ್ತೂರು ರಾಣಿ ಚೆನ್ನಮ್ಮ ಜನ್ಮದಿನೋತ್ಸವ ಹಾಗೂ 202ನೇ ವಿಜಯೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಕೇಂದ್ರ ಸಚಿವ ವಿ.ಸೋಮಣ್ಣ ಅವರು ಲೋಕಸಭಾಧ್ಯಕ್ಷ ಓಂ ಬಿರ್ಲಾಗೆ ನವದೆಹಲಿಯಲ್ಲಿ ಬುಧವಾರ ಆಹ್ವಾನ ನೀಡಿದರು.

## ಸ್ಟಿಂಗ್ ಆಪರೇಷನ್ ತನಿಖೆ: ಮಾಧ್ಯಮಗಳ ಎದುರು ಚರ್ಚಿಸಲು ಸಾಧ್ಯವಿಲ್ಲ–ಡಿಸಿಎಂ



**ಬೆಂಗಳೂರು, ಅ.14:** ಸ್ಟಿಂಗ್ ಆಪರೇಷನ್ ಸಂಬಂಧ ಸಿದ್ದರಾಮಯ್ಯ ಅವರ ದೂರಿನ ಮೇಲೆ ತನಿಖೆ ಯಾವ ದಿಕ್ಕಿನಲ್ಲಿ ಸಾಗುತ್ತಿದೆ ಮತ್ತು ಏನು ಮಾಡುತ್ತಿದ್ದೇವೆ, ಯಾರನ್ನಾದರೂ ಬಂಧಿಸಲಾಗಿದೆಯೆ ಎಂಬುದರ ಕುರಿತು ಮಾಧ್ಯಮಗಳ ಎದುರು ಚರ್ಚಿಸಲು ಸಾಧ್ಯವಿಲ್ಲ ಎಂದು ಸ್ಟಿಂಗ್ ಆಪರೇಷನ್ ಕುರಿತು ಡಿಸಿಎಂ ಡಾ.ಜಿ. ಪರಮೇಶ್ವರ್ ಪ್ರತಿಕ್ರಿಯಿಸಿದ್ದಾರೆ.

ಬುಧವಾರ ಮಾತನಾಡಿದ ಅವರು, ಈ ವಿಚಾರದಲ್ಲಿ ಅಧಿಕೃತವಾಗಿ ಏನನ್ನಾದರೂ ಹೇಳುವುದಾದರೆ ಸ್ವತಃ ಹೇಳುತ್ತೇನೆ ಎಂದಿದ್ದಾರೆ. ಇನ್ನು ಈ ವಿಚಾರದಲ್ಲಿ ಎಚ್‌ಡಿಕೆ ಆರೋಪಗಳಿಗೆ ಪ್ರತಿಕ್ರಿಯಿಸಿದ ಡಾ.ಜಿ. ಪರಮೇಶ್ವರ್, ಅವರ ಆರೋಪಗಳಿಗೆಲ್ಲ ಯಾಕೆ ಉತ್ತರ ನೀಡಬೇಕು.

ಸ್ಟಿಂಗ್ ಬಗ್ಗೆ ಅಶೋಕ್ ಅಥವಾ ವಿಜಯೇಂದ್ರ ದೂರು ನೀಡಲಿ, ನಮ್ಮ ಬಳಿ ಸಮರ್ಥ ಗೃಹ ಸಚಿವರಿದ್ದಾರೆ, ಖಂಡಿತಾ ತನಿಖೆ ನಡೆಸುತ್ತೇವೆ. ಆದರೆ ಅದು ಯಾವ ಸ್ಟಿಂಗ್ ಎಂಬುದು ಹೇಗೆ ಗೊತ್ತಾಗಬೇಕು ಎಂದು ತಿರುಗೇಟು ನೀಡಿದರು.

**ಎಚ್‌ಡಿಕೆ ಭಜನೆ ಮಾತ್ರ ನಡೆಯುತ್ತಿದೆ**

ಡಿ.ಕೆ. ಶಿವಕುಮಾರ್ ಸರ್ಕಾರವನ್ನು ಟಾರ್ಗೆಟ್ ಮಾಡಲಾಗುತ್ತಿದೆ ಎಂಬ ವಿಚಾರವಾಗಿ ಮಾತನಾಡಿದ ಡಿಸಿಎಂ, ಐಟಿ, ಇಡಿ ದಾಳಿಗಳ ಬಳಿಕ ಈಗ ಸ್ಟಿಂಗ್ ಆಪರೇಷನ್ ನಡೆಯುತ್ತಿದೆ. ಯಾರು ಈ ಸ್ಟಿಂಗ್ ಮಾಡಿಸಿದರು ಎಂಬುದು ಎಲ್ಲರಿಗೂ ಗೊತ್ತಿರುವ ವಿಚಾರವೇ ಆಗಿದೆ. ಕುಮಾರಸ್ವಾಮಿ ಅವರು ತಮ್ಮ ಸರ್ಕಾರ ಉಳಿಸಿಕೊಳ್ಳಲು ಯಡಿಯೂರಪ್ಪ ಅವರ ಸ್ಟಿಂಗ್ ಮಾಡಿಸಿರಲಿಲ್ಲವೇ ಎಂದು ಪ್ರಶ್ನಿಸಿದರು. ಆ ಆಡಿಯೋ ಸದನದಲ್ಲೂ ಚರ್ಚೆಯಾಗಿತ್ತು ಮತ್ತು ಯಾರ ಇತಿಹಾಸ ಏನು ಎಂಬುದು ಕರ್ನಾಟಕದ ಜನತೆಗೆ ಚೆನ್ನಾಗಿ ತಿಳಿದಿದೆ ಎಂದರು. ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿರುವ ವಿಡಿಯೋಗಳ ಸತ್ಯಾಸತ್ಯತೆ ಬಗ್ಗೆ ಮಾತನಾಡಿ, ಸಂತ್ರಸ್ತರು ಯಾರೂ ಬಂದು ಹೇಳುತ್ತಿಲ್ಲ, ಸ್ಟಿಂಗ್ ಮಾಡಿದವರೂ ಮಾತನಾಡುತ್ತಿಲ್ಲ, ಕೇವಲ ಕುಮಾರಸ್ವಾಮಿ ಭಜನೆ ಮಾತ್ರ ನಡೆಯುತ್ತಿದೆ ಎಂದು ವ್ಯಂಗ್ಯವಾಡಿದರು.

## ಕೆಆರ್‌ಎಸ್‌ನಲ್ಲಿ ನಾಳೆ ಕಾವೇರಿ ಆರತಿ: ಸಿಎಂಗೆ ಆಹ್ವಾನ



**ಬೆಂಗಳೂರು, ಅ.14:** ನಾಡಹಬ್ಬ ಮೈಸೂರು ದಸರಾ ಅಂಗವಾಗಿ ಕೃಷ್ಣರಾಜಸಾಗರದ ಬೃಂದಾವನ ಉದ್ಯಾನವನದಲ್ಲಿ (ಕೆಆರ್‌ಎಸ್) ಅ.16ರಿಂದ ನಡೆಯುಲಿರುವ ಕಾವೇರಿ ಆರತಿ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳ ಉದ್ಘಾಟನೆಗೆ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರನ್ನು ಮಂಡ್ಯ ಜಿಲ್ಲಾ ಉಸ್ತುವಾರಿ ಸಚಿವರಾದ ಜಲಸಂಪನ್ಮೂಲ ಸಚಿವ ಎನ್.ಚಲುವರಾಯಸ್ವಾಮಿ ಅವರು ಜಿಲ್ಲಾಡಳಿತದೊಂದಿಗೆ ಬುಧವಾರ ಆಹ್ವಾನಿಸಿದರು.

ಜಲಸಂಪನೂಲ ಇಲಾಖೆಯ ಕಾವೇರಿ ನೀರಾವರಿ ನಿಗಮ ನಿಯಮಿತ ಹಾಗೂ ಜಿಲ್ಲಾಡಳಿತ ವತಿಯಿಂದ ನಡೆಯಲಿರುವ ಕಾವೇರಿ ಆರತಿ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ಅ. 16 ರಿಂದ 21 ರವರೆಗೆ ನಡೆಯಲಿದೆ. ಅ.16 ರ ಸಂಜೆ 6.00 ಗಂಟೆಗೆ ನಡೆಯಲಿರುವ ಕಾವೇರಿ ಆರತಿಗೆ ಮುಖ್ಯಮಂತ್ರಿಗಳು, ಸಚಿವರು ಚಾಲನೆ ನೀಡಲಿದ್ದಾರೆ.

ಅ.21ರವರೆಗೆ ಪ್ರತಿದಿನ ಸಂಜೆ 6 ಗಂಟೆಗೆ ಕಾವೇರಿ ಆರತಿ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳು ನಡೆಯಲಿವೆ.ಈ ವೇಳೆ ಶ್ರೀ ರಂಗಪಟ್ಟಣದ ಶಾಸಕ ರಮೇಶ್ ಬಂಡಿಸಿದ್ದೇಗೌಡ, ಕಾವೇರಿ ನೀರಾವರಿ ನಿಗಮದ ವ್ಯವಸ್ಥಾಪಕ ನಿರ್ದೇಶಕ ಮಹೇಶ್, ಮಂಡ್ಯ ಜಿಲ್ಲಾಧಿಕಾರಿ ಡಾ.ಕುಮಾರ ಅವರು ಹಾಜರಿದ್ದರು.

## ಸಿದ್ದರಾಮಯ್ಯ ವಿರುದ್ಧ ವಿಡಿಯೋ ಹರಿಬಿಟ್ಟ ಇಬ್ಬರು ಶಂಕಿತರು ವಶಕ್ಕೆ: ಮುಂದುವರಿದ ವಿಚಾರಣೆ

**ಬೆಂಗಳೂರು, ಅ.14:** ಸಾಮಾಜಿಕ ಜಾಲತಾಣಗಳಲ್ಲಿ ವಿಡಿಯೋ ಹರಿಬಿಟ್ಟು ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಗೌರವಕ್ಕೆ ಧಕ್ಕೆ ತರಲು ಯತ್ನಿಸಿದ ಪ್ರಕರಣದ ತನಿಖೆ ನಡೆಸುತ್ತಿರುವ ಸಿಸಿಬಿಯ ಸೈಬರ್ ಕ್ರೈಂ ಪೊಲೀಸರು ಇಬ್ಬರು ಶಂಕಿತರನ್ನು ವಶಕ್ಕೆ ಪಡೆದಿದ್ದಾರೆ. ಅವರನ್ನು ಅಜ್ಞಾತ ಸ್ಥಳದಲ್ಲಿಟ್ಟು ಪೊಲೀಸರು ವಿಚಾರಣೆ ನಡೆಸುತ್ತಿದ್ದು, ಪ್ರಕರಣಕ್ಕೆ ಸಂಬಂಧಿಸಿದ ಮಾಹಿತಿಯನ್ನು ಕಲೆಹಾಕುತ್ತಿದ್ದಾರೆ.

ಈ ಕೃತ್ಯದ ಹಿಂದೆ ಯಾರ ಕೈವಾಡವಿದೆ, ವಿಡಿಯೋವನ್ನು ಎಲ್ಲಿಂದ ಸೃಷ್ಟಿಸಲಾಗಿದೆ ಹಾಗೂ ಯಾರೆಲ್ಲ ಹೆಚ್ಚು ಫಾರ್ವರ್ಡ್ ಮಾಡಿದ್ದಾರೆ ಎಂಬ ಬಗ್ಗೆ ಸೈಬರ್ ಕ್ರೈಂ ಪೊಲೀಸರು ತನಿಖೆ ಕೈಗೊಂಡಿದ್ದಾರೆ.

ಸಾಮಾಜಿಕ ಜಾಲತಾಣಗಳಲ್ಲಿ ತಮ್ಮ ವಿರುದ್ಧ ನಕಲಿ ಹಾಗೂ ದುರುದ್ದೇಶಪೂರಿತ ವಿಡಿಯೋಗಳನ್ನು ಹಂಚಿಕೆ ಮಾಡಿ ತೇಜೋವಧೆ ಮಾಡಲಾಗುತ್ತಿದೆ ಎಂದು ಸಿದ್ದರಾಮಯ್ಯ ಅವರು ನಗರದ ಪೊಲೀಸ್ ಆಯುಕ್ತ ಸೀಮಂತ್ ಕುಮಾರ್ ಸಿಂಗ್ ಅವರಿಗೆ ದೂರು ನೀಡಿದ್ದರು. ಸುಳ್ಳು ಮಾಹಿತಿ ಹರಡುತ್ತಿದ್ದ ನಿರ್ದಿಷ್ಟ ಸಾಮಾಜಿಕ ಜಾಲತಾಣ ಖಾತೆಗಳ ಐಡಿ ಹಾಗೂ ಇತರ ವಿವರಗಳನ್ನು ದೂರಿನೊಂದಿಗೆ ನೀಡಿದ್ದರು.

ಈ ದೂರನ್ನು ಗಂಭೀರವಾಗಿ ಪರಿಗಣಿಸಿದ ನಗರ ಪೊಲೀಸ್ ಆಯುಕ್ತರು, ತನಿಖೆಗಾಗಿ ಸಿಸಿಬಿಯ ಸೈಬರ್ ಕ್ರೈಂ ಠಾಣೆಗೆ ವಹಿಸಿದ್ದರು.ಈ ದೂರಿನ ಆಧಾರದ ಮೇಲೆ ಸಿಸಿಬಿಯ ಸೈಬರ್ ಕ್ರೈಂ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

ಸಾಮಾಜಿಕ ಜಾಲತಾಣಗಳ ಮೇಲೆ ಹದ್ದಿನ ಕಣ್ಣಿಟ್ಟಿರುವ ಸೈಬರ್ ಕ್ರೈಂ ಠಾಣೆ ಪೊಲೀಸರು, ವಿಡಿಯೋವನ್ನು ಪ್ರಚಾರ ಮಾಡಿದ ಪ್ರಮುಖ ಖಾತೆಗಳ ಐಪಿ ವಿಳಾಸಗಳ ಮೂಲಕ ಸಾಧನಗಳ ಮಾಲೀಕರನ್ನು ಪತ್ತೆಹಚ್ಚುವ ಕಾರ್ಯದಲ್ಲಿ ತೊಡಗಿದ್ದಾರೆ.



ನವದೆಹಲಿಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರನ್ನು ಬುಧವಾರ ಭೇಟಿ ಮಾಡಿದ ಲೋಕೋಪಯೋಗಿ ಸಚಿವ ಸತೀಶ್ ಜಾರಕಿಹೊಳಿ ಹಾಗೂ ಟಿ.ಆರ್.ರಾಮಪ್ಪ ಮತ್ತಿತರರು ಪರಿಶಿಷ್ಟ ಮೀಸಲಾತಿ ಬಗ್ಗೆ ಸುದೀರ್ಘ ಚರ್ಚಿಸಿದರು.

# ಸ್ಟಿಂಗ್ ಆಪರೇಷನ್ ಸಿಬಿಐಗೆ ವಹಿಸಲಿ: ಎಚ್‌ಡಿಕೆಗೆ ಜಲಸಂಪನ್ಮೂಲ ಸಚಿವ ಚಲುವರಾಯಸ್ವಾಮಿ ಸವಾಲು



**ಬೆಂಗಳೂರು, ಅ.14:** ಕೇಂದ್ರದಲ್ಲಿ ಎನ್‌ಡಿಎ ಸರ್ಕಾರ ಅಧಿಕಾರದಲ್ಲಿದ್ದು, ಸ್ಟಿಂಗ್ ಆಪರೇಷನ್ ವಿಚಾರವನ್ನು ಸಿಬಿಐ ತನಿಖೆಗೆ ವಹಿಸುವಂತೆ ಜಲಸಂಪನ್ಮೂಲ ಸಚಿವ ಎನ್. ಚಲುವರಾಯಸ್ವಾಮಿ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿಗೆ ಸವಾಲು ಹಾಕಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರದಲ್ಲಿ ಅವರದೇ ಸರ್ಕಾರವಿದೆ. ಬೇಕಿದ್ದರೆ ತನಿಖೆ ಮಾಡಿಸಲಿ. ಗುರುವಾರ ಸಚಿವ ಸಂಪುಟ ಸಭೆ ನಡೆಯಲಿದ್ದು, ಅಲ್ಲಿ ಏನು ಚರ್ಚೆಯಾಗುತ್ತದೆ ಎಂಬುದನ್ನು ಕಾದು ನೋಡೋಣ. ಈ ವಿಚಾರದಲ್ಲಿ ತನಿಖೆಯ ಅಗತ್ಯವಿಲ್ಲ ಎನಿಸುತ್ತದೆ. ಆದರೆ, ಮುಖ್ಯಮಂತ್ರಿ ಈ ಬಗ್ಗೆ ಸೂಕ್ತ ನಿರ್ಧಾರ ಕೈಗೊಳ್ಳಲಿದ್ದಾರೆ ಎಂದರು.

ಸಿದ್ದರಾಮಯ್ಯ ಅವರ ನಾಯಕತ್ವ ಮತ್ತು ಅವರು ಬೆಳೆದುಬಂದ ಹಾದಿ ನಾಡಿನ ಜನರಿಗೆ ತಿಳಿದಿದೆ. ಅವರು ಮುಖ್ಯಮಂತ್ರಿಯಾದಾಗ ಪ್ರಸ್ತಾಪವಾಗದ ವಿಚಾರ ಈಗ ಏಕೆ ಮುನ್ನೆಲೆಗೆ ಬಂದಿದೆ. ನಮ್ಮ ಪಕ್ಷದಲ್ಲಿ ಒಡಕು ಮೂಡಿಸಲು ಕೇಂದ್ರ ಸಚಿವ ಕುಮಾರಸ್ವಾಮಿ ಪ್ರಯತ್ನಿಸುತ್ತಿದ್ದಾರೆ ಎಂದು ಆರೋಪಿಸಿದರು.

ಕುಮಾರಸ್ವಾಮಿ ಅವರು ರಾಜ್ಯದ ಸಮಸ್ಯೆಗಳ ಬಗ್ಗೆ ಮಾತನಾಡಲಿ. ನಮಗೆ ಸಲಹೆಗಳನ್ನು ನೀಡಲಿ, ರೈತರ ಸಮಸ್ಯೆಗಳನ್ನು ನಮ್ಮ ಗಮನಕ್ಕೆ ತರಲಿ. ಸ್ಟಿಂಗ್ ಆಪರೇಷನ್ ವಿಚಾರ ಜನರಿಗೆ ಬೇಕಿದೆಯೇ. ಅಗತ್ಯವಿದ್ದರೆ ಈ ಬಗ್ಗೆ ತನಿಖೆ ನಡೆಸಲಾಗುವುದು ಎಂದು ಹೇಳಿದರು.

ಸಿಬಿಐ ಅಥವಾ ಸಿಐಡಿ ಸೇರಿದಂತೆ ಯಾವುದಾದರೂ ತನಿಖಾ ಸಂಸ್ಥೆಯಿಂದ ತನಿಖೆ ನಡೆಯಬಹುದು. ಕುಮಾರಸ್ವಾಮಿ ಅವರಿಗೆ ಅಧಿಕಾರ ಬೇಕಿದೆ. ಅದಕ್ಕಾಗಿ ಈ ರೀತಿಯ ಆರೋಪಗಳನ್ನು ಮಾಡುತ್ತಿದ್ದಾರೆ ಎಂದು ಚಲುವರಾಯಸ್ವಾಮಿ ದೂರಿದರು.

## ಸ್ಟಿಂಗ್ ಆಪರೇಷನ್ ಜನತಾದಳದವರನ್ನು ಬಿಟ್ಟು ಬೇರೆ ಯಾರು ಮಾಡಲು ಸಾಧ್ಯ?

ರಾಜ್ಯ ರಾಜಕೀಯದಲ್ಲಿ ವ್ಯಾಪಕ ಚರ್ಚೆಗೆ ಗ್ರಾಸವಾಗಿರುವ ಸ್ಟಿಂಗ್ ಆಪರೇಷನ್ ವಿಚಾರವಾಗಿ ಪ್ರತಿಕ್ರಿಯಿಸಿರುವ ಜಲಸಂಪನ್ಮೂಲ ಸಚಿವ ಚಲುವರಾಯಸ್ವಾಮಿ ಅವರು ಸಿದ್ದರಾಮಯ್ಯ ವರ್ಚಸ್ಸಿಗೆ ಧಕ್ಕೆ ತರುವ ಪ್ರಯತ್ನ ನಡೆದಿದೆ. ಜನತಾದಳದವರನ್ನು ಬಿಟ್ಟು ಬೇರೆ ಯಾರು ಈ ರೀತಿ ಮಾಡಲು ಸಾಧ್ಯ ಎಂದು ಪ್ರಶ್ನಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, 'ಈ ರೀತಿ ಕೆಲಸ ಮಾಡೋದು ಜನತಾ ದಳದವರು. ಅವರನ್ನು ಬೇರೆ ಯಾರು ಈ ರೀತಿ ಮಾಡಲು ಸಾಧ್ಯವಿಲ್ಲ. ಈಗ ಸಿದ್ದರಾಮಯ್ಯ ಬಗ್ಗೆ ಅನುಕಂಪದಿಂದ ಮಾತನಾಡುತ್ತಿದ್ದಾರೆ. ಯಾವತ್ತೂ ಇಲ್ಲದ ಅನುಕಂಪ ಈಗ ಬಂದಿದೆ. ಪಕ್ಷದಿಂದ ಓಡಿಸಿದಾಗ ಇರಲಿಲ್ಲ.

ಇಂದು ಸಿದ್ದರಾಮಯ್ಯ ಮೇಲೆ ಎಚ್‌ಡಿಕೆಗೆ ಅನುಕಂಪ ಹುಟ್ಟಿದೆ ಪಾಪ ಎಂದು ವ್ಯಂಗ್ಯವಾಡಿದರು. ಸಿದ್ದರಾಮಯ್ಯ ಸಿಎಂ ಆದಾಗ ಬರದೆ ಇರೋದು, ಈಗ ಏಕೆ ಬಂತು. ನಮ್ಮ ಪಕ್ಷದಲ್ಲಿ ಗೊಂದಲ ಹುಟ್ಟಿಸಲು ಎಚ್‌ಡಿಕೆ ಹುನ್ನಾರ ಮಾಡುತ್ತಿದ್ದಾರೆ. ನಾವು ನಮ್ಮ ತಪ್ಪಿದ್ದರೂ ಒಪ್ಪುತ್ತೇವೆ ಮತ್ತು ಸಿದ್ದರಾಮಯ್ಯ ಅವರ ತಪ್ಪಿದ್ದರೂ ಒಪ್ಪುತ್ತೇವೆ. ಆದರೆ, ಇದೆಲ್ಲವೂ ಹುನ್ನಾರದ ಭಾಗ' ಚಲುವರಾಯಸ್ವಾಮಿ ಆರೋಪಿಸಿದ್ದಾರೆ. ಸ್ಟಿಂಗ್ ಆಪರೇಷನ್ ವಿಚಾರವಾಗಿ ಸಿಬಿಐ ತನಿಖೆಗೆ ವಿಪಕ್ಷಗಳ ಆಗ್ರಹ ವಿಚಾರ ಕುರಿತು ಪ್ರತಿಕ್ರಿಯಿಸಿದ ಅವರು, ನಾಳೆ ಸಚಿವ ಸಂಪುಟ ಸಭೆ ಇದೆ. ಸಿಎಂ ಅಥವಾ ಎಲ್ಲ ಸಚಿವರು ಈ ಬಗ್ಗೆ ಯಾವ ತೀರ್ಮಾನ ತೆಗೆದುಕೊಳ್ಳುತ್ತಾರೆ ನೋಡೋಣ. ಆದರೆ, ನನಗೆ ಅದರ ಅವಶ್ಯಕತೆ ಇಲ್ಲ ಅನ್ನಿಸುತ್ತೆ. ತನಿಖೆಗೆ ಅವಶ್ಯಕತೆ ಇದ್ದರೇ ಈ ಬಗ್ಗೆ ಸಿಎಂ ನಿರ್ಧಾರ ಕೈಗೊಳ್ಳುತ್ತಾರೆ ಎಂದರು.

## ಸ್ಟಿಂಗ್ ಆಪರೇಷನ್ ಪ್ರಕರಣಕ್ಕೆ ತೆರೆ ಅಗತ್ಯ: ಬಿ.ಕೆ.ಹರಿಪ್ರಸಾದ್ ಒತ್ತಾಯ

**ಬೆಂಗಳೂರು, ಅ.14:** ರಾಜಕೀಯದಲ್ಲಿ ಕೀಳುಮಟ್ಟದ ಆರೋಪ–ಪ್ರತ್ಯಾರೋಪಗಳು ನಡೆಯಬಾರದು. ಸ್ಟಿಂಗ್ ಆಪರೇಷನ್ ಪ್ರಕರಣಕ್ಕೆ ತೆರೆ ಎಳೆಯಬೇಕು ಎಂದು ಕಾಂಗ್ರೆಸ್ ನಾಯಕ ಬಿ.ಕೆ. ಹರಿಪ್ರಸಾದ್ ಒತ್ತಾಯಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು,ಸ್ಟಿಂಗ್ ಆಪರೇಷನ್ ಕೃತ್ಯವನ್ನು ಯಾರು ಮಾಡಿದ್ದಾರೆ ಎಂಬುದು ತಮಗೆ ಗೊತ್ತಿಲ್ಲ. ರಾಜಕೀಯ ತೆವಲಿಗಾಗಿ ಇಂತಹ ಕೆಲಸಗಳನ್ನು ಮಾಡಲಾಗುತ್ತಿದೆ ಎಂದು ಅಭಿಪ್ರಾಯಪಟ್ಟರು.ಈ ವಿಚಾರವಾಗಿ ತನಿಖೆ ನಡೆಯಬೇಕೋ ಬೇಡವೋ ಎಂಬುದನ್ನು ತಾವು ಹೇಳುವುದಿಲ್ಲ. ಆದರೆ, ಈ ರೀತಿಯ ಕೆಸರೆರಚಾಟ ಸರಿಯಲ್ಲ ಎಂದು ತಿಳಿಸಿದರು.

ಜೆಡಿಎಸ್ ನಾಯಕ ಎಚ್.ಡಿ. ಕುಮಾರಸ್ವಾಮಿ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಪರ ಬ್ಯಾಟಿಂಗ್ ಮಾಡುತ್ತಿದ್ದಾರೆ ಎಂಬ ವಿಚಾರವಾಗಿ ಪ್ರತಿಕ್ರಿಯಿಸಿದ ಹರಿಪ್ರಸಾದ್,ಅವರಿಬ್ಬರ ನಡುವೆ ಹಳೆಯ ಸ್ನೇಹ ಇರಬಹುದು. ಹಳೆಯ ಸ್ನೇಹಿತರ ಬಗ್ಗೆ ಕಾಳಜಿ ಇರುವ ಸಾಧ್ಯತೆಯೂ ಇದೆ ಎಂದು ಹೇಳಿದರು.

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ವಿಚಾರವಾಗಿ ಮಾತನಾಡಿದ ಅವರು, ಫಾರಂ 6 ಕುರಿತು ಚುನಾವಣಾ ಆಯೋಗವೇ ಸಂಪೂರ್ಣವಾಗಿ ನಿರ್ಧಾರ ಕೈಗೊಂಡಿದ್ದರೆ ತಮ್ಮ ಆಕ್ಷೇಪಣೆ ಇರುತ್ತಿರಲಿಲ್ಲ. ಆದರೆ, ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಏಕಾಂಗಿಯಾಗಿ ತೀರ್ಮಾನ ಕೈಗೊಂಡಿದ್ದಾರೆ ಎಂಬುದು ತಮ್ಮ ಆಕ್ಷೇಪವಾಗಿದೆ. ಇದು ಸಂವಿಧಾನ ವಿರೋಧಿ ನಡೆ ಎಂದು ಆರೋಪಿಸಿದ ಅವರು, ಇದರ ವಿರುದ್ಧ ಹೋರಾಟ ಮುಂದುವರಿಯಲಿದೆ ಎಂದು ಸ್ಪಷ್ಟಪಡಿಸಿದರು.

**ವಿಜಯೇಂದ್ರ ಆತುರದಲ್ಲಿದ್ದಾರೆ**

ಕಾಂಗ್ರೆಸ್‌ನಿಂದ ಹಲವು ಸಚಿವರು ಬಿಜೆಪಿಗೆ ಸೇರ್ಪಡೆಯಾಗಲಿದ್ದಾರೆ ಎಂಬ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿಕೆಗೆ ಪ್ರತಿಕ್ರಿಯಿಸಿದ ಹರಿಪ್ರಸಾದ್, ವಿಜಯೇಂದ್ರ ಬಹಳ ಆತುರದಲ್ಲಿದ್ದಾರೆ ಎಂದು ಟೀಕಿಸಿದ ಬಿ.ಕೆ. ಹರಿಪ್ರಸಾದ್, ತಿರುಕನ ಕನಸು ಎಂಬ ಗಾದೆಯನ್ನು ಉಲ್ಲೇಖಿಸಿದ ಅವರು, ಮುಖ್ಯಮಂತ್ರಿ ಕುರ್ಚಿಯಲ್ಲಿ ಕೂರುವ ಕನಸು ಅವರಿಗೆ ಹೆಚ್ಚಾಗಿದೆ ಎಂದು ವ್ಯಂಗ್ಯವಾಡಿದರು.

# ಐಡಿಬಿಐ ಬ್ಯಾಂಕ್ ಮಾರಾಟಕ್ಕೆ ಕೇಂದ್ರ ಸಂಪುಟ ಅಸ್ತು

## ಕೇಂದ್ರ ಸರ್ಕಾರದ ಶೇ.30.48ರಷ್ಟು ಮತ್ತು ಎಲ್ಐಸಿಯ ಶೇ.30.24 ಪಾಲು ಮಾರಾಟ

**ನವದೆಹಲಿ, ಅ. 14:** ಐಡಿಬಿಐ ಬ್ಯಾಂಕ್‌ನ ಕಾರ್ಯತಂತ್ರದ ಪುನರ್ರಚನೆಗೆ ಕೇಂದ್ರ ಸಚಿವ ಸಂಪುಟವು ಬುಧವಾರ (ಅಕ್ಟೋಬರ್ 14, 2026) ಅನುಮೋದನೆ ನೀಡಿದೆ. ಇದರೊಂದಿಗೆ ಫೇರ್‌ಫ್ಯಾಕ್ಸ್ ಸಂಸ್ಥೆಯು 52,878 ಕೋಟಿ ರೂ. ಮೊತ್ತಕ್ಕೆ ಐಡಿಬಿಐ ಬ್ಯಾಂಕ್ ಪಾಲನ್ನು ಖರೀದಿಸಲಿದೆ. ಪ್ರಸ್ತುತ ಐಡಿಬಿಐ ಬ್ಯಾಂಕ್‌ನಲ್ಲಿ ಕೇಂದ್ರ ಸರ್ಕಾರವು ಶೇ.45.5ರಷ್ಟು ಹಾಗೂ ಎಲ್ಐಸಿಯು ಶೇ.49.2ರಷ್ಟು ಪಾಲನ್ನು ಹೊಂದಿವೆ. ಈ ಮಾರಾಟ ಪ್ರಕ್ರಿಯೆಯ ಬಳಿಕ ಬ್ಯಾಂಕ್‌ನಲ್ಲಿ ಕೇಂದ್ರ ಸರ್ಕಾರದ ಪಾಲು ಶೇ.15ಕ್ಕೆ ಮತ್ತು ಭಾರತೀಯ ಜೀವ ವಿಮಾ ನಿಗಮದ ಪಾಲು ಶೇ.19ಕ್ಕೆ ಇಳಿಕೆಯಾಗಲಿದೆ ಎಂದು ಕೇಂದ್ರ ಸರ್ಕಾರ ಪ್ರಕಟಿಸಿದೆ.

ಸರ್ಕಾರವು ತನ್ನ ಪ್ರಕಟಣೆಯಲ್ಲಿ ಈ ಒಪ್ಪಂದವನ್ನು ಕಾರ್ಯತಂತ್ರದ ಬಂಡವಾಳ ಹಿಂತೆಗೆತ ಎನ್ನುವ ಬದಲು ಕಾರ್ಯತಂತ್ರದ ಪುನರ್ರಚನೆ ಎಂದು ಕರೆದಿದೆ. ಅಲ್ಲದೆ, ಇದು ಭಾರತದ ಇತಿಹಾಸದಲ್ಲೇ ಆರ್ಥಿಕ ವಲಯದಲ್ಲಿ ನಡೆಯುತ್ತಿರುವ ಅತಿದೊಡ್ಡ ವಿದೇಶಿ ನೇರ ಹೂಡಿಕೆ ಆಗಿದೆ ಎಂದು ತಿಳಿಸಿದೆ.

ಹಲವು ವರ್ಷಗಳ ಕಾಲ ತೀವ್ರ ಆರ್ಥಿಕ ಸಂಕಷ್ಟ ಎದುರಿಸಿದ್ದ ಐಡಿಬಿಐ ಬ್ಯಾಂಕ್ ಅನ್ನು 2017ರಲ್ಲಿ ಭಾರತೀಯ ರಿಸರ್ವ್




ಬ್ಯಾಂಕ್‌ನ (ಪ್ರಾಂಪ್ಟ್ ಕರೆಕ್ಟಿವ್ ಆಕ್ಷನ್ – ಪಿಸಿಎ) ತ್ವರಿತ ಸುಧಾರಣಾ ಕ್ರಮ) ಚೌಕಟ್ಟಿನಡಿ ತರಲಾಗಿತ್ತು. ಬಳಿಕ 2019ರ ಜನವರಿಯಲ್ಲಿ ಎಲ್ಐಸಿಯು ಬ್ಯಾಂಕ್‌ನಲ್ಲಿ 21,624 ಕೋಟಿ ಬಂಡವಾಳ ಹೂಡುವ ಮೂಲಕ ಪ್ರಮುಖ ಪಾಲುದಾರಿಕೆಯನ್ನು ತನ್ನದಾಗಿಸಿಕೊಂಡಿತ್ತು ಹಾಗೂ ಬದಲಿಗೆ ಆದ್ಯತೆಯ ಷೇರುಗಳನ್ನು ಪಡೆದುಕೊಂಡಿತ್ತು. ಇದರ ಪರಿಣಾಮವಾಗಿ ಬ್ಯಾಂಕ್‌ನಲ್ಲಿ ಸರ್ಕಾರದ ಪಾಲು ಶೇ 51ಕ್ಕಿಂತ ಕೆಳಗಿಳಿದಿತ್ತು. ಅಂದಿನಿಂದ ಆರ್‌ಬಿಐ ಇದನ್ನು ಖಾಸಗಿ ಬ್ಯಾಂಕ್ ಎಂದು ವರ್ಗೀಕರಿಸಿತ್ತು.

ಈ ಹಿನ್ನೆಲೆಯಲ್ಲಿ ಆರ್ಥಿಕ ವ್ಯವಹಾರಗಳ ಸಂಪುಟ ಸಮಿತಿಯು ಐಡಿಬಿಐ ಬ್ಯಾಂಕ್‌ನ ಕಾರ್ಯತಂತ್ರದ ಪುನರ್ರಚನೆಗೆ ಒಪ್ಪಿಗೆ ನೀಡಿದೆ. ಅದರಂತೆ ಬ್ಯಾಂಕ್ನ ಒಟ್ಟು ಶೇ.60.72ರಷ್ಟು ಈಕ್ವಿಟಿ ಪಾಲನ್ನು ಕಾರ್ಯತಂತ್ರದ ಖರೀದಿದಾರರಿಗೆ ಮಾರಾಟ ಮಾಡಲು ನಿರ್ಧರಿಸಲಾಗಿದೆ. ಇದರಲ್ಲಿ ಭಾರತ ಸರ್ಕಾರದ ಶೇ 30.48ರಷ್ಟು ಮತ್ತು ಎಲ್ಐಸಿಯ ಶೇ 30.24ರಷ್ಟು ಪಾಲು ಸೇರಿದೆ.

ಅಂತಿಮವಾಗಿ ಬಿಡ್ಡಿಂಗ್‌ಗೆ ಅರ್ಹತೆ ಪಡೆದಿದ್ದ ಎರಡು ಕಂಪನಿಗಳ ಪೈಕಿ, ಕೆನಡಾ ಮೂಲದ ಫೇರ್‌ಫ್ಯಾಕ್ಸ್ ಫೈನಾನ್ಷಿಯಲ್ ಹೋಲ್ಡಿಂಗ್ಸ್ ಪ್ರತಿ ಷೇರಿಗೆ ರೂ. 81ರಂತೆ ಬಿಡ್ ಸಲ್ಲಿಸುವ ಮೂಲಕ ತನ್ನದಾಗಿಸಿಕೊಂಡಿದೆ.

ಠೇವಣಿ ವಿಮೆ ಮತ್ತು ಸಾಲ ಖಾತರಿ ನಿಗಮದ ಅಡಿಯಲ್ಲಿ ಪ್ರತಿಯೊಬ್ಬ ಠೇವಣಿದಾರರ 5 ಲಕ್ಷ ರೂ.ವರೆಗಿನ ಠೇವಣಿಗೆ ವಿಮಾ ಭದ್ರತೆ ಮುಂದುವರಿಯಲಿದೆ. ಅಲ್ಲದೆ, ಎಲ್ಲಾ ಖಾಸಗಿ ವಾಣಿಜ್ಯ ಬ್ಯಾಂಕ್‌ಗಳಿಗೆ ಅನ್ವಯವಾಗುವ ಶೇ.40ರಷ್ಟು ಆದ್ಯತಾ ವಲಯದ ಸಾಲ ನೀಡುವ ಕಡ್ಡಾಯ ಗುರಿ ಇದಕ್ಕೂ ಅನ್ವಯಿಸುತ್ತದೆ ಎಂದು ಹೆಸರು ಹೇಳದ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಜೊತೆಗೆ ಪ್ರಧಾನ ಮಂತ್ರಿ ಜನ್ ಧನ್ ಯೋಜನೆ, ಪ್ರಧಾನ ಮಂತ್ರಿ ಜೀವನ್ ಜ್ಯೋತಿ ವಿಮಾ ಯೋಜನೆ, ಪ್ರಧಾನ ಮಂತ್ರಿ ಸುರಕ್ಷಾ ವಿಮಾ ಯೋಜನೆ ಹಾಗೂ ಅಟಲ್ ಪಿಂಚಣಿ ಯೋಜನೆಯಂತಹ ಆರ್ಥಿಕ ಒಳಗೊಳ್ಳುವಿಕೆ ಮತ್ತು ಸಾಮಾಜಿಕ ಭದ್ರತಾ ಯೋಜನೆಗಳನ್ನು ಐಡಿಬಿಐ ಬ್ಯಾಂಕ್ ಎಂದಿನಂತೆ ಮುಂದುವರಿಸಲಿದೆ.

# ದೆಹಲಿ ಪೊಲೀಸರಿಂದ ವಿದ್ಯಾರ್ಥಿನಿ ಮೇಲೆ ಹಲ್ಲೆ ಆರೋಪ ಒಂದು ಕಿವಿಯ ಶ್ರವಣಶಕ್ತಿ ನಷ್ಟ ಎಂದ ರಾಹುಲ್ ಗಾಂಧಿ

**ನವದೆಹಲಿ, ಅ.14:** ದೆಹಲಿ ಪೊಲೀಸರ ವಶದಲ್ಲಿದ್ದ ವೇಳೆ ವಿದ್ಯಾರ್ಥಿನಿ ಹಾಗೂ ಎನ್‌ಎಸ್‌ಯುಐ ಕಾರ್ಯಕರ್ತೆ ಮೇಲೆ ಹಲ್ಲೆ ನಡೆಸಲಾಗಿದೆ. ಇದರಿಂದ ಆಕೆ ಒಂದು ಕಿವಿಯ ಶ್ರವಣಶಕ್ತಿಯನ್ನು ಕಳೆದುಕೊಂಡಿದ್ದಾಳೆ ಎಂದು ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಆರೋಪಿಸಿದ್ದಾರೆ.

ದೆಹಲಿಯಲ್ಲಿ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ ನಡೆದ ಪ್ರತಿಭಟನೆಯ ವೇಳೆ ಎನ್‌ಎಸ್‌ಯುಐ ಕಾರ್ಯಕರ್ತರನ್ನು ಪೊಲೀಸರು ವಶಕ್ಕೆ ಪಡೆದಿದ್ದರು. ಈ ಸಂದರ್ಭದಲ್ಲಿ ಪೊಲೀಸರಿಂದ ಹಲ್ಲೆ ನಡೆದಿದೆ ಎಂದು ಆರೋಪಿಸಿರುವ ಗಾಯಾಳು ವಿದ್ಯಾರ್ಥಿಗಳೊಂದಿಗೆ ರಾಹುಲ್ ಗಾಂಧಿ ಬುಧವಾರ ಸುದ್ದಿಗೋಷ್ಠಿ ನಡೆಸಿದರು.

ಕೇರಳ ಮೂಲದ, ದೆಹಲಿ ವಿಶ್ವವಿದ್ಯಾಲಯದಲ್ಲಿ ವ್ಯಾಸಂಗ ಮಾಡುತ್ತಿರುವ ಅಥಿರಾ ಎಂಬ ವಿದ್ಯಾರ್ಥಿನಿಗೆ ಪೊಲೀಸರ ಹಲ್ಲೆಯಿಂದ ಒಂದು ಕಿವಿಯಲ್ಲಿ ಕೇಳಿಸುವ ಶಕ್ತಿ ನಷ್ಟವಾಗಿದೆ ಎಂದು ರಾಹುಲ್ ಗಾಂಧಿ ತಿಳಿಸಿದರು. ಬಳಿಕ ಮಾತನಾಡಿದ ವಿದ್ಯಾರ್ಥಿನಿ ಅಥಿರಾ, ಪ್ರತಿಭಟನಾಕಾರರನ್ನು ವಶಕ್ಕೆ ಪಡೆದಿದ್ದ ಬಸ್‌ನಲ್ಲಿ ಮಹಿಳಾ ಪೊಲೀಸ್ ಸಿಬ್ಬಂದಿ ಇಲ್ಲದಿರುವುದನ್ನು ಪ್ರಶ್ನಿಸಿದೆ, ಬಳಿಕ ಬಸ್ ಕನ್ನಾಟ್ ಪ್ಲೇಸ್ ಪೊಲೀಸ್ ಠಾಣೆಯ



ಮುಂದೆ ನಿಂತಾಗ ಪೊಲೀಸರು ತನ್ನ ಮುಖಕ್ಕೆ ಪದೇಪದೆ ಹೊಡೆದಿದ್ದಾರೆ. ಇದರಿಂದ ಕಣ್ಣು ಮತ್ತು ಕಿವಿಗೆ ಗಾಯಗಳಾಗಿವೆ ಎಂದು ಆರೋಪಿಸಿದ್ದಾಳೆ.

ಇದೇ ವೇಳೆ ಮತ್ತೊಬ್ಬ ಮಹಿಳಾ ಕಾರ್ಯಕರ್ತೆಯೂ ಮಹಿಳಾ ಪೊಲೀಸ್ ಸಿಬ್ಬಂದಿಯಿಂದ ಹಲ್ಲೆಯಾಗಿದೆ ಎಂದು ಆರೋಪಿಸಿದ್ದಾಳೆ. ಮಹಿಳಾ ಪೊಲೀಸ್ ಸಿಬ್ಬಂದಿಯೊಬ್ಬರು ತನ್ನ ಕುತ್ತಿಗೆ ಹಿಡಿದು ಆಸನಕ್ಕೆ ತಳ್ಳಿದರು, ಮುಖದ ಮೇಲೆ ಪರಚಿದರು ಹಾಗೂ ಕಪಾಳಕ್ಕೆ ಹೊಡೆದರು ಎಂದು ಆಕೆ ದೂರಿದ್ದಾಳೆ.

ಪ್ರತಿಭಟನಾಕಾರರ ಮೇಲಿನ ಪೊಲೀಸ್ ಕ್ರಮಕ್ಕೆ ಆಕ್ಷೇಪ ವ್ಯಕ್ತಪಡಿಸಿದ ರಾಹುಲ್ ಗಾಂಧಿ, ಪ್ರತಿಭಟನೆಯ ಸಂದರ್ಭದಲ್ಲಿ ನಡೆಯುವ ಹಲ್ಲೆಗಳ ಕುರಿತು ವಿದ್ಯಾರ್ಥಿಗಳು ವಿಡಿಯೊ ಸಾಕ್ಷ್ಯಗಳನ್ನು ಸಂಗ್ರಹಿಸಿ ತಮ್ಮ ಬಳಿ ಕಳುಹಿಸಬೇಕು ಎಂದು ಮನವಿ ಮಾಡಿದರು. ಪ್ರಕರಣಕ್ಕೆ ಸಂಬಂಧಿಸಿದ ಸಾಕ್ಷ್ಯಗಳನ್ನು ಪರಿಶೀಲಿಸಿ ತಪ್ಪಿತಸ್ಥರ ವಿರುದ್ಧ ಕ್ರಮ ಕೈಗೊಳ್ಳಲು ಪ್ರಯತ್ನಿಸುವುದಾಗಿ ತಿಳಿಸಿದರು.

# ರಾಂಕಾ, ಸೌರವ್ ಬಿಡುಗಡೆಗೆ ಆಗ್ರಹ

**ನವದೆಹಲಿ, ಅ. 14:** ಏಕಪಕ್ಷೀಯ ನಿರ್ಧಾರ ಕೈಗೊಂಡ ಮುಖ್ಯ ಚುನಾವಣಾ ಆಯುಕ್ತ (ಸಿಇಸಿ) ಗ್ಯಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ ನಡೆಯುತ್ತಿರುವ ಪ್ರತಿಭಟನೆ ವೇಳೆ ಕಾಕ್ರೋಚ್ ಜನತಾ ಪಾರ್ಟಿ (ಸಿಜೆಪಿ) ನಾಯಕರನ್ನು ಬಂಧಿಸಿರುವುದನ್ನು ದೇಶದ ವಿವಿಧ ವಿಪಕ್ಷ ನಾಯಕರು ತೀವ್ರವಾಗಿ ಖಂಡಿಸಿದ್ದಾರೆ.

ಈ ನಾಯಕರನ್ನು ತಕ್ಷಣವೇ ಬಿಡುಗಡೆ ಮಾಡುವಂತೆ ಆಗ್ರಹಿಸಿದ್ದಾರೆ. ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ನೆಪದಲ್ಲಿ ನಡೆದಿರುವ ಅಕ್ರಮಗಳನ್ನು ವಿರೋಧಿಸಿ ಸಿಇಸಿ ವಿರುದ್ಧ ಜಂತರ್ ಮಂತರ್‌ನಲ್ಲಿ ಪ್ರತಿಭಟನೆ ನಡೆಸಲು ಯತ್ನಿಸಿದ ಸಿಜೆಪಿ ಮುಖಂಡರಾದ ಸೌರವ್ ದಾಸ್, ಅಶುತೋಷ್ ರಾಂಕಾ ಮತ್ತು ಅಜಿಂಕ್ಯ ಶಿಂದೆ ಅವರನ್ನು ದೆಹಲಿ ಪೊಲೀಸರು ವಶಕ್ಕೆ ಪಡೆದು ಬಂಧಿಸಿದ್ದಾರೆ. ಆದರೆ ಅನುಮತಿಯಿಲ್ಲದೆ ಜಂತರ್ ಮಂತರ್ ಪ್ರವೇಶಿಸಿದ್ದಾರೆ ಎಂಬ ಆರೋಪದ ಮೇಲೆ ಈ ಕ್ರಮ ಕೈಗೊಳ್ಳಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಸದ್ಯ ಅಜಿಂಕ್ಯ ಶಿಂದೆ ಅವರನ್ನು ಬಿಡುಗಡೆ ಮಾಡಲಾಗಿದೆ. ಸದ್ಯ ಸೌರವ್ ಮತ್ತು ರಾಂಕಾ ಅವರಿಗೆ ಐದು ದಿನಗಳ ನ್ಯಾಯಾಂಗ ಬಂಧನವನ್ನು ವಿಧಿಸಲಾಗಿದೆ.

ಇನ್ನು ಲೋಕಸಭೆ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ಎಕ್ಸ್‌ನಲ್ಲಿ ಪೋಸ್ಟ್ ಮಾಡಿ, ಜಂತರ್ ಮಂತರ್‌ನಲ್ಲಿ ಶಾಂತಿಯುತ ಪ್ರತಿಭಟನೆಯ ವೇಳೆ ತ್ರಿವರ್ಣ ಧ್ವಜವನ್ನು ಹಾರಿಸುವುದು ಅಪರಾಧವಲ್ಲ. ಇದಕ್ಕಾಗಿ ಯುವಕರನ್ನು ಜೈಲಿಗೆ ಕಳುಹಿಸುವುದು ಹೇಡಿತನದ ಕೆಲಸ. ವಿದ್ಯಾರ್ಥಿಗಳು, ಯುವಕರು, ಪತ್ರಕರ್ತರು ಮತ್ತು ಇಂಡಿಯಾ ಒಕ್ಕೂಟ ಹೀಗೆ ವಿವಿಧ ವೇದಿಕೆಗಳಿದ್ದರೂ ಉದ್ದೇಶವೊಂದೇ ಆಗಿದೆ. ನಮ್ಮ ಸಾಂವಿಧಾನಿಕ ಹಕ್ಕುಗಳನ್ನು ಆಗ್ರಹಿಸುವ ನಾಗರಿಕರ ಹೋರಾಟವಿದು. ಜಂತರ್ ಮಂತರ್ ಭಾರತದ ಜನರಿಗೆ ಸೇರಿದ್ದು. ನಾವು ಅದನ್ನು ಮರಳಿ ಪಡೆಯುತ್ತೇವೆ ಎಂದು ಹೇಳಿದ್ದಾರೆ.

# ದೆಹಲಿಯಲ್ಲಿ ಪ್ರತಿಭಟನೆ ವೇಳೆ ಪೊಲೀಸರ ಮೇಲೆ ಹಲ್ಲೆ: ಕೈ ನಾಯಕರು, ವಿದ್ಯಾರ್ಥಿಗಳ ವಿರುದ್ಧ ಪ್ರಕರಣ ದಾಖಲು

**ನವದೆಹಲಿ, ಅ.14:** ದೆಹಲಿಯಲ್ಲಿ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ಅವರ ರಾಜೀನಾಮೆಗೆ ಆಗ್ರಹಿಸಿ ನಡೆದ ಪ್ರತಿಭಟನೆ ವೇಳೆ ಕಾಂಗ್ರೆಸ್ ನಾಯಕರು ಹಾಗೂ ವಿದ್ಯಾರ್ಥಿ ಕಾರ್ಯಕರ್ತರು ಪೊಲೀಸರ ಮೇಲೆ ಹಲ್ಲೆ ನಡೆಸಿದ್ದಾರೆ ಎಂಬ ಆರೋಪವೂ ಕೇಳಿಬಂದಿದೆ. ಈ ಸಂಬಂಧ ದೆಹಲಿ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದು, ಘಟನೆಗೆ ಸಂಬಂಧಿಸಿದ ವಿಡಿಯೊ ದೃಶ್ಯಗಳನ್ನು ಪರಿಶೀಲಿಸುತ್ತಿದ್ದಾರೆ.

ಅಕ್ಟೋಬರ್ 7ರಂದು ದೆಹಲಿಯಲ್ಲಿ ಇಂಡಿಯಾ ಮೈತ್ರಿಕೂಟದ ಸಂಸದರು ನಡೆಸಿದ ಪ್ರತಿಭಟನೆ ಸಂದರ್ಭದಲ್ಲಿ ಪೊಲೀಸರು ಮತ್ತು ಪ್ರತಿಭಟನಾಕಾರರ ನಡುವೆ ತಳ್ಳಾಟ, ನೂಕಾಟ ನಡೆದಿದೆ. ಈ ವೇಳೆ ಕರ್ತವ್ಯ ನಿರತ ಪೊಲೀಸ್ ಸಿಬ್ಬಂದಿಗೆ ಹಲ್ಲೆ ನಡೆಸಲಾಗಿದೆ ಹಾಗೂ ಅವರ ಕರ್ತವ್ಯಕ್ಕೆ ಅಡ್ಡಿಪಡಿಸಲಾಗಿದೆ ಎಂದು ಪೊಲೀಸ್ ಮೂಲಗಳು ಆರೋಪಿಸಿವೆ. ಈ ಸಂಬಂಧ ಲೋಕಸಭೆ ವಿರೋಧ



ಪಕ್ಷದ ನಾಯಕ ರಾಹುಲ್ ಗಾಂಧಿ ಮತ್ತು ಕಾಂಗ್ರೆಸ್ ನಾಯಕಿ ಪ್ರಿಯಾಂಕಾ ಗಾಂಧಿ ವಾದ್ರಾ ವಿರುದ್ಧವೂ ಎಫ್‌ಐಆರ್‌ಗಳು ದಾಖಲಾಗಿವೆ.

ಪ್ರತಿಭಟನೆಯ ಸಂದರ್ಭದಲ್ಲಿ ಮಹಿಳಾ ಪೊಲೀಸ್ ಸಿಬ್ಬಂದಿಯೊಂದಿಗೆ ಕೆಲವರು ಘರ್ಷಣೆಯಲ್ಲಿ ತೊಡಗಿರುವ ದೃಶ್ಯಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡಿದ್ದವು. ಕೆಲವು ದೃಶ್ಯಗಳಲ್ಲಿ ಪ್ರತಿಭಟನಾಕಾರರು ಪೊಲೀಸರನ್ನು ತಳ್ಳುತ್ತಿರುವುದು ಹಾಗೂ ಪೊಲೀಸ್ ಸಿಬ್ಬಂದಿಯೊಂದಿಗೆ ವಾಗ್ವಾದ ನಡೆಸುತ್ತಿರುವುದು ಕಂಡುಬಂದಿದೆ. ಒಬ್ಬ ಪೊಲೀಸ್ ಸಿಬ್ಬಂದಿಗೆ ಗಾಯಗಳಾಗಿವೆ. ಪೊಲೀಸರು ಸಿಸಿಟಿವಿ ಮತ್ತು ಮೊಬೈಲ್ ವಿಡಿಯೊಗಳನ್ನು ಪರಿಶೀಲಿಸಿ, ಘರ್ಷಣೆಯಲ್ಲಿ ಭಾಗಿಯಾದವರ ಪಾತ್ರವನ್ನು ಗುರುತಿಸುವ ಕಾರ್ಯ ಕೈಗೊಂಡಿದ್ದಾರೆ.

ಇದೇ ವೇಳೆ, ಅಕ್ಟೋಬರ್ 5ರಂದು ನಡೆದ ಪ್ರತ್ಯೇಕ ಪ್ರತಿಭಟನೆಯ ಸಂದರ್ಭದಲ್ಲಿ ಕಾಂಗ್ರೆಸ್‌ನ ವಿದ್ಯಾರ್ಥಿ ಘಟಕವಾದ ಎನ್‌ಎಸ್‌ಯುಐ ಕಾರ್ಯಕರ್ತನೊಬ್ಬ ಸಿಐಎಸ್‌ಎಫ್ ಸಿಬ್ಬಂದಿಯ ಕೈಗೆ ಚೂರಿಯಿಂದ ಗಾಯಗೊಳಿಸಿದ್ದಾನೆ ಎಂಬ ಆರೋಪವೂ ಕೇಳಿಬಂದಿತ್ತು. ಈ ಘಟನೆ ಸೇರಿದಂತೆ ಪ್ರತಿಭಟನೆಯಲ್ಲಿನ ಹಿಂಸಾಚಾರಕ್ಕೆ ಸಂಬಂಧಿಸಿದಂತೆ ಪೊಲೀಸರು ನಾಲ್ಕು ಎಫ್‌ಐಆರ್‌ಗಳನ್ನು ದಾಖಲಿಸಿ, 18 ಮಂದಿಯನ್ನು ಬಂಧಿಸಿದ್ದರು ಆದರೆ, ಎನ್‌ಎಸ್‌ಯುಐ ಈ ಆರೋಪಗಳನ್ನು ನಿರಾಕರಿಸಿ, ತನ್ನ ಕಾರ್ಯಕರ್ತರ ವಿರುದ್ಧ ಸುಳ್ಳು ಪ್ರಕರಣ ದಾಖಲಿಸಲಾಗಿದೆ ಎಂದು ಆರೋಪಿಸಿತ್ತು.

# ಎಸ್‌ಐಆರ್: ಆಯೋಗದ ಕ್ರಮ ಪ್ರಶ್ನಿಸಿ ಸುಪ್ರೀಂ ಮೆಟ್ಟಿಲೇರಿದ ಓವೈಸಿ

**ನವದೆಹಲಿ, ಅ. 14:** ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ನಡೆಸುತ್ತಿರುವ ಚುನಾವಣಾ ಆಯೋಗದ ಕ್ರಮವನ್ನು ಪ್ರಶ್ನಿಸಿ, ಎಐಎಂಐಎಂ ಅಧ್ಯಕ್ಷ, ಹೈದರಾಬಾದ್ ಸಂಸದ ಅಸಾದುದ್ದೀನ್ ಓವೈಸಿ ಸುಪ್ರೀಂ ಕೋರ್ಟ್ ಮೆಟ್ಟಿಲೇರಿದ್ದಾರೆ.

ಬುಧವಾರ ಓವೈಸಿ ಪರ ವಕೀಲ ನಿಜಾಮುದ್ದೀನ್ ಪಾಷಾ ಅವರು ಮುಖ್ಯ ನ್ಯಾಯಮೂರ್ತಿ ಸೂರ್ಯ ಕಾಂತ್ ಮತ್ತು ನ್ಯಾಯಮೂರ್ತಿ ಜೋಯ್ಮಲ್ಯ ಬಾಗ್ಚಿ ಅವರನ್ನೊಳಗೊಂಡ ಪೀಠದ ಮುಂದೆ ಈ ಅರ್ಜಿಯನ್ನು ಉಲ್ಲೇಖಿಸಿ, ತುರ್ತು ವಿಚಾರಣೆಗೆ ಕೋರಿದರು.

ಚುನಾವಣಾ ಆಯೋಗ ನಡೆಸುತ್ತಿರುವ ಎಸ್‌ಐಆರ್ ಪ್ರಕ್ರಿಯೆಯಲ್ಲಿ ಮತದಾರರ ಹೆಸರುಗಳನ್ನು ಅಕ್ರಮವಾಗಿ ಅಥವಾ ದೊಡ್ಡ ಮಟ್ಟದಲ್ಲಿ ತೆಗೆದುಹಾಕಲಾಗುತ್ತಿದೆ. ಆಯೋಗವು ಎಸ್‌ಐಆರ್ ಪ್ರಕ್ರಿಯೆಯನ್ನು ಕೈಗೊಂಡಿರುವ ವಿಧಾನ ಕಾನೂನುಬಾಹಿರ ಮತ್ತು ಸಂವಿಧಾನಬಾಹಿರವಾಗಿದೆ ಎಂದು ಓವೈಸಿ ತಮ್ಮ ಅರ್ಜಿಯಲ್ಲಿ ಆಕ್ಷೇಪಿಸಿದ್ದಾರೆ.

ಹಾಗೆಯೇ ಈಗಾಗಲೇ ಎಸ್‌ಐಆರ್ ವಿರುದ್ಧ ಸಲ್ಲಿಸಲಾಗಿರುವ ಇತರ ಅರ್ಜಿಗಳ ಜೊತೆಗೇ ತಮ್ಮ ಅರ್ಜಿಯನ್ನೂ ಸೇರಿಸಿ ವಿಚಾರಣೆ ನಡೆಸಬೇಕೆಂದು



ಓವೈಸಿ ಪರ ವಕೀಲರು ಕೋರಿದ್ದಾರೆ.

ಅರ್ಜಿಯ ಉಲ್ಲೇಖವನ್ನು ಆಲಿಸಿದ ಸುಪ್ರೀಂ ಕೋರ್ಟ್ ಪೀಠವು, ವಿಷಯವನ್ನು ಪರಿಶೀಲಿಸಿ ಸಂಬಂಧಿಸಿದ ಇತರ ಅರ್ಜಿಗಳೊಂದಿಗೆ ಪಟ್ಟಿ ಮಾಡುವುದಾಗಿ ತಿಳಿಸಿದೆ. ಇನ್ನೊಂದೆಡೆ ಈಗಾಗಲೇ ಇಂಡಿಯಾ ಒಕ್ಕೂಟದ ನಾಯಕರು ಎಸ್‌ಐಆರ್ ವಿರುದ್ಧ, ಏಕಪಕ್ಷೀಯ ನಿರ್ಧಾರ ಕೈಗೊಂಡ ಮುಖ್ಯ ಚುನಾವಣಾ ಆಯುಕ್ತ ಗ್ಯಾನೇಶ್ ಕುಮಾರ್ ರಾಜೀನಾಮೆಗೆ ಆಗ್ರಹಿಸಿ ಅರ್ಜಿ ಸಲ್ಲಿಸಿದ್ದಾರೆ.

# ಹೈಜಾಕ್ ಎಚ್ಚರಿಕೆ: ಜೈಪುರದಲ್ಲಿ ಏರ್‌ಇಂಡಿಯಾ ವಿಮಾನದ ತುರ್ತು ಭೂಸ್ಪರ್ಶ

**ನವದೆಹಲಿ, ಅ.14:** ಹೈಜಾಕ್ ಎಚ್ಚರಿಕೆ ಹಿನ್ನೆಲೆಯಲ್ಲಿ ಫ್ರಾಂಕ್‌ಫರ್ಟ್‌ನಿಂದ ದೆಹಲಿಗೆ ಬರುತ್ತಿದ್ದ ಏರ್ ಇಂಡಿಯಾ ವಿಮಾನವನ್ನು ರಾಜಸ್ಥಾನದ ಜೈಪುರ ವಿಮಾನ ನಿಲ್ದಾಣಕ್ಕೆ ತಿರುಗಿಸಿ ತುರ್ತು ಭೂಸ್ಪರ್ಶ ಮಾಡಿಸಲಾಗಿದೆ. ವಿಮಾನದಲ್ಲಿದ್ದ ಎಲ್ಲ ಪ್ರಯಾಣಿಕರು ಮತ್ತು ಸಿಬ್ಬಂದಿ ಸುರಕ್ಷಿತವಾಗಿದ್ದು, ಭದ್ರತಾ ತಪಾಸಣೆ ಬಳಿಕ ವಿಮಾನಕ್ಕೆ ಅಧಿಕಾರಿಗಳು ಅನುಮತಿ ನೀಡಿದ್ದಾರೆ ಎಂದು ಏರ್ ಇಂಡಿಯಾ ಸ್ಪಷ್ಟಪಡಿಸಿದೆ.

ಅಕ್ಟೋಬರ್ 14ರಂದು ಕಾರ್ಯಾಚರಣೆ ನಡೆಸುತ್ತಿದ್ದ ಏರ್ ಇಂಡಿಯಾದ ಎಐ–2030 ವಿಮಾನದಲ್ಲಿ ಸಂಭವಿಸಿದ ಭದ್ರತಾ ಎಚ್ಚರಿಕೆಯಿಂದಾಗಿ ಈ ಕ್ರಮ ಕೈಗೊಳ್ಳಲಾಯಿತು.

ವಿಮಾನದಿಂದ ಹೈಜಾಕ್‌ಗೆ ಸಂಬಂಧಿಸಿದ ಸಂಕೇತ ರವಾನೆಯಾದ ಮಾಹಿತಿ ಲಭ್ಯವಾದ ಹಿನ್ನೆಲೆಯಲ್ಲಿ ವಾಯು ಸಂಚಾರ ನಿಯಂತ್ರಣ ಅಧಿಕಾರಿಗಳು ವಿಮಾನದ ಮಾರ್ಗ ಬದಲಿಸಿ ಜೈಪುರದಲ್ಲಿ ಇಳಿಯುವಂತೆ ಸೂಚಿಸಿದರು.

ಬೋಯಿಂಗ್ 787–9 ಮಾದರಿಯ ವಿಮಾನವು ಬೆಳಗ್ಗೆ 9.35ಕ್ಕೆ ಜೈಪುರ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಸುರಕ್ಷಿತವಾಗಿ ಇಳಿಯಿತು. ಬಳಿಕ ವಿಮಾನವನ್ನು ಪ್ರತ್ಯೇಕ ಸ್ಥಳದಲ್ಲಿ ನಿಲ್ಲಿಸಿ ಭದ್ರತಾ ಸಿಬ್ಬಂದಿ ತಪಾಸಣೆ ನಡೆಸಿದರು. ಪ್ರಯಾಣಿಕರನ್ನು ವಿಮಾನದಿಂದ ಕೆಳಗಿಳಿಸಿ ಅವರನ್ನೂ ಹಾಗೂ ಅವರ ಸಾಮಾನುಗಳನ್ನೂ ಪರಿಶೀಲಿಸಲಾಯಿತು.

ವಿಮಾನದಿಂದ ಕೆಲವೇ ಕ್ಷಣಗಳ ಕಾಲ




ಸ್ಕ್ವಾಕ್ 7500 ಸಂಕೇತ ರವಾನೆಯಾಗಿತ್ತು ಎಂಬ ಮಾಹಿತಿ ವರದಿಯಾಗಿದೆ. ವಿಮಾನ ಅಪಹರಣ ಅಥವಾ ಅಕ್ರಮ ಹಸ್ತಕ್ಷೇಪದ ಪರಿಸ್ಥಿತಿಯನ್ನು ಸೂಚಿಸಲು ಈ ಸಂಕೇತವನ್ನು ಬಳಸಲಾಗುತ್ತದೆ. ಆದರೆ, ಈ ಸಂಕೇತ ರವಾನೆಯಾಗಲು ನಿಖರ ಕಾರಣವೇನು ಎಂಬುದು ತನಿಖೆಯಿಂದ ತಿಳಿದುಬರಬೇಕಿದೆ.

ಏರ್ ಇಂಡಿಯಾ ನೀಡಿದ ಸ್ಪಷ್ಟನೆಯ ಪ್ರಕಾರ, ಸಂಬಂಧಪಟ್ಟ ಭದ್ರತಾ ಸಂಸ್ಥೆಗಳು ಅಗತ್ಯ ತಪಾಸಣೆ ನಡೆಸಿ ವಿಮಾನ ಮತ್ತು ಸಿಬ್ಬಂದಿಗೆ ಅನುಮತಿ ನೀಡಿವೆ. ಪ್ರಯಾಣಿಕರನ್ನು ಭದ್ರತಾ ಪರಿಶೀಲನೆಗೆ ಒಳಪಡಿಸಿದ ಬಳಿಕ ಅವರು ಮತ್ತೆ ವಿಮಾನ ಹತ್ತಿದ್ದಾರೆ. ಪ್ರಯಾಣಿಕರಿಗೆ ಉಂಟಾದ ಅನಾನುಕೂಲಕ್ಕಾಗಿ ಸಂಸ್ಥೆ ವಿಷಾದ ವ್ಯಕ್ತಪಡಿಸಿದ್ದು, ಪ್ರಯಾಣಿಕರು ಮತ್ತು ಸಿಬ್ಬಂದಿಯ ಸುರಕ್ಷತೆಯೇ ತನ್ನ ಮೊದಲ ಆದ್ಯತೆ ಎಂದು ತಿಳಿಸಿದೆ.

# ದುರ್ಗಾಪೂಜೆ ಪೆಂಡಾಲ್‌ನಲ್ಲಿ ಮಮತಾ ಮೇಲೆ ದಾಳಿಗೆ ಯತ್ನ

**ಕೋಲ್ಕತ್ತಾ, ಅ.14:** ಪಶ್ಚಿಮ ಬಂಗಾಳದಲ್ಲಿ ಇತ್ತೀಚೆಗೆ ಆಡಳಿತ ಬದಲಾವಣೆಯಾಗಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದಿದೆ. ಈ ಹಿಂದೆಯೇ ರಾಜಕೀಯ ಹಿಂಸಾಚಾರಕ್ಕೆ ಸಾಕ್ಷಿಯಾಗಿರುವ ಪಶ್ಚಿಮ ಬಂಗಾಳದಲ್ಲಿ ಬಿಜೆಪಿ ಸರ್ಕಾರ ಬಂದ ಬಳಿಕ ರಾಜಕೀಯ ವೈರತ್ವ ಮತ್ತು ಹಿಂಸಾಚಾರ ತೀವ್ರಗೊಂಡಿದೆ. ಅದರಲ್ಲೂ ಮುಖ್ಯವಾಗಿ ತೃಣಮೂಲ ಕಾಂಗ್ರೆಸ್ (ಟಿಎಂಸಿ) ಮುಖಂಡರು, ಕಾರ್ಯಕರ್ತರೇ ಗುರಿಯಾಗುತ್ತಿದ್ದಾರೆಯೇ ಎಂಬ ಪ್ರಶ್ನೆಯನ್ನು ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದ ಬಳಿಕ ನಡೆದ ಸರಣಿ ದಾಳಿಗಳು ಹುಟ್ಟಿಹಾಕಿವೆ.

ಹೀಗಿರುವಾಗ ಮಂಗಳವಾರವಷ್ಟೇ ದಕ್ಷಿಣ ಕೋಲ್ಕತ್ತಾದ ಕಾಳಿಘಾಟ್‌ನಲ್ಲಿರುವ ಮಿಲನ್ ಸಂಘ ದುರ್ಗಾ ಪೂಜೆ ಪಂಡಾಲ್ ಉದ್ಘಾಟನೆಗೆ ತೆರಳಿದ್ದ ಟಿಎಂಸಿ ನಾಯಕಿ, ಮಾಜಿ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಅವರ ಮೇಲೆ ದಾಳಿಗೆ ಯತ್ನ ನಡೆದಿರುವುದು ಸದ್ಯ ರಾಜಕೀಯ ಸಂಚಲನ ಮೂಡಿಸಿದೆ.

ಮಮತಾ ಬ್ಯಾನರ್ಜಿ ಅವರು ರಾಜ್ಯಸಭಾ ಸಂಸದೆ ಡೋಲಾಸೇನ್ ಅವರೊಂದಿಗೆ ಕಾಳಿಘಾಟ್ ಪ್ರದೇಶದ ದುರ್ಗಾ ಪೂಜಾ ಪಂಡಾಲ್ ಉದ್ಘಾಟಿಸಲು ತೆರಳಿದ್ದರು. ಸಂಜೆ ಸುಮಾರು 6 ಗಂಟೆಯ ವೇಳೆಗೆ ಅವರು ಪಂಡಾಲ್ನತ್ತ ಸಾಗುತ್ತಿದ್ದಾಗ, ತನಿಷ್ಕಾ ಸಾಹಾ ಎಂದು ಗುರುತಿಸಲಾದ ಯುವತಿಯೊಬ್ಬಳು ಝೆಡ್ ಪ್ಲಸ್ ಭದ್ರತಾ ವಲಯವನ್ನು ಭೇದಿಸಿ ಮಮತಾ ಬ್ಯಾನರ್ಜಿ ಅವರತ್ತ ನುಗ್ಗಿದ್ದಾಳೆ.

ಅಷ್ಟಕ್ಕೂ ಈ ಭದ್ರತೆಯನ್ನು ಭೇದಿಸಿ ಬಂದದ್ದು ಹೇಗೆ ಎಂಬ ಪ್ರಶ್ನೆಯೂ ಸದ್ಯ ಚರ್ಚೆಗೆ ಗ್ರಾಸವಾಗುತ್ತಿದೆ.

ಆ ಯುವತಿಯು ಮಮತಾ ಬ್ಯಾನರ್ಜಿ ಅವರ ಸೀರೆಯನ್ನು ಎಳೆದು, ಅವರ ಮೇಲೆ ಕೈಮಾಡಲು ಯತ್ನಿಸಿದ್ದಾಳೆ. ಅಷ್ಟೇ ಅಲ್ಲದೆ, ಆಕೆಯ ಬಳಿ ಚಾಕು ಸಹ ಇತ್ತು ಎಂದು ಟಿಎಂಸಿ ಮುಖಂಡರು ಆರೋಪಿಸಿದ್ದಾರೆ. ತಕ್ಷಣವೇ ಎಚ್ಚೆತ್ತ ಪಕ್ಷದ ಬೆಂಬಲಿಗರು ಮತ್ತು ಪೊಲೀಸರು ಆಕೆಯನ್ನು ವಶಕ್ಕೆ ಪಡೆದು ಕಾಳಿಘಾಟ್ ಪೊಲೀಸ್ ಠಾಣೆಗೆ ಒಪ್ಪಿಸಿದ್ದಾರೆ. ಈ ಘಟನೆಯು ಮಾಜಿ ಸಿಎಂ ಅವರ ಭದ್ರತೆಯಲ್ಲಿ ಸಂಭವಿಸಿದ ದೊಡ್ಡ ಲೋಪವನ್ನು ಎತ್ತಿ ತೋರಿಸಿದ್ದು, ರಾಜ್ಯಾದ್ಯಂತ ತೀವ್ರ ಆಕ್ರೋಶಕ್ಕೆ ಕಾರಣವಾಗಿದೆ.

ತಮ್ಮ ಮೇಲಿನ ಆರೋಪಗಳನ್ನು ಸಂಪೂರ್ಣವಾಗಿ ತಳ್ಳಿಹಾಕಿರುವ ಬಿಜೆಪಿ ನಾಯಕರು, ಈ ಘಟನೆಗಳಿಗೂ ನಮಗೂ ಯಾವುದೇ ಸಂಬಂಧವಿಲ್ಲ. ರಾಜ್ಯದಲ್ಲಿ ಹಿಂದಿನ ಟಿಎಂಸಿ ಆಡಳಿತದಲ್ಲಿ ನಡೆದ ದೌರ್ಜನ್ಯ ಮತ್ತು ಭ್ರಷ್ಟಾಚಾರದಿಂದ ರೋಸಿಹೋಗಿರುವ ಸಾರ್ವಜನಿಕರ ಆಕ್ರೋಶವೇ ಹೀಗೆ ವ್ಯಕ್ತವಾಗುತ್ತಿದೆ ಎಂದು ಸಮರ್ಥಿಸಿಕೊಂಡಿದ್ದಾರೆ.

# ರೈಲ್ವೆ ನೌಕರರಿಗೆ ದೀಪಾವಳಿ ಉಡುಗೊರೆ: 2,009 ಕೋಟಿ ರೂ. ಬೋನಸ್‌ಗೆ ಕೇಂದ್ರ ಸಚಿವ ಸಂಪುಟ ಅಸ್ತು

**ನವದೆಹಲಿ, ಅ.14:** ದೇಶದ ರೈಲ್ವೆ ನೌಕರರಿಗೆ ದೀಪಾವಳಿ ಹಬ್ಬದ ಮುನ್ನ ಕೇಂದ್ರ ಸರ್ಕಾರ ಸಿಹಿಸುದ್ದಿ ನೀಡಿದೆ. ಪ್ರಧಾನಿ ನರೇಂದ್ರ ಮೋದಿ ಅಧ್ಯಕ್ಷತೆಯಲ್ಲಿ ನಡೆದ ಕೇಂದ್ರ ಸಚಿವ ಸಂಪುಟ ಸಭೆಯಲ್ಲಿ ರೈಲ್ವೆ ನೌಕರರಿಗೆ ಉತ್ಪಾದಕತೆ ಆಧಾರಿತ ಬೋನಸ್ ನೀಡಲು ಅನುಮೋದನೆ ನೀಡಲಾಗಿದೆ. ಇದಕ್ಕಾಗಿ ಒಟ್ಟು 2,009 ಕೋಟಿ ರೂ. ಅನುದಾನ ಮೀಸಲಿಡಲಾಗಿದ್ದು, 11.4 ಲಕ್ಷ ರೈಲ್ವೆ ನೌಕರರಿಗೆ ಇದರ ಪ್ರಯೋಜನ ದೊರೆಯಲಿದೆ.

ರೈಲ್ವೆ ಕಾರ್ಯಾಚರಣೆಯಲ್ಲಿ ನೌಕರರ



ಕೊಡುಗೆ ಮತ್ತು ಕಾರ್ಯಕ್ಷಮತೆಯನ್ನು ಗುರುತಿಸಿ ಈ ಬೋನಸ್ ನೀಡಲು ನಿರ್ಧರಿಸಲಾಗಿದೆ. ಸರಕು ಸಾಗಣೆ ಹಾಗೂ ಪ್ರಯಾಣಿಕರ ಸಾರಿಗೆಯಲ್ಲಿ ರೈಲ್ವೆ ಇಲಾಖೆ ಸಾಧಿಸಿರುವ ಪ್ರಗತಿಯಲ್ಲಿ ನೌಕರರ ಪರಿಶ್ರಮ ಪ್ರಮುಖ ಪಾತ್ರ ವಹಿಸಿದೆ. ಹಬ್ಬದ ಸಂದರ್ಭದಲ್ಲಿ ನೌಕರರಿಗೆ ಹೆಚ್ಚುವರಿ ಆರ್ಥಿಕ ನೆರವು ಒದಗಿಸುವ ಉದ್ದೇಶವೂ ಈ ನಿರ್ಧಾರದ ಹಿಂದಿದೆ.

ಉತ್ಪಾದಕತೆ ಆಧಾರಿತ ಬೋನಸ್ ರೈಲ್ವೆ ನೌಕರರಿಗೆ ನೀಡಲಾಗುವ ವಾರ್ಷಿಕ ಪ್ರೋತ್ಸಾಹಧನವಾಗಿದೆ. ಅರ್ಹ ನೌಕರರಿಗೆ ನಿಗದಿತ ನಿಯಮಗಳ ಪ್ರಕಾರ ಈ ಮೊತ್ತ ಪಾವತಿಸಲಾಗುತ್ತದೆ. ಬೋನಸ್‌ನ ಮೊತ್ತ ಮತ್ತು ಅರ್ಹತೆ ನೌಕರರಿಗೆ ಅನ್ವಯಿಸುವ ನಿಯಮಗಳನ್ನು ಅವಲಂಬಿಸಿರುತ್ತದೆ.

# ಮಹಾತ್ಮರಿಗೆ ಶುದ್ಧ ಮನಸ್ಸಿನಿಂದ ಸಮರ್ಪಿಸಿದ್ದು ಹತ್ತಾಗಿ ಮರಳುತ್ತದೆ: ರಾಘವೇಶ್ವರ ಭಾರತೀ ಅಭಿಮತ

**ಬೆಂಗಳೂರು, ಅ.14:** ಮಹಾತ್ಮರಿಗೆ ಏನನ್ನೇ ಕೊಟ್ಟರು ಅದು ಹತ್ತಾಗಿ ನಮಗೆ ಮರಳಿ ಬರುತ್ತದೆ. ಹಾಗೆಂದು ಇದು ವ್ಯಾಪಾರವಲ್ಲ. ಒಂದಕ್ಕೆ ಒಂದನ್ನು ಹಿಂತಿರುಗಿಸಿದರೆ ಅದು ವ್ಯಾಪಾರ ಎನಿಸುತ್ತದೆ. ಆದರೆ ಮಹಾತ್ಮರಿಗೆ ನಾವು ಶುದ್ಧ ಮನಸ್ಸಿನಿಂದ ಸಮರ್ಪಿಸಿದಾಗ, ದೊಡ್ಡದ್ದನ್ನೇ ನಾವು ಮರಳಿ ಪಡೆಯಬಹುದು ಎಂದು ಶ್ರೀರಾಮಚಂದ್ರಾಪುರ ಮಠದ ಜಗದ್ಗುರು ಶಂಕರಾಚಾರ್ಯ ಶ್ರೀಶ್ರೀ ರಾಘವೇಶ್ವರ ಭಾರತೀ ಮಹಾಸ್ವಾಮಿಗಳು ಹೇಳಿದರು.ಬೆಂಗಳೂರಿನ ಗಿರಿನಗರದಲ್ಲಿರುವ ಶ್ರೀರಾಮಚಂದ್ರಾಪುರ ಮಠದ ಶಾಖೆಯಲ್ಲಿ ನಡೆಯುತ್ತಿರುವ 'ನವರಾತ್ರ ನಮಸ್ಯಾ' ಕಾರ್ಯಕ್ರಮದಲ್ಲಿ ಬುಧವಾರ ಲಲಿತೋಪಾಖ್ಯಾನ ಪ್ರವಚನವನ್ನು ಅನುಗ್ರಹಿಸಿದ ಶ್ರೀಗಳು, ರಾಜರಾಜೇಶ್ವರಿಯು ಭೋಗ ಹಾಗೂ ಮೋಕ್ಷ ಎರಡನ್ನೂ ಅನುಗ್ರಹಿಸುತ್ತಾಳೆ. ಇಂದು ಮೋಕ್ಷ ಎಂದಾಗ ಜನರು ದೂರ ಹೋಗುತ್ತಾರೆ. ನಾನು ಈ ಜಗತ್ತಿನಲ್ಲಿ ಅನುಭವಿಸುವಂತದ್ದು ಹಲವಿದೆ, ಜೀವನದ ಸಂಧ್ಯಾಕಾಲದಲ್ಲಿ ಮೋಕ್ಷದ ಬಗ್ಗೆ ಅಲೋಚಿಸೋಣ ಎಂಬ ಭಾವವನ್ನು ಕಾಣುತ್ತೇವೆ. ಆದರೆ ಆ



ಭಾವ ಸರಿಯಲ್ಲ. ರಾಜರಾಜೇಶ್ವರಿಯನ್ನು ಆಶ್ರಯಿಸಿದರೆ ಆಕೆ ಇಹದಲ್ಲಿ ಭೋಗವನ್ನೂ, ಪರದಲ್ಲಿ ಮೋಕ್ಷವನ್ನೂ ಅನುಗ್ರಹಿಸುತ್ತಾಳೆ ಎಂದು ಲಲಿತೋಪಾಖ್ಯಾನದ ಮಹತ್ವವನ್ನು ತಿಳಿಸಿದರು.

ಸಮಸ್ಯೆ ಬಂದಾಗ ಗುರುವಿನ ನೆನಪಾಗುತ್ತದೆ. ಮುಂದಿನ ದಾರಿ ಗೊತ್ತಾಗದೇ ಇದ್ದಾಗ ಗುರುವನ್ನು ಅರಸಿಕೊಂಡು ಹೋಗುವುದನ್ನು ಕಾಣುತ್ತೇವೆ. ಅದು ಸರಿಯಾದರೂ, ಉಳಿದ ಸಮಯದಲ್ಲೂ ಗುರುವನ್ನು ಆಶ್ರಯಿಸಿದರೆ ಜೀವನದಲ್ಲಿ ಉನ್ನತಿಯನ್ನು ಸಾಧಿಸಬಹುದು ಎಂದು ಇಂದ್ರನು ದುರ್ವಾಸರಿಂದ ಶಪಿತನಾದಾಗ, ಭಯಗೊಂಡ ಇಂದ್ರನು ದೇವಗುರುವಾದ ಬೃಹಸ್ಪತಿಯ ಮೊರೆ ಹೋಗುತ್ತಾನೆ ಎಂಬ ಕಥಾಭಾಗವನ್ನು ವಿವರಿಸಿದರು.

ಪಾಪ ಅಥವಾ ತಪ್ಪನ್ನು ಮಾಡಿದಾಗ ಪ್ರಾಯಶ್ಚಿತ್ತದ ಮೂಲಕ ಪಾಪವನ್ನು ತೊಳೆದುಕೊಳ್ಳಬಹುದು. ಪ್ರಾಯಶ್ಚಿತ್ತ ಸಾಧ್ಯವಾಗದಿದ್ದರೆ ಅಥವಾ ಪ್ರಾಯಶ್ಚಿತ್ತ ಇಲ್ಲದ ಪಾಪವಾದರೆ ಪಾಪದ ತಾಪವನ್ನು ಅನುಭವಿಸಿಯೇ ಕಳೆದುಕೊಳ್ಳಬೇಕು. ಇದಕ್ಕೇ ಇಂದ್ರನೂ ಹೊರತಲ್ಲ ಎಂದು ಲಲಿತೋಪಾಖ್ಯಾನದ ಕಥಾನಕವನ್ನು ವಿವರಿಸಿದರು. ದುರ್ಗಾಮಂಟಪದಲ್ಲಿ ಪ್ರತಿಷ್ಠಾಪಿಸಿರುವ ರಾಜರಾಜೇಶ್ವರಿ ದೇವಿಗೆ ಪೂಜೆ, ಮಹಾಲಕ್ಷ್ಮೀ ಮಂತ್ರ ಹವನ, ದುರ್ಗಾ ಸಪ್ತಶತೀ ಪಾರಾಯಣ, ಮಾತೆಯರಿಂದ ಉಡಿಸೇವೆ, ವಿಶಿಷ್ಟವಾದ 'ಅನ್ನಬ್ರಹ್ಮ ಸಂಕೀರ್ತನಮ್', ದುರ್ಗಾದೀಪ ನಮಸ್ಕಾರ ಮುಂತಾದ ಕಾರ್ಯಕ್ರಮಗಳು ನಡೆದವು. ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಕುಲಪತಿ ಡಾ. ಅಹಲ್ಯಾ ಎಸ್. ಶರ್ಮಾ ಕಾರ್ಯಕ್ರಮದಲ್ಲಿ , ಶ್ರೀಗಳ ಆಶೀರ್ವಾದ ಪಡೆದರು. ಕೆ.ಎನ್. ಶಂಕರ್ ಹಾಲ್ತೋಟ, ದಿನಪ್ರಧಾನರಾಗಿ ಕೃಷ್ಣಾನಂದ ಭಟ್ ದಂಪತಿ ಉಪಸ್ಥಿತರಿದ್ದರು.

# ಅಗ್ನಿ ಅವಘಡ; ಅಣಕು ಕಾರ್ಯಾಚರಣೆಗೆ ಚಿಣ್ಣರು ಪುಳಕ

**ಬೀದರ್, ಅ. 14:** ಅಗ್ನಿ ಅನಾಹುತ ಸಂಭವಿಸಿದಾಗ ಅನುಸರಿಸಬೇಕಾದ ಸುರಕ್ಷತಾ ಕ್ರಮಗಳ ಕುರಿತ ಅಗ್ನಿಶಾಮಕ ಮತ್ತು ತುರ್ತು ಸೇವೆಗಳ ಇಲಾಖೆಯ ಅಣಕು ಕಾರ್ಯಾಚರಣೆಯೂ ನಗರದ ನೆಹರೂ ಕ್ರೀಡಾಂಗಣ ಸಮೀಪದ ಗುರುನಾನಕ್ ಪಬ್ಲಿಕ್ ಶಾಲೆ ವಿದ್ಯಾರ್ಥಿಗಳನ್ನು ಪುಳಕಿತರಾಗಿಸಿತು. ಅಗ್ನಿ ಅವಘಡ ಸಂಭವಿಸಿದ ಸಂದರ್ಭದಲ್ಲಿ ತುರ್ತು ಸೇವೆಗಳನ್ನು ಸಂಪರ್ಕಿಸುವ ವಿಧಾನ, ಸುರಕ್ಷಿತವಾಗಿ ಸ್ಥಳಾಂತರಗೊಳ್ಳುವ ಕ್ರಮಗಳು ಮತ್ತು ಅಗ್ನಿಶಾಮಕ ಉಪಕರಣಗಳ ಬಳಕೆ ಕುರಿತು ಪ್ರಾತ್ಯಕ್ಷಿಕೆ ಮೂಲಕ ಅರಿವು ಮೂಡಿಸಲಾಯಿತು. ವಿವಿಧ ರೀತಿಯ ಬೆಂಕಿ ಅವಘಡಗಳಿಗೆ ಅನುಗುಣವಾಗಿ ಅಗ್ನಿಶಾಮಕ ಉಪಕರಣಗಳನ್ನು ಹೇಗೆ ಬಳಸಬೇಕು, ವಿದ್ಯುತ್ ಶಾರ್ಟ್ ಸರ್ಕ್ಯೂಟ್, ಗ್ಯಾಸ್ ಸಿಲಿಂಡರ್ ಹಾಗೂ ಇತರ ಕಾರಣಗಳಿಂದ ಬೆಂಕಿ ಹೊತ್ತಿಕೊಂಡಾಗ ಯಾವ ರೀತಿ ಮುನ್ನೆಚ್ಚರಿಕೆ ವಹಿಸಬೇಕೆಂದು ವಿವರಿಸಲಾಯಿತು. ಅಗ್ನಿ ಶಾಮಕ ಅಧಿಕಾರಿ ಪ್ರವೀಣ ಮಾತನಾಡಿ, ಬೆಂಕಿ ಕಾಣಿಸಿಕೊಂಡಾಗ ಗಾಬರಿಯಾಗಬಾರದು. ಸಂಯಮದಿಂದ ವರ್ತಿಸಬೇಕು. ಲಿಫ್ಟ್ ಬಳಸದೆ ಸುರಕ್ಷಿತ ಮಾರ್ಗದ ಮೂಲಕ ಹೊರಬರಬೇಕು. ಶಾಲೆಯ ತುರ್ತು ನಿರ್ಗಮನ ದ್ವಾರಗಳನ್ನು ಬಳಸಬೇಕು. ಇತರರನ್ನು ಸುರಕ್ಷಿತ ಸ್ಥಳಕ್ಕೆ ಸ್ಥಳಾಂತರಿಸಬೇಕು ಎಂದು ಸಲಹೆ ಮಾಡಿದರು. ಶಾಲೆಯಲ್ಲಿ ತುರ್ತು ಪರಿಸ್ಥಿತಿ ಎದುರಾದಾಗ ಶಿಕ್ಷಕರು ಮತ್ತು ಸಿಬ್ಬಂದಿಯ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು ಎಂದು ತಿಳಿಸಿದರು.

# ಎಸ್‌ಸಿ/ಎಸ್‌ಟಿ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಕಲ್ಪಿಸುವುದು ಅಗತ್ಯ

## ರಾಜ್ಯ ಸರ್ಕಾರ, ರಾಜಕೀಯ ಪಕ್ಷಗಳು ಚರ್ಚಿಸಿ ಸೂಕ್ತ ನಿರ್ಧಾರ ಕೈಗೊಳ್ಳಬೇಕಾಗಿದೆ: ಸಚಿವ ಕೆ.ಎಚ್. ಮುನಿಯಪ್ಪ



**ಬೆಂಗಳೂರು, ಅ.14:** ಕರ್ನಾಟಕದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನಸಂಖ್ಯೆಗೆ ಅನುಗುಣವಾಗಿ ಮೀಸಲಾತಿ ಕಲ್ಪಿಸುವ ಕುರಿತು ರಾಜ್ಯ ಸರ್ಕಾರ ಮತ್ತು ರಾಜಕೀಯ ಪಕ್ಷಗಳು ಚರ್ಚಿಸಿ ಸೂಕ್ತ ನಿರ್ಧಾರ ಕೈಗೊಳ್ಳಬೇಕಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದರು.

ನವದೆಹಲಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕರ್ನಾಟಕದ ಜನಸಂಖ್ಯೆಯಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಪ್ರಮಾಣ ಶೇ.24.1ರಷ್ಟಿದೆ. ಜನಗಣತಿ ಹಾಗೂ ವಿವಿಧ ಆಯೋಗಗಳ ವರದಿಗಳ ಆಧಾರದ ಮೇಲೆ ಮೀಸಲಾತಿ ಪ್ರಮಾಣವನ್ನು ನಿರ್ಧರಿಸುವುದು ಅಗತ್ಯವಾಗಿದೆ. ಈ ಸಮುದಾಯಗಳಿಗೆ ಜನಸಂಖ್ಯೆಗೆ ಅನುಗುಣವಾಗಿ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಸರ್ಕಾರ ಮುಂದಿನ ಕ್ರಮ ಕೈಗೊಳ್ಳಬೇಕಿದೆ ಎಂದು ಹೇಳಿದರು.

ನಾಗಮೋಹನ ದಾಸ್ ಆಯೋಗ ಸೇರಿದಂತೆ ವಿವಿಧ ಆಯೋಗಗಳ ವರದಿಗಳನ್ನು ಆಧರಿಸಿ ಮೀಸಲಾತಿ ಕುರಿತು ನಿರ್ಧಾರಗಳನ್ನು ಕೈಗೊಳ್ಳಲಾಗಿದೆ. ಪರಿಶಿಷ್ಟ ಜಾತಿಗಳಿಗೆ ಶೇ.17 ಮತ್ತು ಪರಿಶಿಷ್ಟ ಪಂಗಡಗಳಿಗೆ ಶೇ.7ರಷ್ಟು ಮೀಸಲಾತಿ ಕಲ್ಪಿಸುವ ಮೂಲಕ ಒಟ್ಟು ಮೀಸಲಾತಿಯನ್ನು ಶೇ.56ಕ್ಕೆ ಹೆಚ್ಚಿಸಲಾಗಿತ್ತು.

ಈ ನಿರ್ಧಾರವನ್ನು ಹಿಂದಿನ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರ ಸರ್ಕಾರದ ಅವಧಿಯಲ್ಲಿ ಕೈಗೊಳ್ಳಲಾಗಿತ್ತು. ನಂತರ ನಮ್ಮ ಸರ್ಕಾರವೂ ಅದನ್ನು ಮುಂದುವರಿಸಿತ್ತು ಎಂದು ವಿವರಿಸಿದರು. ಕರ್ನಾಟಕದಲ್ಲಿಯೂ ಮೀಸಲಾತಿ ಹೆಚ್ಚಳದ ನಿರ್ಧಾರವನ್ನು 9ನೇ ಅನುಸೂಚಿಗೆ ಸೇರಿಸುವ ಕುರಿತು ಹಿಂದಿನ ಸರ್ಕಾರ ಸೂಕ್ತ ಕ್ರಮ ಕೈಗೊಂಡಿದ್ದರೆ, ಇಂದಿನ ಸಮಸ್ಯೆಯನ್ನು ತಪ್ಪಿಸುವ ಅವಕಾಶವಿತ್ತು ಎಂದು ಅಭಿಪ್ರಾಯಪಟ್ಟರು.

ಒಳಮೀಸಲಾತಿ ಹಂಚಿಕೆಗೆ ಸಂಬಂಧಿಸಿದಂತೆ ಸರ್ಕಾರ ಈಗಾಗಲೇ ನಿರ್ಧಾರ ಕೈಗೊಂಡಿದೆ. ಪರಿಶಿಷ್ಟ ಜಾತಿಗಳಲ್ಲಿ ವಿವಿಧ ಸಮುದಾಯಗಳಿಗೆ ನ್ಯಾಯ ದೊರಕಿಸುವ ಉದ್ದೇಶದಿಂದ ಒಳಮೀಸಲಾತಿ ವ್ಯವಸ್ಥೆಯನ್ನು ರೂಪಿಸಲಾಗಿದೆ. ನ್ಯಾಯಾಲಯದ ತೀರ್ಪಿನ ಹಿನ್ನೆಲೆಯಲ್ಲಿ ಪ್ರಸ್ತುತ ಜಾರಿಯಲ್ಲಿರುವ ಮೀಸಲಾತಿ ಪ್ರಮಾಣದೊಳಗೆ ಮುಂದುವರಿಯಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಹೇಳಿದರು.

ಮೀಸಲಾತಿ ಹೆಚ್ಚಳದ ನಿರ್ಧಾರಕ್ಕೆ ಸಂವಿಧಾನಾತಕ ರಕ್ಷಣೆ ದೊರೆಯುವಂತೆ ಮಾಡುವುದು ಅತ್ಯಗತ್ಯವಾಗಿತ್ತು. ಹಿಂದಿನ ಸರ್ಕಾರವು ಮೀಸಲಾತಿ ಪ್ರಮಾಣವನ್ನು ಹೆಚ್ಚಿಸಿದ ನಂತರ ಅದಕ್ಕೆ ಅಗತ್ಯವಾದ ಕಾನೂನು ರಕ್ಷಣೆ ಕಲ್ಪಿಸುವ ಪ್ರಕ್ರಿಯೆಯನ್ನು ಪೂರ್ಣಗೊಳಿಸಬೇಕಿತ್ತು. ಆದರೆ ಆ ಕ್ರಮ ಸಮರ್ಪಕವಾಗಿ ಪೂರ್ಣಗೊಳ್ಳದಿರುವುದರಿಂದ ಈಗಿನ ಗೊಂದಲಕ್ಕೆ ಕಾರಣವಾಗಿದೆ ಎಂದು ಸಚಿವರು ಅಭಿಪ್ರಾಯಪಟ್ಟರು.ಈ ಸಂದರ್ಭದಲ್ಲಿ ಮಾಜಿ ಸಚಿವ ಚಂದ್ರಪ್ಪ, ನಿಗಮದ ಅಧ್ಯಕ್ಷರು ಉಪಸ್ಥಿತರಿದ್ದರು.



ಮೈಸೂರಿನಲ್ಲಿ ಬುಧವಾರ ನಡೆದ 'ಮಕ್ಕಳ ದಸರಾ'ದ ಭಾಗವಾದ ಸಾಂಸ್ಕೃತಿಕ ಕಾರ್ಯಕ್ರಮವು ಜನರನ್ನು ಆಕರ್ಷಿಸಿತು.

# ಕಬ್ಬಿಗೆ ವೈಜ್ಞಾನಿಕ ಬೆಲೆ ನಿಗದಿ ಅಗತ್ಯ ಕೇಂದ್ರಕ್ಕೆ ಸಚಿವ ಎಂ.ಬಿ.ಪಾಟೀಲ್ ಆಗ್ರಹ



ಬೆಂಗಳೂರು, ಅ.14: ಕಬ್ಬಿಗೆ ವೈಜ್ಞಾನಿಕವಾದ ಬೆಲೆ ನಿಗದಿಯಾಗಬೇಕು. ಕೇಂದ್ರ ಸರ್ಕಾರ ಅಂಥ ವ್ಯವಸ್ಥೆಯನ್ನು ಮಾಡಬೇಕು ಎಂದು ಸಚಿವ ಎಂ.ಬಿ. ಪಾಟೀಲ್ ಆಗ್ರಹಿಸಿದ್ದಾರೆ.

ಸುದ್ದಿಗಾರರೊಂದಿಗೆ, ಕಬ್ಬು ಬೆಳೆಗಾರರು ಪ್ರತಿಭಟನೆ ಮಾಡುತ್ತಿದ್ದು, ಅವರಿಗೆ ಕೇಂದ್ರ ಸರ್ಕಾರ ನ್ಯಾಯವಾದ ಬೆಲೆ ಒದಗಿಸಿಕೊಡಬೇಕು. ಕಬ್ಬು ಬೆಳೆಗಾರರ ವಿಚಾರದಲ್ಲಿ ಪ್ರಧಾನಿಯವರೇ ಮಧ್ಯಪ್ರವೇಶ ಮಾಡಬೇಕು. ಕೇಂದ್ರ ಸಚಿವ ಪ್ರಲ್ಹಾದ್ ಜೋಷಿ ಹಾಗೂ ರೈತರನ್ನು ಕರೆಸಿ ಮಾತುಕತೆ ನಡೆಸಿ ಸಮಸ್ಯೆಗೆ ಪರಿಹಾರ ಒದಗಿಸಬೇಕು ಎಂದು ಹೇಳಿದರು.

ಝೆಕ್ ಗಣರಾಜ್ಯದ ಪ್ರತಿನಿಧಿಗಳು ಮುಖ್ಯಮಂತ್ರಿಯವರನ್ನು ಭೇಟಿ ಮಾಡಿ ಭಾರತದೊಂದಿಗಿನ ವ್ಯಾಪಾರ ಕುರಿತಂತೆ ಚರ್ಚೆ ನಡೆಸಿದ್ದಾರೆ. ಏರೋಸ್ಪೇಸ್ ಅವರಿಗೆ ಮನವರಿಕೆ ಮಾಡಿಕೊಟ್ಟಿದ್ದೇವೆ. ನಮ್ಮಲ್ಲಿ ಇರುವ ವಿವಿಧ ಕಂಪನಿಗಳ ವಿವರವನ್ನು ತಿಳಿಸಿದ್ದು, ಜಾಗತಿಕ ಹೂಡಿಕೆದಾರರ ಸಮೇಳನದ ತಾಂತ್ರಿಕ ಪಾಲುದಾರರಾಗುವಂತೆ ಆಹ್ವಾನ ನೀಡಿದ್ದೇವೆ ಎಂದು ಪಾಟೀಲ್ ತಿಳಿಸಿದರು.

## ಸ್ಟಿಂಗ್ ಆಪರೇಷನ್ ಕೆಟ್ಟ ಚಾಳಿ, ಯಾರೇ ಮಾಡಿದ್ದರೂ ಒಳ್ಳೆಯದಲ್ಲ

ಸ್ಟಿಂಗ್ ಆಪರೇಷನ್ ಎಂಬುದು ಕೆಟ್ಟ ಚಾಳಿಯಾಗಿದ್ದು, ಯಾರೇ ಮಾಡಿದ್ದರೂ ಒಳ್ಳೆಯದಲ್ಲ. ರಾಜಕೀಯವಾಗಿ ಈ ರೀತಿ ಮಾಡಬಾರದು. ಹಣಕ್ಕಾಗಿಯೋ, ರಾಜಕೀಯ ಲಾಭಕ್ಕಾಗಿಯೋ ನಡೆಯುವಂತಹ ಚಾರಿತ್ರ್ಯವಧೆ ನಿಲ್ಲಬೇಕು ಎಂದು. ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ದೇಶದಲ್ಲೇ ಅತ್ಯುತ್ತಮ ನಾಯಕ ಎಂಬ ಹೆಸರು ಗಳಿಸಿದ್ದಾರೆ. ಅಂಥವರ ಚಾರಿತ್ರ್ಯ ವಧೆಯಾಗಬಾರದು. ಸ್ಟಿಂಗ್ ಆಪರೇಷನ್ ಎಂಬುದು ನಿರ್ನಾಮವಾಗಬೇಕು ಎಂದು ಬೃಹತ್ ಕೈಗಾರಿಕೆ ಸಚಿವ ಎಂ.ಬಿ.ಪಾಟೀಲ್ ತಿಳಿಸಿದರು.

### ಕಾರಾಗೃಹ ಅಭಿವೃದ್ಧಿ ಮಂಡಳಿಯ 5ನೇ ಸಭೆ; ಮಂಡಳಿಯನ್ನು ಸ್ವಾವಲಂಬಿಯಾಗಿಸಲು ಯೋಜನೆ ರೂಪಿಸಲು ನಿರ್ದೇಶನ

# ಕೈದಿಗಳ ಉತ್ಪನ್ನಗಳಿಗೆ ಆಕರ್ಷಕ ಪ್ಯಾಕೇಜಿಂಗ್, ಮಾರುಕಟ್ಟೆ ವಿಸ್ತರಣೆಗೆ ಕ್ರಮ: ಪ್ರಿಯಾಂಕ್ ಖರ್ಗೆ



**ಬೆಂಗಳೂರು, ಅ.14:** ರಾಜ್ಯದ ಕಾರಾಗೃಹಗಳಲ್ಲಿ ಕೈದಿಗಳಿಂದ ತಯಾರಿಸಲಾಗುತ್ತಿರುವ ವಿವಿಧ ಉತ್ಪನ್ನಗಳನ್ನು ಹೆಚ್ಚಿನ ಪ್ರಮಾಣದಲ್ಲಿ ಉತ್ಪಾದಿಸಿ, ಆಕರ್ಷಕ ಪ್ಯಾಕೇಜಿಂಗ್‌ನೊಂದಿಗೆ ಮಾರುಕಟ್ಟೆಗೆ ಪರಿಚಯಿಸುವ ಸಾಧ್ಯತೆಗಳನ್ನು ಪರಿಶೀಲಿಸುವಂತೆ ಗೃಹ, ಮಾಹಿತಿ ಹಾಗೂ ಜೈವಿಕ ತಂತ್ರಜ್ಞಾನ ಮತ್ತು ಇ-ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಕರ್ನಾಟಕ ಕಾರಾಗೃಹ ಅಭಿವೃದ್ಧಿ ಮಂಡಳಿಯ 5ನೇ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕೈದಿಗಳ ಉತ್ಪನ್ನಗಳಿಗೆ ಸೂಕ್ತ ಮಾರುಕಟ್ಟೆ ಕಲ್ಪಿಸುವುದು, ಅವುಗಳ ಮಾರಾಟವನ್ನು ಹೆಚ್ಚಿಸುವ ಮೂಲಕ ಮಂಡಳಿಯನ್ನು ಸ್ವಾವಲಂಬಿಯಾಗಿ ಕಾರ್ಯನಿರ್ವಹಿಸುವಂತೆ ಮಾಡಲು ಅಗತ್ಯ ಕಾರ್ಯಕ್ರಮಗಳನ್ನು ರೂಪಿಸುವಂತೆ ನಿರ್ದೇಶನ ನೀಡಿದರು.

ಕೈದಿಗಳ ಕೌಶಲಾಭಿವೃದ್ಧಿ ಮತ್ತು ಪುನರ್ವಸತಿಗೆ ಪೂರಕವಾದ ಚಟುವಟಿಕೆಗಳನ್ನು ಬಲಪಡಿಸುವುದರ ಜೊತೆಗೆ, ಅವರು ತಯಾರಿಸುವ ಉತ್ಪನ್ನಗಳಿಗೆ ಸ್ಥಿರವಾದ ಮಾರುಕಟ್ಟೆ ವ್ಯವಸ್ಥೆ ಕಲ್ಪಿಸುವುದು ಮುಖ್ಯವಾಗಿದೆ. ಉತ್ಪನ್ನಗಳ ಗುಣಮಟ್ಟ, ಆಕರ್ಷಕ ಪ್ಯಾಕೇಜಿಂಗ್ ಮತ್ತು ಪರಿಣಾಮಕಾರಿ ಮಾರುಕಟ್ಟೆ ವ್ಯವಸ್ಥೆಯ ಮೂಲಕ ಅವುಗಳಿಗೆ ಹೆಚ್ಚಿನ ಬೇಡಿಕೆ ಸೃಷ್ಟಿಸಲು ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

ಸಭೆಯಲ್ಲಿ ಕಾರಾಗೃಹಗಳಲ್ಲಿ ಕಲಾ ಚಿಕಿತ್ಸಾ ಕಾರ್ಯಕ್ರಮಗಳ ಅನುಷ್ಠಾನ, ಕೈದಿಗಳ ಮಾನಸಿಕ ಪರಿವರ್ತನೆ ಮತ್ತು ಪುನರ್ವಸತಿಗಾಗಿ ಸ್ವಯಂಸೇವಾ ಸಂಸ್ಥೆಗಳ ಸಹಯೋಗ, ಕೌಶಲಾಭಿವೃದ್ಧಿ ಮತ್ತು ಉತ್ಪಾದನಾ ಚಟುವಟಿಕೆಗಳಿಗೆ ಉತ್ತೇಜನ ನೀಡುವುದರ ಜೊತೆಗೆ, ಕಾರಾಗೃಹ ಅಭಿವೃದ್ಧಿ ಮಂಡಳಿಯ ಆದಾಯವನ್ನು ಹೆಚ್ಚಿಸಿ, ಮಂಡಳಿಯು ಸ್ವಾವಲಂಬಿಯಾಗಿ ಕಾರ್ಯನಿರ್ವಹಿಸಲು ಅಗತ್ಯವಾದ ಯೋಜನೆಗಳನ್ನು ರೂಪಿಸುವಂತೆ ಸಚಿವ ಪ್ರಿಯಾಂಕ್ ಖರ್ಗೆ ಅವರು ಅಧಿಕಾರಿಗಳಿಗೆ ಸೂಚಿಸಿದರು.

ಕೈದಿಗಳ ಪುನರ್ವಸತಿ, ವ್ಯಸನಮುಕ್ತ ಕೇಂದ್ರಗಳ ಸ್ಥಾಪನೆ ಹಾಗೂ ಕಾರಾಗೃಹಗಳಲ್ಲಿ ಉತ್ಪಾದನೆಯಾಗುವ ವಸ್ತುಗಳ ಮಾರಾಟ ವ್ಯವಸ್ಥೆಯನ್ನು ಬಲಪಡಿಸುವ ಕುರಿತು ಚರ್ಚಿಸಲಾಯಿತು.

ಗೃಹ ಇಲಾಖೆಯ ಅಪರ ಮುಖ್ಯ ಕಾರ್ಯದರ್ಶಿ ರಾಜೇಂದರ್ ಕುಮಾರ್ ಕಠಾರಿಯ, ಕರ್ನಾಟಕದ ಪೊಲೀಸ್ ಮಹಾ ನಿರ್ದೇಶಕ ಡಾ.ಎ.ಸಲೀಂ, ಪೊಲೀಸ್ ಮಹಾ ನಿರ್ದೇಶಕ (ಕಾರಾಗೃಹ) ಅಲೋಕ್ ಕುಮಾರ್, ಗೃಹ ಇಲಾಖೆಯ ಕಾರ್ಯದರ್ಶಿ ಶರಶ್ಚಂದ್ರ ಹಾಗೂ ಇನ್ನಿತರ ಅಧಿಕಾರಿಗಳು ಮಂಡಳಿ ಸಭೆಯಲ್ಲಿ ಭಾಗವಹಿಸಿದ್ದರು.

## ಸಭೆಗೆ ಗೈರುಹಾಜರಾದ ಸಚಿವರ ಬಗ್ಗೆ ಖರ್ಗೆ ತೀವ್ರ ಅಸಮಾಧಾನ

ಕರ್ನಾಟಕ ಕಾರಾಗೃಹ ಅಭಿವೃದ್ಧಿ ಮಂಡಳಿಯ ಸಭೆಗೆ ಹಾಜರಾಗುವಂತೆ ಸೂಚನೆ ನೀಡಿದ್ದರೂ, ಆರೋಗ್ಯ, ಪಶುಸಂಗೋಪನೆ, ಕೃಷಿ, ತೋಟಗಾರಿಕೆ ಹಾಗೂ ಕೈಗಾರಿಕೆ ಸೇರಿದಂತೆ ವಿವಿಧ ಇಲಾಖೆಗಳ ಮುಖ್ಯಸ್ಥರು ಸಭೆಗೆ ಗೈರುಹಾಜರಾಗಿ, ತಮ್ಮ ಬದಲಿಗೆ ಕಿರಿಯ ಅಧಿಕಾರಿಗಳನ್ನು ಕಳುಹಿಸಿದ್ದಕ್ಕೆ ಸಚಿವ ಪ್ರಿಯಾಂಕ್ ಖರ್ಗೆ ಅಸಮಾಧಾನ ವ್ಯಕ್ತಪಡಿಸಿದರು. ಸಭೆಯ ಮಹತ್ವವನ್ನು ಅರಿತು ಇಲಾಖಾ ಮುಖ್ಯಸ್ಥರು ಜವಾಬ್ದಾರಿಯಿಂದ ಕಾರ್ಯನಿರ್ವಹಿಸಬೇಕು ಹಾಗೂ ಸಭೆಗಳಿಗೆ ಖುದ್ದು ಹಾಜರಾಗಿ ಅಗತ್ಯ ನಿರ್ಧಾರಗಳನ್ನು ಕೈಗೊಳ್ಳಬೇಕು ಎಂದು ಸೂಚಿಸಿದ ಸಚಿವರು, ಸಭೆಗೆ ಹಾಜರಾಗಿದ್ದ ಕಿರಿಯ ಅಧಿಕಾರಿಗಳನ್ನು ಸಭೆಯಿಂದ ಹೊರಗೆ ಕಳುಹಿಸಿದರು.

### ಜು.1ರಿಂದ ಅ.13ರವರೆಗಿನ ಅಂಕಿಅಂಶ: ರಾಯಚೂರು ಜಿಲ್ಲೆ ಪ್ರಥಮ 24 ಲಕ್ಷ ಮಾನವದಿನ ಸೃಜನೆ

# ವಿಬಿ ಜಿ ರಾಮ್ ಜಿ: ದಾಖಲೆ 2.04 ಕೋಟಿ ಮಾನವದಿನ ಸೃಜನೆ: ಖಂಡ್ರೆ



**ಬೆಂಗಳೂರು, ಅ.14:** ಗ್ರಾಮೀಣ ಉದ್ಯೋಗ ಖಾತ್ರಿ ವಿಬಿಜಿ ರಾಮ್‌ಜಿ ಅಡಿಯಲ್ಲಿ ಜುಲೈ 1ರಿಂದ ಅ.13ರವರೆಗೆ ದಾಖಲೆಯ 2.04 ಕೋಟಿ ಮಾನವದಿನ ಉದ್ಯೋಗ ಸೃಜಿಸಲಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವ ಈಶ್ವರ ಖಂಡ್ರೆ ತಿಳಿಸಿದ್ದಾರೆ.

ನರೇಗಾ ಅಡಿಯಲ್ಲಿ ಕಳೆದ ವರ್ಷ ಇದೇ ಅವಧಿಯಲ್ಲಿ 1.71 ಕೋಟಿ ಮಾನವ ದಿನ ಸೃಜನೆಯಾಗಿತ್ತು. ಆದರೆ ಈ ಬಾರಿ ಎಲ್‌ನಿನೋ ಪ್ರಭಾವದಿಂದ ಮಳೆಯ ಕೊರತೆ ಆಗಿರುವ ಹಿನ್ನೆಲೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಗ್ರಾಮೀಣ ಬಡವರಿಗೆ, ದಲಿತರಿಗೆ, ವಂಚಿತ ಅಕುಶಲಿ ಹಾಗೂ ಭೂರಹಿತ ಕೂಲಿ ಕಾರ್ಮಿಕರಿಗೆ ಉದ್ಯೋಗ ಒದಗಿಸಲಾಗಿದೆ ಎಂದು ತಿಳಿಸಿದ್ದಾರೆ.

**ರಾಯಚೂರು ಪ್ರಥಮ**

ಕಲ್ಯಾಣ ಕರ್ನಾಟಕ ಭಾಗದ ರಾಯಚೂರು ಜಿಲ್ಲೆಯಲ್ಲಿ ಒಟ್ಟಾರೆ 24 ಲಕ್ಷ ಮಾನವ ದಿನ ಸೃಜಿಸಲಾಗಿದ್ದು ರಾಜ್ಯದಲ್ಲೇ ಪ್ರಥಮ ಸ್ಥಾನದಲ್ಲಿದೆ. ಬೀದರ್ 21 ಲಕ್ಷ ಮಾನವ ದಿನ, ಕೊಪ್ಪಳ 18 ಲಕ್ಷ ಮಾನವ ದಿನ ಸೃಜಿಸುವುದರೊಂದಿಗೆ ಎರಡು ಮತ್ತು ಮೂರನೇ ಸ್ಥಾನದಲ್ಲಿವೆ. ಉದ್ಯೋಗ ಸೃಜನೆಯಲ್ಲಿ ಕಳೆದ ವರ್ಷಕ್ಕೆ ಹೋಲಿಸಿದಲ್ಲಿ ವಿಜಯನಗರ ಜಿಲ್ಲೆಯಲ್ಲಿ ಶೇ.340ರಷ್ಟು, ಕಲ್ಬುರ್ಗಿ ಜಿಲ್ಲೆಯಲ್ಲಿ ಶೇ.257, ಕೊಪ್ಪಳದಲ್ಲಿ ಶೇ.207, ಬಳ್ಳಾರಿ ಶೇ.175 ಮತ್ತು ಬೀದರ್ ಶೇಕಡ 173ರಷ್ಟು ಹೆಚ್ಚಳವಾಗಿದೆ ಎಂದು ಖಂಡ್ರೆ ತಿಳಿಸಿದ್ದಾರೆ.

**87164 ಹೊಸ ಕಾರ್ಡ್ ವಿತರಣೆ**

ಜಾಬ್‌ಕಾರ್ಡ್‌ಗಳ ಇ-ಕೆ.ವೈ.ಸಿ. ಜೊತೆಗೆ ಜಾಬ್‌ಕಾರ್ಡ್ ಮೇಳ ನಡೆಸಿ ಹೊಸ ಜಾಬ್ ಕಾರ್ಡ್‌ಗಳನ್ನು ವಿತರಿಸಲು ಕ್ರಮ ಕೈಗೊಂಡ ಹಿನ್ನೆಲೆಯಲ್ಲಿ, ಗುಳೆ ಹೋಗುತ್ತಿದ್ದ ನೂರಾರು ಕುಟುಂಬಗಳು ಇರುವ ಸ್ಥಳದಲ್ಲಿಯೇ ಉದ್ಯೋಗ ಪಡೆಯಲು ಅನುಕೂಲವಾಗಿದೆ. ಈ ವರ್ಷದಲ್ಲಿ ಹೊಸದಾಗಿ 87164 ಅಧಿಕ ಜಾಬ್ ಕಾರ್ಡ್ ವಿತರಿಸಲಾಗಿದೆ ಎಂದು ಈಶ್ವರ ಖಂಡ್ರೆ ತಿಳಿಸಿದ್ದಾರೆ.

ಕೆರೆಯ ಹೂಳೆತ್ತುವುದು, ಸಾಮಾಜಿಕ ಅರಣ್ಯೀಕರಣ, ಕಾಲುವೆ, ಕೆರೆ, ಸರೋವರಗಳ ಪುನಶ್ಚೇತನ, ಜಾನುವಾರು ಶೆಡ್, ಕೃಷಿ ಹೊಂಡ ನಿರ್ಮಾಣ, ಗುಡ್ಡಗಳ ಮಣ್ಣು ಕುಸಿಯದಂತೆ ತಡೆಗಳ ನಿರ್ಮಾಣ, ಗೊಬ್ಬರ ಗುಂಡಿ, ಸಂಪರ್ಕ ರಸ್ತೆ ನಿರ್ಮಾಣ ಇತ್ಯಾದಿ ಕಾಮಗಾರಿಗಳ ಜತೆಗೆ ಈಗ ಹೊಸದಾಗಿ ವಸತಿ ಯೋಜನೆ, ಸಮುದಾಯ ಭವನ, ಗ್ರಾಮೀಣ ಬಸ್ ನಿಲ್ದಾಣಗಳ ನಿರ್ಮಾಣಕ್ಕೂ ಅವಕಾಶ ನೀಡಲಾಗಿದ್ದು ಗ್ರಾಮೀಣ ಭಾಗದಲ್ಲಿ ಶಾಶ್ವತ ಆಸ್ತಿಗಳ ಸೃಜನೆ ಮತ್ತು ಗ್ರಾಮಾಭಿವೃದ್ಧಿಗೂ ಒತ್ತು ನೀಡಲಾಗುವುದು ಎಂದು ತಿಳಿಸಿದ್ದಾರೆ.

ವಿಬಿ ಜಿ ರಾಮ್ ಜಿ ಯೋಜನೆಯಡಿ ಒಂದು ಕುಟುಂಬಕ್ಕೆ ಒಂದು ವರ್ಷದಲ್ಲಿ 125 ದಿನ ಉದ್ಯೋಗ ನೀಡಲು ಅವಕಾಶವಿದ್ದು, ಹೆಣ್ಣು, ಗಂಡು ಎಂಬ ತಾರತಮ್ಯವಿಲ್ಲದೆ 382 ರೂ. ಕೂಲಿ ನೀಡಲಾಗುತ್ತಿದೆ. ಹೀಗಾಗಿ ಪ್ರತಿ ಗ್ರಾಮೀಣ ಕುಟುಂಬಗಳು ವಾರ್ಷಿಕ 47,750 ರೂ. ಗಳಿಸಬಹುದು ಎಂದೂ ಈಶ್ವರ ಖಂಡ್ರೆ ತಿಳಿಸಿದ್ದಾರೆ.

# ಲರ್ನ್ ತುಳು ನ್ಯಾಚುರಲಿ: ಸಚಿವ ಶಿವರಾಜ್ ತಂಗಡಗಿಯಿಂದ ಕಲಿಕಾ ಪುಸ್ತಕ ಬಿಡುಗಡೆ

**ಬೆಂಗಳೂರು, ಅ.14:** ಕರ್ನಾಟಕ ತುಳು ಸಾಹಿತ್ಯ ಅಕಾಡೆಮಿ ಪ್ರಕಟಿಸಿರುವ ತುಳು ಭಾಷಾ ಕಲಿಕೆಯ ಎರಡು ಪುಸ್ತಕಗಳನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ಎಸ್. ತಂಗಡಗಿ ಬಿಡುಗಡೆ ಮಾಡಿದರು.

ಇಂಗ್ಲೀಷ್ ಭಾಷಿಗರಿಗಾಗಿ ಕೆ.ಟಿ.ಗಟ್ಟಿ ಅವರ 'ಲರ್ನ್ ತುಳು ನ್ಯಾಚುರಲಿ' ಕೃತಿ ಹಾಗೂ ಕನ್ನಡ ಭಾಷಿಗರಿಗಾಗಿ ಡಾ.ಯು.ಪಿ.ಉಪಾಧ್ಯಾಯರ 'ತುಳು ಕೈಪಿಡಿ' ಕೃತಿಗಳ ಪರಿಷ್ಕೃತ ಮುದ್ರಣವನ್ನು ತುಳು ಅಕಾಡೆಮಿ ಹೊರತಂದಿದೆ.

ತುಳು ರಾಜ್ಯದ ಹೆಚ್ಚುವರಿ ಆಡಳಿತ ಭಾಷೆಯಾಗಿ ಘೋಷಣೆಯಾದ ಹಿನ್ನೆಲೆಯಲ್ಲಿ ತುಳು ಕಲಿಕೆಯ ಪುಸ್ತಕಗಳ ಬಗ್ಗೆ ಬೇಡಿಕೆ ಬಂದಿರುವ ಹಿನ್ನೆಲೆಯಲ್ಲಿ ಈ ಕೃತಿಗಳನ್ನು ಪ್ರಕಟಿಸಿರುವ ಬಗ್ಗೆ ಕರ್ನಾಟಕ ತುಳು ಸಾಹಿತ್ಯ ಅಕಾಡೆಮಿಯ ಅಧ್ಯಕ್ಷ ತಾರಾನಾಥ ಗಟ್ಟಿ ಕಾಪಿಕಾಡ್ ಅವರು ಸಚಿವರಿಗೆ ಮಾಹಿತಿ ನೀಡಿದರು.

ಬೆಂಗಳೂರಿನಲ್ಲಿ ಹಿಂದುಳಿದ ವರ್ಗಗಳ ಇಲಾಖೆಯ ಆಯುಕ್ತರ ಕಚೇರಿಯಲ್ಲಿ ನಡೆದ ಕೃತಿ ಬಿಡುಗಡೆ ಸಮಾರಂಭದಲ್ಲಿ ಮಾಜಿ ಸಚಿವೆ ಡಾ. ಜಯಮಾಲಾ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಕಾರ್ಯದರ್ಶಿ ಶ್ರೀಮತಿ ಮಂಜುಶ್ರೀ ಎನ್, ಇಲಾಖೆಯ ನಿರ್ದೇಶಕಿ ಡಾ. ಕೆ.ಎಂ ವಸುಂಧರ, ಕೊಂಕಣಿ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಸ್ವಾನಿ ಆಲ್ವಾರಿಸ್, ಬ್ಯಾರಿ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಉಮರ್ ಯು.ಎಚ್. ಅರೆಭಾಷೆ ಸಾಹಿತ್ಯ ಅಕಾಡೆಮಿ ಅಧ್ಯಕ್ಷ ಸದಾನಂದ ಮಾವಾಜಿ ಭಾಗವಹಿಸಿದ್ದರು.

# ರೇಣುಕಾಸ್ವಾಮಿ ಕೊಲೆ ಪ್ರಕರಣ ಆರೋಪಿ ಪವಿತ್ರಾಗೌಡಗೆ ಜೈಲಿನಲ್ಲಿ ನೈಜೀರಿಯಾ ಪ್ರಜೆಗಳ ಕಾಟ



**ಬೆಂಗಳೂರು, ಅ.14:** ರೇಣುಕಾಸ್ವಾಮಿ ಕೊಲೆ ಪ್ರಕರಣದ ಮೊದಲ ಆರೋಪಿಯಾಗಿ ಜೈಲು ಸೇರಿರುವ ಪವಿತ್ರಾ ಗೌಡಗೆ ನೈಜೀರಿಯಾ ಪ್ರಜೆಗಳ ಕಾಟ ಹೆಚ್ಚಿದೆಯಂತೆ. ಇವರ ಕಾಟಕ್ಕೆ ಬೇಸತ್ತ ಪವಿತ್ರಾ ಗೌಡ ನನ್ನನ್ನು ಬೇರೆ ಬ್ಯಾರಕ್‌ಗೆ ವರ್ಗಾಯಿಸಿ ಎಂದು ಕೋರ್ಟ್ ಮೊರೆ ಹೋಗಿದ್ದರು.

ಸ್ಥಳಾಂತರ ಮಾಡುವಂತೆ ಜೈಲಾಧಿಕಾರಿಗಳಿಗೆ ನ್ಯಾಯಾಲಯ ಸೂಚನೆ ನೀಡಿದ್ದರೂ ಅದು ಇನ್ನೂ ಕಾರ್ಯರೂಪಕ್ಕೆ ಬಂದಿಲ್ಲ. ಮಧ್ಯರಾತ್ರಿಯಾದರೂ ನಿದ್ದೆ ಮಾಡಲು ಬಿಡದೇ ಕಾಟ ವಿದೇಶಿ ಪ್ರಜೆಗಳು ಕಾಟ ಕೊಡುತ್ತಿದ್ದಾರೆ ಎಂದು ಪವಿತ್ರಾ ಮತ್ತೆ ಕಣ್ಣೀರಿಟ್ಟಿದ್ದಾರೆ.

ಸಹ ಕೈದಿಗಳ ಕಾಟಕ್ಕೆ ಬೇಸತ್ತಿರುವ ಪವಿತ್ರಾ ಗೌಡ ದಯವಿಟ್ಟು ಬ್ಯಾರಕ್ ಬದಲಿಸಿ ಅಂತ ಪ್ರತಿನಿತ್ಯವೂ ಮನವಿ ಮಾಡುತ್ತಿದ್ದಾರೆ. 30 ಜನರು ಇರುವ ಮಹಿಳಾ ಬ್ಯಾರಕ್‌ನಲ್ಲಿ ನೈಜೀರಿಯಾ ಪ್ರಜೆಗಳ ಕಾಟ ತಡೆಯೋಕೆ ಆಗುತ್ತಿಲ್ಲ ಎಂದು ಪವಿತ್ರಾ ಗೌಡ ಹೇಳಿದ್ದಾರೆ. ಇಂದು ನಡೆದ ನ್ಯಾಯಾಲಯ ವಿಚಾರಣೆಯಲ್ಲೂ ಸಹ ಪವಿತ್ರಗೌಡ ಪರ ನಾರಾಯಣಸ್ವಾಮಿ ಅವರು ಬ್ಯಾರಕ್ ಬದಲಾವಣೆಗೆ ಮನವಿ ಮಾಡಿದ್ದರು.

ಒಂದೇ ಬ್ಯಾರಕ್‌ನಲ್ಲಿ 30 ಮಂದಿ ವಿಚಾರಣಾಧೀನ ಕೈದಿಗಳಿದ್ದು, ಮಧ್ಯರಾತ್ರಿವರೆಗೂ ನಿದ್ದೆ ಮಾಡಲು ಸಾಧ್ಯವಾಗುತ್ತಿಲ್ಲ. ವಿದೇಶಿ ಪ್ರಜೆಗಳಿಂದ ಮಾನಸಿಕ ಕಿರಿಕಿರಿ ಉಂಟಾಗುತ್ತಿದೆ ಎಂದು ಪವಿತ್ರಾಗೌಡ ಅರ್ಜಿಯಲ್ಲಿ ಉಲ್ಲೇಖಿಸಿದ್ದಾರೆ.

ಜೈಲಿನಲ್ಲಿ ನೆಮ್ಮದಿಯಿಂದ ಇರಲು ಸಾಧ್ಯವಾಗುತ್ತಿಲ್ಲ ಎಂದು ಆರೋಪಿಸಿರುವ ಪವಿತ್ರಾಗೌಡ, ಖುದ್ದು ನ್ಯಾಯಾಧೀಶರೇ ಜೈಲಿಗೆ ಭೇಟಿ ನೀಡಿ ಪರಿಶೀಲನೆ ನಡೆಸಬೇಕು ಎಂದು ಸೆಷನ್ಸ್ ಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ವಿದೇಶಿ ಪ್ರಜೆಗಳಿಂದ ಈಗಾಗಲೇ ಆರೋಗ್ಯದಲ್ಲಿ ಏರುಪೇರಾಗಿದೆ ಎಂದು ಆರೋಪಿ ಪವಿತ್ರಾ ಗೌಡ ವೈದ್ಯಕೀಯ ರಿಪೋರ್ಟ್ ಕೂಡ ಕೋರ್ಟ್ ಸಲ್ಲಿಕೆ ಮಾಡಿದ್ದಾರೆ. ಜೊತೆಗೆ ಖುದ್ದು 59ನೇ ಸಿಸಿಹೆಚ್ ನ್ಯಾಯಾಲಯದ ನ್ಯಾಯಾಧೀಶರು ಜೈಲಿಗೆ ಭೇಟಿ ನೀಡಿ ಮಹಿಳಾ ಬ್ಯಾರಕ್ ಗಳ ಪರಿಶೀಲನೆ ನಡೆಸುವಂತೆ ಮನವಿ ಮಾಡಿದ್ದರು. ಇಂದೇ ಜೈಲು ಅಧಿಕಾರಿಗಳ ವರದಿ ಬಗ್ಗೆ ಮಾಹಿತಿ ಪಡೆಯುದಾಗಿ ನ್ಯಾಯಾಲಯ ತಿಳಿಸಿದೆ.

# ಅನ್ನಸೇವೆ ಆಪ್ ಮೂಲಕ ಮನೆಯಿಂದಲೇ ಇ-ಕೆವೈಸಿಗೆ ಅವಕಾಶ

### ಅನ್ನಭಾಗ್ಯ ಯೋಜನೆ: ಅ.20ರೊಳಗೆ ಪ್ರಕ್ರಿಯೆ ಪೂರ್ಣ ಗೊಳಿಸುವಂತೆ ಪಡಿತರ ಚೀಟಿ ದಾರರಿಗೆ ಆಹಾರ ಇಲಾಖೆ ಸೂಚನೆ




**ಬೆಂಗಳೂರು, ಅ.14:** ರಾಜ್ಯಾದ್ಯಂತ ಅನ್ನಭಾಗ್ಯ ಯೋಜನೆಯ ಪಡಿತರ ಚೀಟಿದಾರರಿಗೆ ಮಹತ್ವದ ಸುದ್ದಿಯೊಂದು ಹೊರಬಿದ್ದಿದೆ.

ಮನೆಯಲ್ಲೇ ಕುಳಿತು ರೇಷನ್ ಕಾರ್ಡ್‌ನ ಇ-ಕೆವೈಸಿ ಪ್ರಕ್ರಿಯೆ ಪೂರ್ಣಗೊಳಿಸಲು ಆಹಾರ ಇಲಾಖೆ ಅವಕಾಶ ಕಲ್ಪಿಸಿದೆ. ಇದಕ್ಕಾಗಿ ರೂಪಿಸಿರುವ ಅನ್ನಸೇವೆ ಆಪ್ ಸೇವೆ ಇಂದಿನಿಂದ ಕಾರ್ಯಾರಂಭ ಮಾಡಿದ್ದು, ಇನ್ನು ಮುಂದೆ ಇ-ಕೆವೈಸಿಗಾಗಿ ನ್ಯಾಯಬೆಲೆ ಅಂಗಡಿಗಳಿಗೆ ಅಲೆಯುವ ಬದಲು ಮೊಬೈಲ್ ಮೂಲಕವೇ ಪ್ರಕ್ರಿಯೆ ಪೂರ್ಣಗೊಳಿಸಬಹುದು.

ಇ-ಕೆವೈಸಿ ಮಾಡಿಸಿಕೊಳ್ಳಲು ಆಹಾರ ಇಲಾಖೆ ಅಕ್ಟೋಬರ್ 20ರವರೆಗೆ ಕಾಲಾವಕಾಶ ನೀಡಿದೆ.

ಈ ಹಿನ್ನೆಲೆಯಲ್ಲಿ ಬಾಕಿ ಉಳಿದಿರುವ ಫಲಾನುಭವಿಗಳು ನಿಗದಿತ ಗಡುವಿನೊಳಗೆ ಇ-ಕೆವೈಸಿ ಪೂರ್ಣಗೊಳಿಸುವಂತೆ ಇಲಾಖೆ ಮನವಿ ಮಾಡಿದೆ. ಗಡುವಿನೊಳಗೆ ಇ-ಕೆವೈಸಿ ಮಾಡಿಸದಿದ್ದರೆ ಪಡಿತರ ವಿತರಣೆಗೆ ತೊಂದರೆಯಾಗುವ ಸಾಧ್ಯತೆಯಿದ್ದು, ಫಲಾನುಭವಿಗಳು ನಿರ್ಲಕ್ಷ್ಯ ವಹಿಸದಂತೆ ಸೂಚಿಸಲಾಗಿದೆ.

**2.06 ಕೋಟಿ ಜನರ ಇ-ಕೆವೈಸಿ ಪೂರ್ಣ:** ರಾಜ್ಯದಲ್ಲಿ ಅನ್ನಭಾಗ್ಯ ಯೋಜನೆಯಡಿ ಪಡಿತರ ಪಡೆಯುತ್ತಿರುವ ಫಲಾನುಭವಿಗಳ ಇ-ಕೆವೈಸಿ ಪ್ರಕ್ರಿಯೆ ನಡೆಯುತ್ತಿದೆ. ಆಹಾರ ಇಲಾಖೆಯ ಮಾಹಿತಿಯ ಪ್ರಕಾರ, ರಾಜ್ಯದಲ್ಲಿ ಒಟ್ಟು 2.67 ಕೋಟಿ ಫಲಾನುಭವಿಗಳ ಪೈಕಿ 2.06 ಕೋಟಿ ಜನರ ಇ-ಕೆವೈಸಿ ಪ್ರಕ್ರಿಯೆ ಪೂರ್ಣಗೊಂಡಿದೆ. ಉಳಿದ ಫಲಾನುಭವಿಗಳು ಇನ್ನೂ ಇ-ಕೆವೈಸಿ ಮಾಡಿಸಿಕೊಳ್ಳಬೇಕಿದ್ದು, ಈ ಪ್ರಕ್ರಿಯೆಯನ್ನು ತ್ವರಿತವಾಗಿ ಪೂರ್ಣಗೊಳಿಸಲು ಇಲಾಖೆ ಕ್ರಮ ಕೈಗೊಂಡಿದೆ.

ಆಪ್ ಬಳಸಿ ಇ-ಕೆವೈಸಿ ಮಾಡುವಾಗ ಅಗತ್ಯ ದಾಖಲೆಗಳು ಹಾಗೂ ಗುರುತಿನ ದೃಢೀಕರಣ ಪ್ರಕ್ರಿಯೆಯನ್ನು ಸರಿಯಾಗಿ ಪೂರ್ಣಗೊಳಿಸಬೇಕು.

ಆಪ್‌ನಲ್ಲಿ ತಾಂತ್ರಿಕ ಸಮಸ್ಯೆ ಎದುರಾದರೆ ಅಥವಾ ಇ-ಕೆವೈಸಿ ಪೂರ್ಣಗೊಳ್ಳದಿದ್ದರೆ ಸಂಬಂಧಪಟ್ಟ ಆಹಾರ ಇಲಾಖೆ ಅಧಿಕಾರಿಗಳು ಅಥವಾ ನ್ಯಾಯಬೆಲೆ ಅಂಗಡಿಯನ್ನು ಸಂಪರ್ಕಿಸಿ ಮಾಹಿತಿ ಪಡೆಯಬಹುದು.

# ಮನೆ ಮುಂದೆ ವಾಹನ ನಿಲ್ಲಿಸಿದರೆ ಶುಲ್ಕ ಪ್ರಸ್ತಾವನೆಗೆ ಬ್ರೇಕ್

### ಜಿಬಿಎ ರೂಪಿಸಿದ್ದ ಪಾರ್ಕಿಂಗ್ ನೀತಿಗೆ ನಗರಾಭಿವೃದ್ಧಿ ಇಲಾಖೆ ತಡೆ



**ಬೆಂಗಳೂರು, ಅ.14:** ಮನೆ ಮುಂದೆ ವಾಹನ ನಿಲ್ಲಿಸುವುದಕ್ಕೂ ಶುಲ್ಕ ವಿಧಿಸುವ ಪ್ರಸ್ತಾವನೆಗೆ ಕೊನೆಗೂ ಬ್ರೇಕ್ ಬಿದ್ದಿದೆ. ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ರೂಪಿಸಿದ್ದ ಪಾರ್ಕಿಂಗ್ ನೀತಿಗೆ ನಗರಾಭಿವೃದ್ಧಿ ಇಲಾಖೆ ತಡೆ ನೀಡಿದ್ದು, ಸಾರ್ವಜನಿಕರಿಗೆ ತಾತ್ಕಾಲಿಕವಾಗಿ ನಿರಾಳತೆ ಸಿಕ್ಕಿದೆ.

ನಗರದಲ್ಲಿ ವಾಹನಗಳ ಪಾರ್ಕಿಂಗ್ ವ್ಯವಸ್ಥೆಯನ್ನು ಸುಧಾರಿಸುವ ಉದ್ದೇಶದಿಂದ ಜಿಬಿಎ ಪಾರ್ಕಿಂಗ್ ನೀತಿ ರೂಪಿಸಿ, ಮನೆಗಳ ಮುಂದೆ ವಾಹನ ನಿಲುಗಡೆಗೂ ಶುಲ್ಕ ವಿಧಿಸುವ ಪ್ರಸ್ತಾವನೆಯನ್ನು ನಗರಾಭಿವೃದ್ಧಿ ಇಲಾಖೆಗೆ ಸಲ್ಲಿಸಿತ್ತು. ಈ ನೀತಿ ಜಾರಿಯಾದರೆ ಮನೆ ಮುಂದೆ ವಾಹನ ನಿಲ್ಲಿಸಲೂ ಹಣ ಪಾವತಿಸಬೇಕಾಗುತ್ತದೆ ಎಂಬ ಆತಂಕ ಸಾರ್ವಜನಿಕರಲ್ಲಿ ಮೂಡಿತ್ತು.

**ಸಾವಿರಾರು ಆಕ್ಷೇಪಣೆ ಸಲ್ಲಿಕೆ:** ಜಿಬಿಎ ಸಲ್ಲಿಸಿದ್ದ ಪಾರ್ಕಿಂಗ್ ನೀತಿಯ ಪ್ರಸ್ತಾವನೆಯನ್ನು ನಗರಾಭಿವೃದ್ಧಿ ಇಲಾಖೆ ಸಾರ್ವಜನಿಕರ ಆಕ್ಷೇಪಣೆ ಮತ್ತು ಸಲಹೆಗಳಿಗೆ ಮುಕ್ತಗೊಳಿಸಿತ್ತು. ಇದಕ್ಕೆ ಸಾರ್ವಜನಿಕರಿಂದ ತೀವ್ರ ವಿರೋಧ ವ್ಯಕ್ತವಾಗಿದ್ದು, ಸಾವಿರಾರು ಆಕ್ಷೇಪಣೆಗಳು ಸಲ್ಲಿಕೆಯಾಗಿದ್ದವು. ಮನೆ ಮುಂದೆ ವಾಹನ ನಿಲ್ಲಿಸುವುದಕ್ಕೂ ಶುಲ್ಕ ವಿಧಿಸುವುದರಿಂದ ಸಾಮಾನ್ಯ ಜನರಿಗೆ ಆರ್ಥಿಕ ಹೊರೆ ಹೆಚ್ಚಲಿದೆ ಎಂಬ ಅಭಿಪ್ರಾಯಗಳು ವ್ಯಕ್ತವಾಗಿದ್ದವು.

ಈಗಾಗಲೇ ಬೆಲೆ ಏರಿಕೆ, ಆಸ್ತಿ ತೆರಿಗೆ ಸೇರಿದಂತೆ ವಿವಿಧ ಆರ್ಥಿಕ ಹೊರೆಗಳನ್ನು ಎದುರಿಸುತ್ತಿರುವ ಜನರಿಗೆ ಪಾರ್ಕಿಂಗ್ ಶುಲ್ಕ ಮತ್ತೊಂದು ಹೊರೆಯಾಗಲಿದೆ ಎಂಬ ಆತಂಕವೂ ವ್ಯಕ್ತವಾಗಿತ್ತು. ಸಾರ್ವಜನಿಕರ ವಿರೋಧದ ಹಿನ್ನೆಲೆಯಲ್ಲಿ ಪಾರ್ಕಿಂಗ್ ನೀತಿಯ ಭವಿಷ್ಯದ ಬಗ್ಗೆ ಕುತೂಹಲ ಮೂಡಿತ್ತು.

**ಚುನಾವಣೆಯೂ ಪ್ರಮುಖ ಕಾರಣ:** ರಾಜ್ಯ ರಾಜಧಾನಿಯಲ್ಲಿ ಜಿಬಿಎ ವ್ಯಾಪ್ತಿಯ ಐದು ನಗರ ಪಾಲಿಕೆಗಳ ಚುನಾವಣೆ ಡಿಸೆಂಬರ್‌ನಲ್ಲಿ ನಡೆಯುವ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಪಾರ್ಕಿಂಗ್ ನೀತಿ ಜಾರಿ ಆಡಳಿತಾರೂಢ ಸರ್ಕಾರಕ್ಕೆ ರಾಜಕೀಯವಾಗಿಯೂ ಸವಾಲಾಗುವ ಸಾಧ್ಯತೆ ಇತ್ತು. ಜನರ ವಿರೋಧಕ್ಕೆ ಕಾರಣವಾಗಬಹುದಾದ ನೀತಿಯನ್ನು ಜಾರಿಗೊಳಿಸುವುದರಿಂದ ಚುನಾವಣೆಯ ಮೇಲೆ ಪರಿಣಾಮ ಬೀರಬಹುದು ಎಂಬ ಲೆಕ್ಕಾಚಾರವೂ ಪ್ರಸ್ತಾವನೆಗೆ ತಡೆ ನೀಡುವ ನಿರ್ಧಾರದ ಹಿಂದೆ ಇರಬಹುದೆಂದು ವಿಶ್ಲೇಷಿಸಲಾಗುತ್ತಿದೆ.

ಜಿಬಿಎ ರೂಪಿಸಿದ್ದ ಪಾರ್ಕಿಂಗ್ ನೀತಿಗೆ ನಗರಾಭಿವೃದ್ಧಿ ಇಲಾಖೆ ಬ್ರೇಕ್ ಹಾಕಿರುವುದರಿಂದ ಈ ಪ್ರಸ್ತಾವನೆ ಸದ್ಯಕ್ಕೆ ಮುಂದುವರಿಯುವುದಿಲ್ಲ ಎಂಬ ನಿರೀಕ್ಷೆ ಮೂಡಿದೆ. ನಗರದಲ್ಲಿ ವಾಹನ ದಟ್ಟಣೆ ನಿಯಂತ್ರಣ, ಪಾರ್ಕಿಂಗ್ ವ್ಯವಸ್ಥೆ ಸುಧಾರಣೆ ಹಾಗೂ ರಸ್ತೆಗಳನ್ನು ಸುಗಮಗೊಳಿಸುವುದು ಅಗತ್ಯವೇ ಆಗಿದ್ದರೂ, ಅದಕ್ಕಾಗಿ ರೂಪಿಸುವ ನೀತಿಗಳು ಸಾರ್ವಜನಿಕರಿಗೆ ಹೆಚ್ಚುವರಿ ಆರ್ಥಿಕ ಹೊರೆಯಾಗದಂತೆ ಇರಬೇಕು ಎಂಬುದು ನಾಗರಿಕರ ಅಭಿಪ್ರಾಯವಾಗಿದೆ. ಒಟ್ಟಿನಲ್ಲಿ, ಮನೆ ಮುಂದೆ ವಾಹನ ನಿಲುಗಡೆಗೂ ಶುಲ್ಕ ವಿಧಿಸುವ ಪ್ರಸ್ತಾವನೆಗೆ ಸದ್ಯಕ್ಕೆ ತಡೆ ಬಿದ್ದಿರುವುದು ಬೆಂಗಳೂರಿನ ವಾಹನ ಮಾಲೀಕರಿಗೆ ಸಮಾಧಾನ ತಂದಿದೆ.

# ರೇಣುಕಾಸ್ವಾಮಿ ಹತ್ಯೆ ಪ್ರಕರಣ: ಮಾಫಿ ಸಾಕ್ಷಿ ಕೋರಿ ಸಲ್ಲಿಸಿದ್ದ ಅರ್ಜಿ ಹಿಂಪಡೆದ 10ನೇ ಆರೋಪಿ ವಿನಯ್

**ಬೆಂಗಳೂರು, ಅ.14:** ಸ್ಯಾಂಡಲ್ ವುಡ್ ನಟ ದರ್ಶನ್ ತೂಗುದೀಪ ಸೇರಿದಂತೆ ಹಲವು ಪ್ರಮುಖ ಆರೋಪಿಗಳನ್ನು ಒಳಗೊಂಡಿರುವ ಚಿತ್ರದುರ್ಗದ ರೇಣುಕಾಸ್ವಾಮಿ ಕೊಲೆ ಪ್ರಕರಣದ ನ್ಯಾಯಾಲಯ ವಿಚಾರಣೆಯಲ್ಲಿ ಮತ್ತೊಂದು ಬೆಳವಣಿಗೆ ನಡೆದಿದೆ. ಪ್ರಕರಣದ 10ನೇ ಆರೋಪಿ ವಿನಯ್, ತಾನು ಮಾಫಿ ಸಾಕ್ಷಿಯಾಗಲು ಕೋರಿ ನ್ಯಾಯಾಲಯಕ್ಕೆ ಸಲ್ಲಿಸಿದ್ದ ಅರ್ಜಿಯನ್ನು ದಿಢೀರನೆ ವಾಪಸ್ ಪಡೆದುಕೊಂಡಿದ್ದಾನೆ.

ಪ್ರಕರಣದಲ್ಲಿ ಕೊಲೆಯ ಎಲ್ಲಾ ರಹಸ್ಯಗಳನ್ನು ಮತ್ತು ವಾಸ್ತವಾಂಶ ಗಳನ್ನು ನ್ಯಾಯಾಲಯದ ಮುಂದೆ ತೆರೆದಿಡಲು ಸಿದ್ಧವಿರುವುದಾಗಿ ತಿಳಿಸಿ ಪ್ರಕರಣದ 14ನೇ ಆರೋಪಿ ಪ್ರದೋಷ್ ರಾವ್ ಈ ಹಿಂದೆ ಮಾಫಿ ಸಾಕ್ಷಿಯಾಗಲು ಅರ್ಜಿ ಸಲ್ಲಿಸಿದ್ದ ಬೆನ್ನಲ್ಲೇ, 10ನೇ ಆರೋಪಿ ವಿನಯ್ ಕೂಡ ನ್ಯಾಯಾಲಯಕ್ಕೆ ಅರ್ಜಿ ಸಲ್ಲಿಸಿ ಕ್ಷಮಾದಾನ ಹಾಗೂ ಮಾಫಿ ಸಾಕ್ಷಿ ಸ್ಥಾನಮಾನ ಕೋರಿದ್ದ.

ಆದರೆ, ಈ ಅರ್ಜಿಯ ಕುರಿತು ಪ್ರಾಸಿಕ್ಯೂಷನ್ ಮತ್ತು ಕೋರ್ಟ್ ಪರಿಶೀಲನೆ ನಡೆಸುವ ಹಂತದಲ್ಲೇ, ವಿನಯ್ ತಮ್ಮ ವಕೀಲರ ಮೂಲಕ ಅರ್ಜಿಯನ್ನು ಹಿಂ ಪಡೆಯಲು ನಿರ್ಧರಿಸಿ ಹಿಂಪಡೆದಿದ್ದಾನೆ. ಇದ ರಿಂದಾಗಿ ಪ್ರಕರಣದಲ್ಲಿ ಮಾಫಿ ಸಾಕ್ಷಿ ವಿಚಾರವಾಗಿ ಸೃಷ್ಟಿಯಾಗಿದ್ದ ಭಾರಿ ಕುತೂಹಲಕ್ಕೆ ಸದ್ಯ ತಾತ್ಕಾಲಿಕ ತೆರೆಬಿದ್ದಿದೆ.

ಮತ್ತೊಂದೆಡೆ, ಇದೇ ಪ್ರಕರಣದಲ್ಲಿ ಭಾಗಿಯಾಗಿ ಪರಪ್ಪನ ಅಗ್ರಹಾರ ಜೈಲು ಸೇರಿರುವ ಆರೋಪಿಗಳಾದ ಅನುಕುಮಾರ್ (ಎ-7) ಮತ್ತು ಜಗದೀಶ್ ಅಲಿಯಾಸ್ ಜಗ್ಗ (ಎ-6) ಸಲ್ಲಿಸಿರುವ ನಿಯಮಿತ ಜಾಮೀನು ಅರ್ಜಿಗಳ ಸುದೀರ್ಘ ವಿಚಾರಣೆ ಬೆಂಗಳೂರಿನ 59ನೇ ಸಿಟಿ ಸಿವಿಲ್ ಮತ್ತು ಸೆಷನ್ಸ್ ನ್ಯಾಯಾಲಯದಲ್ಲಿ ಪೂರ್ಣಗೊಂಡಿದೆ.

ವಿಚಾರಣೆ ವೇಳೆ ಆರೋಪಿಗಳ ಪರ ವಕೀಲರು ಹಾಗೂ ಸರ್ಕಾರದ ವಿಶೇಷ ಅಭಿಯೋಜಕರ ನಡುವೆ ತೀವ್ರ ವಾದ-ಪ್ರತಿವಾದಗಳು ನಡೆದವು. "ಆರೋಪಿಗಳು ಕೃತ್ಯದಲ್ಲಿ ನೇರವಾಗಿ ಭಾಗಿಯಾಗಿದ್ದು, ಕ್ರೂರವಾಗಿ ರೇಣುಕಾಸ್ವಾಮಿಯನ್ನು ಅಪಹರಿಸಿ ಹಲ್ಲೆ ನಡೆಸುವಲ್ಲಿ ಪ್ರಮುಖ ಪಾತ್ರ ವಹಿಸಿದ್ದಾರೆ. ಇವರಿಗೆ ಜಾಮೀನು ನೀಡಿದರೆ ಸಾಕ್ಷ್ಯ ನಾಶಪಡಿಸುವ ಹಾಗೂ ಸಾಕ್ಷಿಗಳಿಗೆ ಬೆದರಿಕೆಯೊಡ್ಡುವ ಸಾಧ್ಯತೆ ಇದೆ" ಎಂದು ಪ್ರಾಸಿಕ್ಯೂಷನ್ ಜಾಮೀನಿಗೆ ಪ್ರಬಲ ಆಕ್ಷೇಪ ವ್ಯಕ್ತಪಡಿಸಿತು.

ಎರಡೂ ಕಡೆಯ ವಾದ-ಪ್ರತಿವಾದಗಳನ್ನು ಆಲಿಸಿದ ನ್ಯಾಯಾಧೀಶರು ಆದೇಶವನ್ನು ಅಕ್ಟೋಬರ್ 17ಕ್ಕೆ ಕಾಯ್ದಿರಿಸಿದ್ದಾರೆ. ಅಕ್ಟೋಬರ್ 17 ರಂದು ಪ್ರಕಟವಾಗಲಿರುವ ನ್ಯಾಯಾಲಯದ ಆದೇಶವು ಪ್ರಕರಣದ ಇತರ ಆರೋಪಿಗಳ ಮುಂದಿನ ಜಾಮೀನು ಪ್ರಕ್ರಿಯೆಯ ಮೇಲೂ ಪ್ರಮುಖ ಪ್ರಭಾವ ಬೀರುವ ಸಾಧ್ಯತೆಯಿದೆ.



ಮೈಸೂರಿನಲ್ಲಿ ಬುಧವಾರ, ಮೈಸೂರು ದಸರಾ ಸಿದ್ಧತೆಯ ಭಾಗವಾಗಿ ಜಂಬೂಸವಾರಿ ಮಾರ್ಗದಲ್ಲಿ ದಸರಾ ಆನೆಗಳು ಗಂಭೀರವಾಗಿ ಸಾಗಿದವು.

### ಕುಮಾರಸ್ವಾಮಿ ಆರೋಪಕ್ಕೆ ಸಂಸದ ಶ್ರೇಯಸ್ ಪಟೇಲ್ ತಿರುಗೇಟು

## ಲಕ್ಷ್ಮೀರಂಗನಾಥ ಸ್ವಾಮಿ ದೇವಸ್ಥಾನದಲ್ಲಿ ಆಣೆ ಪ್ರಮಾಣಕ್ಕೆ ಸಿದ್ಧ

**ಹಾಸನ, ಅ.14:** ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಮಾಡುತ್ತಿರುವ ಆರೋಪಗಳಿಗೆ ತಿರುಗೇಟು ನೀಡಿರುವ ಹಾಸನ ಸಂಸದ ಶ್ರೇಯಸ್ ಪಟೇಲ್, ತಮ್ಮ ವಿರುದ್ಧ ವೈಯಕ್ತಿಕ ತೇಜೋವಧೆ ಮಾಡಲಾಗುತ್ತಿದೆ ಎಂದು ಆರೋಪಿಸಿದ್ದಾರೆ. ತಮ್ಮ ಮೇಲಿನ ಆರೋಪಗಳಿಗೆ ಸಂಬಂಧಿಸಿದಂತೆ ಕುಮಾರಸ್ವಾಮಿ ಅವರು ನಂಬುವ ಲಕ್ಷ್ಮೀ ರಂಗನಾಥ ಸ್ವಾಮಿ ದೇವಸ್ಥಾನಕ್ಕೆ ಬಂದು ಆಣೆ ಪ್ರಮಾಣ ಮಾಡಲು ಸಿದ್ಧವಿರುವುದಾಗಿ ಸವಾಲು ಹಾಕಿದ್ದಾರೆ.

ಬುಧವಾರ ಮಾತನಾಡಿದ ಶ್ರೇಯಸ್ ಪಟೇಲ್, ಕಳೆದ ಎರಡು ವರ್ಷಗಳಿಂದ ತಮ್ಮ ವಿರುದ್ಧ ಆರೋಪಗಳನ್ನು ಮಾಡಲಾಗುತ್ತಿದೆ. ಕುಮಾರಸ್ವಾಮಿ ಅವರು ತಮ್ಮ ಕುಟುಂಬದ ಸಮಸ್ಯೆಗಳನ್ನು ಮುಂದಿಟ್ಟುಕೊಂಡು ನಮ್ಮ ಮೇಲೆ ಆರೋಪ ಮಾಡುತ್ತಿದ್ದಾರೆ. ಅವರು ನೀಡುವ ದಿನಾಂಕ ಮತ್ತು ಸಮಯಕ್ಕೆ ದೇವಸ್ಥಾನಕ್ಕೆ ಬಂದು ಪ್ರಮಾಣ ಮಾಡಲು ಸಿದ್ಧನಿದ್ದೇನೆ. ಅವರೂ ಬಂದು ಪ್ರಮಾಣ ಮಾಡಲಿ ಎಂದು ಹೇಳಿದರು.

ಪೆನ್‌ಡ್ರೈವ್ ಪ್ರಕರಣವನ್ನು ಪ್ರಸ್ತಾಪಿಸಿದ ಅವರು, ಸದಾಶಿವನಗರದಲ್ಲಿ ಪೆನ್‌ಡ್ರೈವ್ ತಯಾರಿಸಿದ ಬಗ್ಗೆ ಆರೋಪ ಮಾಡುವವರು ಅದರಲ್ಲಿರುವ ವಿಚಾರಗಳ ಬಗ್ಗೆಯೂ ಮಾತನಾಡಬೇಕು. ಈ ಪ್ರಕರಣದಲ್ಲಿ ಸಂತ್ರಸ್ತ ಮಹಿಳೆಯರಿಗೆ ನ್ಯಾಯ ದೊರಕಿಸುವವರು ಯಾರು? ಅವರಿಗೆ ಕ್ಷಮೆ ಕೇಳಲಾಗಿದೆಯೇ? ಎಂದು ಪ್ರಶ್ನಿಸಿದರು. ನ್ಯಾಯಾಲಯ ಸುಳ್ಳು ಹೇಳುತ್ತದೆಯೇ ಎಂದು ಪ್ರಶ್ನಿಸಿದ ಅವರು, ಪ್ರಕರಣದ ವಿಚಾರದಲ್ಲಿ ಎಲ್ಲರಿಗೂ ಒಂದೇ ನ್ಯಾಯ ಇರಬೇಕು ಎಂದು ಅಭಿಪ್ರಾಯಪಟ್ಟರು.

**ಕುಟುಂಬ ರಾಜಕಾರಣದ ವಿರುದ್ಧ ವಾಗ್ದಾಳಿ** ಒಕ್ಕಲಿಗ ಸಮುದಾಯದಲ್ಲಿ ಕುಮಾರಸ್ವಾಮಿ ಅವರ ಕುಟುಂಬದವರೇ ಅಧಿಕಾರದಲ್ಲಿರಬೇಕೇ ಎಂದು



ಪ್ರಶ್ನಿಸಿದ ಶ್ರೇಯಸ್ ಪಟೇಲ್, ತಾವೂ ಒಕ್ಕಲಿಗ ಸಮುದಾಯಕ್ಕೆ ಸೇರಿದವರಾಗಿದ್ದು, ಮುಖ್ಯಮಂತ್ರಿ ಕೂಡ ಇದೇ ಸಮುದಾಯದವರು ಎಂದು ಹೇಳಿದರು. ಮತ್ತೊಬ್ಬ ಒಕ್ಕಲಿಗ ರಾಜಕೀಯವಾಗಿ ಬೆಳೆಯುವುದನ್ನು ಕಂಡು ಸಂತೋಷಪಡಬೇಕಲ್ಲವೇ ಎಂದು ಪ್ರಶ್ನಿಸಿದರು.

ಕುಮಾರಸ್ವಾಮಿ ಅವರು ಕೇಂದ್ರ ಸಚಿವರಾದ ಬಳಿಕ ಹಾಸನಕ್ಕೆ ನೀಡಿರುವ ಕೊಡುಗೆ ಏನು? ಎಂದು ಪ್ರಶ್ನಿಸಿದ ಅವರು, ಕುಟುಂಬದವರೇ ಬೆಳೆಯಬೇಕು ಎಂಬುದು ಅವರ ರಾಜಕೀಯ ಧೋರಣೆ ಎಂದು ಟೀಕಿಸಿದರು. ತಮ್ಮ ಗೆಲುವಿನ ಹಿಂದೆ ತಮ್ಮ ಶ್ರಮ ಹಾಗೂ ಪಕ್ಷದ ಕಾರ್ಯಕರ್ತರ ಪರಿಶ್ರಮವಿದೆ. ತಮ್ಮ ರಾಜಕೀಯ ಏಳುಬೀಳುಗಳ ಬಗ್ಗೆ ಕುಮಾರಸ್ವಾಮಿ ಅವರಿಗೆ ತಿಳಿದಿದೆ ಎಂದರು.

ಮಂಡ್ಯದಲ್ಲಿ ಪೆನ್‌ಡ್ರೈವ್ ಹಂಚಿಕೆ ಮಾಡಲಾಗಿದೆ ಎಂಬ ಆರೋಪದ ಕುರಿತು ಪ್ರತಿಕ್ರಿಯಿಸಿದ ಅವರು, ಹಾಗಿದ್ದರೆ ಮಂಡ್ಯದಲ್ಲಿ ಕುಮಾರಸ್ವಾಮಿ ಅವರು ಏಕೆ ಸೋಲಲಿಲ್ಲ ಎಂದು ಪ್ರಶ್ನಿಸಿದರು. ಸಾಮಾನ್ಯ ಜನರು ರಾಜಕೀಯವಾಗಿ ಬೆಳೆಯಬಾರದೇ

ಕುಮಾರಸ್ವಾಮಿ ಅವರು ಪ್ರಜ್ವಲ್ ರೇವಣ್ಣ ಪ್ರಕರಣಕ್ಕೂ ತಮ್ಮ ಕುಟುಂಬಕ್ಕೂ ಸಂಬಂಧವಿಲ್ಲ ಎಂದು ಹಿಂದೆ ಹೇಳಿದ್ದರು. ಈಗ ರಾಜಕೀಯಕ್ಕಾಗಿ ಪ್ರಜ್ವಲ್ ಹೆಸರನ್ನು ಬಳಸಿಕೊಳ್ಳುತ್ತಿದ್ದಾರೆ ಎಂದು ಶ್ರೇಯಸ್ ಪಟೇಲ್ ಆರೋಪಿಸಿದರು. ಕೇಂದ್ರ ಸಚಿವರಾಗಿ ತಮ್ಮ ಸ್ಥಾನದ ಗೌರವವನ್ನು ಉಳಿಸಿಕೊಳ್ಳಬೇಕು. ಆಧಾರರಹಿತ ಆರೋಪಗಳ ಮೂಲಕ ತೇಜೋವಧೆ ಮಾಡುತ್ತಿರುವ ಬಗ್ಗೆ ಪ್ರಧಾನಮಂತ್ರಿಗೆ ಪತ್ರ ಬರೆದು, ಕುಮಾರಸ್ವಾಮಿ ಅವರನ್ನು ಸಚಿವ ಸಂಪುಟದಿಂದ ವಜಾಗೊಳಿಸುವಂತೆ ಮನವಿ ಮಾಡುವುದಾಗಿ ತಿಳಿಸಿದರು.

ಇದುವರೆಗೆ ಸಮಾಜದ ಮುಖಂಡರು ಎಂಬ ಗೌರವದಿಂದ ಸುಮ್ಮನಿದ್ದೆ. ಇನ್ನು ಮುಂದೆ ಸುಮ್ಮನಿರುವುದಿಲ್ಲ. ತಾವು ಮೌನವಾಗಿದ್ದರೆ ಜನರು ತಮ್ಮನ್ನು ನಂಬುವುದಿಲ್ಲ ಎಂದ ಅವರು, ಕುಮಾರಸ್ವಾಮಿ ಅವರು ದೇವಸ್ಥಾನಕ್ಕೆ ಬಂದು ಆಣೆ ಪ್ರಮಾಣ ಮಾಡಲಿ ಎಂದು ಮತ್ತೊಮ್ಮೆ ಸವಾಲು ಹಾಕಿದರು.

### ಬ್ಯಾಂಕಿಂಗ್ ಕಾಯ್ದೆ ಉಲ್ಲಂಘನೆ ಆರೋಪ

## ಸಚಿವ ಈಶ್ವರ್ ಖಂಡ್ರೆ ಸೋದರನಿಗೆ ನೋಟಿಸ್!

**ಬೀದರ್, ಅ. 14:** ಬ್ಯಾಂಕಿಂಗ್ ಕಾಯ್ದೆ ಉಲ್ಲಂಘನೆ ಆರೋಪಕ್ಕೆ ಸಂಬಂಧಿಸಿದಂತೆ ಬೀದರ್ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ್ ಖಂಡ್ರೆ ಅವರ ಸಹೋದರ ಹಾಗೂ ಡಿಸಿಸಿ ಬ್ಯಾಂಕ್ ಅಧ್ಯಕ್ಷ ಅಮರ್ ಖಂಡ್ರೆ ಅವರಿಗೆ ಹೈಕೋರ್ಟ್ ನೋಟಿಸ್ ಜಾರಿಮಾಡಿದೆ.

ಬೀದರ್ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್‌ನ ಅಧ್ಯಕ್ಷರಾಗಿ ಮೂರನೇ ಅವಧಿಗೆ ಮುಂದುವರಿಯುತ್ತಿರುವುದನ್ನು ಪ್ರಶ್ನಿಸಿ ಸಲ್ಲಿಸಲಾದ ಅರ್ಜಿಯ ವಿಚಾರಣೆ ನಡೆಸಿದ ಕಲಬುರಗಿ ಹೈಕೋರ್ಟ್ ವಿಭಾಗೀಯ ಪೀಠ ಈ ನೋಟಿಸ್ ನೀಡಿದೆ.



ಡಿಸಿಸಿ ಬ್ಯಾಂಕ್ ಸದಸ್ಯರಾದ ಅತಿವಾಳ ಕಪಲಾಪುರ ಮತ್ತು ಶಿವರಾಜ್ ವೀರಶೆಟ್ಟಿ ಅವರು ಅಮರ್ ಖಂಡ್ರೆ ಅವರ ಅಧ್ಯಕ್ಷ ಸ್ಥಾನದ ಮುಂದುವರಿಕೆಯನ್ನು ಪ್ರಶ್ನಿಸಿ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದಾರೆ. ರಾಜಕೀಯ ಪ್ರಭಾವ ಬಳಸಿ ನಿಯಮಗಳಿಗೆ ವಿರುದ್ಧವಾಗಿ ಅಮರ್ ಖಂಡ್ರೆ ಮೂರನೇ ಬಾರಿಗೆ ಅಧ್ಯಕ್ಷರಾಗಿ ಮುಂದುವರಿಯುತ್ತಿದ್ದಾರೆ ಎಂದು ಅರ್ಜಿದಾರರು ಆರೋಪಿಸಿದ್ದಾರೆ.

ಬ್ಯಾಂಕಿಂಗ್ ನಿಯಂತ್ರಣ ಕಾಯ್ದೆ ಹಾಗೂ ಭಾರತೀಯ ರಿಸರ್ವ್ ಬ್ಯಾಂಕ್‌ನ (ಆರ್‌ಬಿಐ) ತಿದ್ದುಪಡಿ ನಿಯಮಗಳ ಪ್ರಕಾರ, ಒಬ್ಬ ವ್ಯಕ್ತಿ ಮೂರನೇ ಅವಧಿಗೆ ಅಧ್ಯಕ್ಷರಾಗಿ ಮುಂದುವರಿಯಲು ಅವಕಾಶವಿಲ್ಲ ಎಂಬುದು ಅರ್ಜಿದಾರರ ವಾದವಾಗಿದೆ. ಈ ನಿಯಮಗಳನ್ನು ಉಲ್ಲಂಘಿಸಲಾಗಿದೆ ಎಂದು ಅವರು ನ್ಯಾಯಾಲಯದ ಗಮನಕ್ಕೆ ತಂದಿದ್ದಾರೆ.

ಅರ್ಜಿಯನ್ನು ವಿಚಾರಣೆ ನಡೆಸಿದ ಕಲಬುರಗಿ ಹೈಕೋರ್ಟ್ ವಿಭಾಗೀಯ ಪೀಠವು ಅಮರ್ ಖಂಡ್ರೆ ಅವರಿಗೆ ನೋಟಿಸ್ ಜಾರಿ ಮಾಡಿದ್ದು, ನವೆಂಬರ್ 5ರಂದು ವಿಚಾರಣೆಗೆ ಹಾಜರಾಗುವಂತೆ ಸೂಚಿಸಿದೆ. ಈ ಪ್ರಕರಣದ ಮುಂದಿನ ವಿಚಾರಣೆಯಲ್ಲಿ ನ್ಯಾಯಾಲಯ ಯಾವ ನಿಲುವು ತೆಗೆದುಕೊಳ್ಳಲಿದೆ ಎಂಬುದು ಕುತೂಹಲ ಮೂಡಿಸಿದೆ.

## ನಾಯಕತ್ವ ಗಟ್ಟಿಯಾದಷ್ಟೇ, ಗಟ್ಟಿಯಾಗಿ ನಾಡಿನ ಸೈನಿಕರು ಕಾರ್ಯನಿರ್ವಹಿಸುತ್ತಾರೆ: ಬಸವರಾಜ ಪಾಟೀಲ್ ಸೇಡಂ

**ಬಸವಕಲ್ಯಾಣ, ಅ. 14:** ದೇಶದ ನಾಯಕತ್ವ ಎಷ್ಟು ಗಟ್ಟಿಯಾಗಿರುತ್ತದೆಯೋ ಅಷ್ಟೇ ಗಟ್ಟಿಯಾಗಿ ಸೈನಿಕರು ಕಾರ್ಯನಿರ್ವಹಿಸುತ್ತಾರೆ ಎಂದು ಬಸವಕಲ್ಯಾಣ ಕ್ಷೇತ್ರ ಸಮಿತಿ ಸಂಯೋಜಕ ಮಾಜಿ ಸಂಸದ ಬಸವರಾಜ ಪಾಟೀಲ್ ಸೇಡಂ ಹೇಳಿದರು.



ಅಂತಾರಾಷ್ಟ್ರೀಯ ಲಿಂಗಾಯತ ಧರ್ಮ ಕೇಂದ್ರ ಹಾಗೂ ಅಖಿಲ ಭಾರತ ಲಿಂಗವಂತ ಹರಳಯ್ಯ ಪೀಠದ ಸಹಯೋಗದಡಿ ಹರಳಯ್ಯ ಗವಿಯಲ್ಲಿ ಶರಣ ವಿಜಯೋತ್ಸವ ನಾಡಹಬ್ಬ, ಹುತಾತ್ಮ ದಿನಾಚರಣೆ ನಿಮಿತ್ತ ಸೋಮವಾರ ಮಾಚಿದೇವ ಮಲ್ಲಿಬೊಮ್ಮ ವೀರ ಸೈನಿಕರ ವೇದಿಕೆಯಲ್ಲಿ ಏರ್ಪಡಿಸಿದ್ದ ಶರಣ ದರ್ಶನ ರಾಷ್ಟ್ರೀಯತ್ವದ ಮೂಲ ಚಿಂತನ ಗೋಷ್ಠಿ ಉದ್ಘಾಟಿಸಿದ ಅವರು, ಆತ್ಮವಿಶ್ವಾಸದಿಂದ ಕೂಡಿದ ದೇಶದ ಗಡಿ ರಕ್ಷಣೆ ಮಾಡುವಂಥವರನ್ನು ತಯಾರು ಮಾಡಲು ನಾವು ಸಿದ್ಧರಿರಬೇಕು ಎಂದರು.

ಸಶಕ್ತ ಸಮಾಜ ಇರಬೇಕು. ದೇಶದ ಪ್ರಶ್ನೆ ಬಂದಾಗ ನಾವೆಲ್ಲರೂ ಒಂದಾಗಿರಬೇಕು. ಅಂದು ದೇಶದಲ್ಲಿ ಲಾಲ್ ಬಹಾದ್ದೂರ್ ಶಾಸ್ತ್ರಿ ಚೀನಾ ವಿರುದ್ಧ ಯುದ್ಧ ಗೆದ್ದರು. ಇಂದಿರಾ ಗಾಂಧೀಜಿ ಪಾಕಿಸ್ತಾನ ಒಡೆದು ಎರಡು ಭಾಗ ಮಾಡಿದರು. ಅಟಲ್ ಬಿಹಾರಿ ವಾಜಪೇಯಿ ಕಾರ್ಗಿಲ್ ಯುದ್ಧ ಗೆದ್ದರು ಎಂದು ಹೇಳಿದರು.

ಸಾನ್ನಿಧ್ಯ ವಹಿಸಿದ್ದ ಪೂಜ್ಯ ಡಾ.ಗಂಗಾಂಬಿಕಾ ಅಕ್ಕ ಮಾತನಾಡಿ, ಹನ್ನೆರಡನೆಯ ಶತಮಾನದಲ್ಲಿ ಮಡಿವಾಳ ಮಾಚಿದೇವ ಮಲ್ಲಿಬೊಮ್ಮನವರು ವಚನ ಸಾಹಿತ್ಯದ ರಕ್ಷಣೆಗಾಗಿ ಹೋರಾಡಿದ್ದಾರೆ. ಸೈನಿಕರು ನಮ್ಮ ದೇಶದ ಹೆಮ್ಮೆಯ ಪ್ರತಿಕ. ಅವರು ತಮ್ಮ ಜೀವದ ಅಮೂಲ್ಯ ವರ್ಷಗಳನ್ನು ದೇಶದ ರಕ್ಷಣೆಗೆ ಸಮರ್ಪಿಸಿದ್ದಾರೆ. ಅವರ ಅನುಭವ ಯುವಜನತೆಗೆ ಸ್ಫೂರ್ತಿಯಾಗಬೇಕು ಎಂದರು. ಸೇವಾ ಅವಧಿಯಲ್ಲಿನ ರೋಮಾಂಚನಕಾರಿ ಅನುಭವಗಳನ್ನು ಹಂಚಿಕೊಂಡ ಹೈದರಾಬಾದ್‌ನ ನಿವೃತ್ತ ಎಸಿಪಿ ಕಮಾಂಡೋ ವಿನೋದಕುಮಾರ ಭಗವಂತರಾವ್ ಅವರು, ಸೈನಿಕರು ಕುಟುಂಬದಿಂದ ದೂರವಿದ್ದು ದೇಶಕ್ಕಾಗಿ ಸೇವೆ ಸಲ್ಲಿಸುವುದು ಅವರ ಜೀವನದ ಭಾಗವಾಗಿದೆ. ಕೆಟ್ಟದ್ದಕ್ಕೆ ಯಾರೂ ಪ್ರೋತ್ಸಾಹಿಸಬಾರದು. ಆಂತರಿಕ ವಿರೋಧಿಗಳಿಂದ ಜಾಗೃತರಾಗಿರುವುದು ಪ್ರತಿಯೊಬ್ಬರ ಕರ್ತವ್ಯವಾಗಿದೆ ಎಂದು ಹೇಳಿದರು.

### ಹೋರಾಟಕ್ಕೆ ಇಳಿಯುವಂತೆ ನಟ ಸುದೀಪ್‌ಗೆ ಆಹ್ವಾನ

## ಹೇಳಿಕೆ ಸಮರ್ಥಿಸಿಕೊಂಡ ಮಾಜಿ ಸಂಸದ ವಿ.ಎಸ್.ಉಗ್ರಪ್ಪ

**ಚಿತ್ರದುರ್ಗ, ಅ.14:** ಜಿಲ್ಲೆಯಲ್ಲಿ ನಡೆದ ರಾಜ ವೀರಮದಕರಿ ನಾಯಕ ಜಯಂತೋತ್ಸವದಲ್ಲಿ ನಟ ಕಿಚ್ಚ ಸುದೀಪ್ ಅವರನ್ನು ಹೋರಾಟಕ್ಕೆ ಆಹ್ವಾನಿಸಿದ್ದ ವಿಚಾರವಾಗಿ ಮಾಜಿ ಸಂಸದ ವಿ.ಎಸ್. ಉಗ್ರಪ್ಪ ತಮ್ಮ ನಿಲುವನ್ನು ಸಮರ್ಥಿಸಿಕೊಂಡಿದ್ದಾರೆ.

ತಮ್ಮ ಮಾತುಗಳಲ್ಲಿ ಯಾವುದೇ ಅವಮಾನಕಾರಿ ಉದ್ದೇಶ ಇರಲಿಲ್ಲ ಎಂದು ಹೇಳಿರುವ ಅವರು, ಬಿಜೆಪಿ ನಾಯಕ ರಾಜುಗೌಡ ಅವರ ಟೀಕೆಗೆ ಪ್ರತಿಕ್ರಿಯಿಸಿದ್ದಾರೆ.



ಸಮುದಾಯದ ಹಕ್ಕುಗಳು ಮತ್ತು ಶೇ. 56ರಷ್ಟು ಮೀಸಲಾತಿಗಾಗಿ ನಡೆಯುವ ಹೋರಾಟದಲ್ಲಿ ಸುದೀಪ್ ಸೇರಿದಂತೆ ಎಲ್ಲ ಕ್ಷೇತ್ರಗಳ ಗಣ್ಯರು ಭಾಗವಹಿಸಬೇಕು ಎಂಬುದು ತಮ್ಮ ಆಶಯ ಎಂದು ಉಗ್ರಪ್ಪ ತಿಳಿಸಿದ್ದಾರೆ.

ನಟನ ಕುಟುಂಬದೊಂದಿಗೆ ಹಲವು ವರ್ಷಗಳ ಪರಿಚಯವಿದೆ ಎಂದು ನೆನಪಿಸಿಕೊಂಡ ಅವರು, ಹಿಂದೆ ಡಾ. ರಾಜ್ಕುಮಾರ್ ಗೋಕಾಕ್ ಚಳವಳಿಯಲ್ಲಿ ಹಾಗೂ ಅಂಬರೀಷ್ ಕಾವೇರಿ ಹೋರಾಟದಲ್ಲಿ ಪಾಲ್ಗೊಂಡ ಉದಾಹರಣೆಗಳನ್ನು ನೀಡಿದ್ದಾರೆ.

## ಕೆಐಎ ಬಳಿ ಅಪಘಾತ: ಕಾರು ಡಿಕ್ಕಿ ಹೊಡೆದು ಬಿಜೆಪಿ ಮುಖಂಡ ಸಾವು

**ದೇವನಹಳ್ಳಿ, ಅ.14:** ಲಾರಿ ಹಿಂದಿಕ್ಕಲು ಹೋಗಿ ವೇಗವಾಗಿ ಬಂದ ಕಾರು ಡಿಕ್ಕಿ ಹೊಡೆದು ಮಾಲೂರಿನ ಬಿಜೆಪಿ ಮುಖಂಡ ಶಿವಕುಮಾರ್ ಮೃತಪಟ್ಟು ಮೂವರು ಗಾಯಗೊಂಡಿರುವ ದುರ್ಘಟನೆ ಮಂಗಳವಾರ ರಾತ್ರಿ ದೇವನಹಳ್ಳಿಯ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ರಸ್ತೆಯ ರಾಣಿ ಕ್ರಾಸ್ ಬಳಿ ನಡೆದಿದೆ.

ಮೃತ ಶಿವಕುಮಾರ್ ಹಾಗೂ ಗಾಯಾಳುಗಳು ಚಿತ್ರದುರ್ಗದಿಂದ ಮಾಲೂರಿಗೆ ರೇಂಜ್ ರೋವರ್ ಕಾರಿನಲ್ಲಿ ಹೋಗುವಾಗ ಮಾರ್ಗ ಮಧ್ಯದ ಹೊಸಕೋಟೆ ದಾಬಸ್‌ಪೇಟೆ ರಿಂಗ್ ರಸ್ತೆಯ ಹೆದ್ದಾರಿಯಲ್ಲಿ ಮುಂದೆ ಸಾಗುತ್ತಿದ್ದ ಗ್ಯಾಸ್ ಲಾರಿಯನ್ನು ಹಿಂದಿಕ್ಕಲು ಪ್ರಯತ್ನಿಸಿದಾಗ ಕಾರು ವೇಗವಾಗಿ ಲಾರಿಗೆ ಡಿಕ್ಕಿ ಹೊಡೆದಿದೆ.

ಡಿಕ್ಕಿಯ ರಭಸಕ್ಕೆ ಕಾರಿನ ಮುಂಭಾಗ ಸಂಪೂರ್ಣವಾಗಿ ನಜ್ಜುಗುಜ್ಜಾಗಿದ್ದು, ತೀವ್ರವಾಗಿ ಗಾಯಗೊಂಡ ಶಿವಕುಮಾರ್ ಸ್ಥಳದಲ್ಲೇ ಮೃತಪಟ್ಟಿದ್ದಾರೆ. ಘಟನೆಯ ಕುರಿತು ದೇವನಹಳ್ಳಿ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದು, ಅಪಘಾತಕ್ಕೆ ನಿಖರ ಕಾರಣವೇನು ಎಂಬುದರ ಕುರಿತು ತನಿಖೆ ಮುಂದುವರಿಸಿದ್ದಾರೆ.

## ಅಂಬಾರಿ ಹೊರುವ ಹೊಣೆ ಆನೆ ಪ್ರಶಾಂತ್‌ಗೆ: ಯತೀಂದ್ರ ಘೋಷಣೆ

**ಮೈಸೂರು, ಅ.14:** ಈ ಬಾರಿಯ ನಾಡಹಬ್ಬ ದಸರಾ ಮಹೋತ್ಸವದಲ್ಲಿ ತಾಯಿ ಚಾಮುಂಡಿಯನ್ನು ಹೊತ್ತು ಮೆರವಣಿಗೆ ಸಾಗಲು ಅಂಬಾರಿ ಹೊರುವ ಆನೆಯಾಗಿ ಕೊನೆಗೂ ಪ್ರಶಾಂತ ಆಯ್ಕೆಯಾಗಿದ್ದಾನೆ. ಈ ಕುರಿತು ಜಿಲ್ಲಾ ಉಸ್ತುವಾರಿ ಸಚಿವ ಡಾ. ಯತೀಂದ್ರ ಸಿದ್ದರಾಮಯ್ಯ ಅವರು ಅಧಿಕೃತವಾಗಿ ಘೋಷಿಸಿದ್ದಾರೆ.

ನಾಡಹಬ್ಬ ವಿಶ್ವವಿಖ್ಯಾತ ಮೈಸೂರು ದಸರಾ ಮಹೋತ್ಸವಕ್ಕೆ ದಿನಗಣನೆ ಆರಂಭಗೊಂಡಿದ್ದು, ಈಗಾಗಲೇ ಗಜಪಡೆಯು ಸಾಂಸ್ಕೃತಿಕ ನಗರಿಯಲ್ಲಿ ತಾಲೀಮು ಸೇರಿದಂತೆ ಒಂದಷ್ಟು ಅಭ್ಯಾಸಗಳನ್ನು ಮುಗಿಸಿವೆ.

ತಾಲೀಮು ಸಿದ್ಧತೆಗೂ ಮುನ್ನ ನಡೆಸಿದ ದಸರಾದಲ್ಲಿ ಪಾಲ್ಗೊಳ್ಳಲಿರುವ 9 ಆನೆಗಳ ತೂಕ ಮಾಪನದಲ್ಲಿ ಶ್ರೀಕಂಠ ಮೊದಲ ಸ್ಥಾನವನ್ನು ಅಲಂಕರಿಸಿದ್ದೇ ಆದರೂ ನಾಡ ದೇವತೆಯನ್ನು ಹೊರಲು ಪ್ರಶಾಂತನೇ ಗಟ್ಟಿಮುಟ್ಟು ಎಂದು ಅಂತಿಮ ನಿರ್ಧಾರ ಕೈಗೊಳ್ಳಲಾಗಿದೆ.

ಆರಂಭದಲ್ಲಿ ಮೈಸೂರು ದಸರಾ ಉತ್ಸವಕ್ಕೆ 12 ಆನೆಗಳ ಪಟ್ಟಿಯನ್ನು ಪ್ರಕಟಿಸಿದ್ದ ಅರಣ್ಯ ಇಲಾಖೆ, ಅಂಬಾರಿ ಹೊರುತ್ತಿದ್ದ ಅಭಿಮನ್ಯುವನ್ನು ಕೈ ಬಿಡುವ ಮೂಲಕ ಈ ಬಾರಿಯ ದಸರಾ ಮೆರವಣಿಗೆಯಲ್ಲಿ ಹೊಸ ಆನೆಯೇ ಅಂಬಾರಿ ಹೊರಲಿದೆ ಎಂಬುದನ್ನು ಸ್ಪಷ್ಟಪಡಿಸಿತ್ತು.



ಶ್ರೀಕಂಠ ಹೆಚ್ಚು ತೂಕ ಹೊಂದುವ ಮೂಲಕ ಪ್ರಥಮ ಸ್ಥಾನ ಪಡೆದಿರುವುದನ್ನು ನೋಡಿ, ನಾಡದೇವತೆಯನ್ನು ಶ್ರೀಕಂಠನೇ ಹೊರುವ ಸಾಧ್ಯತೆಯಿದೆ ಎಂದು ಊಹಿಸಲಾಗಿತ್ತು. ಆದರೆ, ಅಂಬಾರಿಯನ್ನು ಹೊತ್ತು ಸಾಗಲು ಪ್ರಶಾಂತನೇ ಬೆಸ್ಟ್ ಎಂದು ಈಗ ನಿರ್ಧರಿಸಲಾಗಿದೆ.

## ಜೂನ್‌ನಿಂದ 1225 ಕೆಪಿಎಸ್ ಶಾಲೆಗಳು ಆರಂಭ: ಸಚಿವ ಮಧು ಬಂಗಾರಪ್ಪ

**ಮೈಸೂರು, ಅ.14:** ರಾಜ್ಯದಲ್ಲಿ ಜೂನ್‌ನಿಂದ 1225 ಕರ್ನಾಟಕ ಪಬ್ಲಿಕ್ ಶಾಲೆಗಳು ಪ್ರಾರಂಭವಾಗಲಿವೆ ಎಂದು ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವ ಮಧು ಬಂಗಾರಪ್ಪ ಹೇಳಿದರು.



ನಾಡಹಬ್ಬ ಮೈಸೂರು ದಸರಾ ಮಹೋತ್ಸವ–2026 ಅಂಗವಾಗಿ ಮಹಿಳಾ ಮತ್ತು ಮಕ್ಕಳ ದಸರಾ ಉಪ ಸಮಿತಿ ವತಿಯಿಂದ ಬುಧವಾರ ಆಯೋಜಿಸಿದ್ದ ಮಕ್ಕಳ ದಸರಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಮುಖ್ಯಮಂತ್ರಿಗಳ ಸಿಎಸ್‌ಆರ್ ಅನುದಾನದಲ್ಲಿ 1000 ಶಾಲೆಗಳನ್ನು ಆರಂಭಿಸಲು ಕ್ರಮ ವಹಿಸಲಾಗುತ್ತಿದೆ. ಕರ್ನಾಟಕ ಪಬ್ಲಿಕ್ ಶಾಲೆಯಲ್ಲಿ ಎಲ್‌ಕೆಜಿಯಿಂದ ದ್ವಿತೀಯ ಪಿಯುಸಿ ವರೆಗೆ ಗುಣಮಟ್ಟದ ಶಿಕ್ಷಣವನ್ನು ನೀಡಲಾಗುವುದು. ಪ್ರತಿ ತರಗತಿಗೆ ಒಬ್ಬರು ಶಿಕ್ಷಕರು ಹಾಗೂ ಕೌಶಲ್ಯ ಅಭಿವೃದ್ಧಿ, ನಾಟಕ, ದೈಹಿಕ ಹಾಗೂ ಸಂಗೀತ ಶಿಕ್ಷಣಕ್ಕೆ ಪ್ರತ್ಯೇಕ ಶಿಕ್ಷಕರು ಇರಲಿದ್ದಾರೆ. ಅಲ್ಲದೆ ಮಕ್ಕಳಿಗೆ ಇಲಾಖೆಯಿಂದಲೇ ಜೂನ್ ತಿಂಗಳಿಂದ ಉಚಿತ ಬಸ್ ವ್ಯವಸ್ಥೆಯನ್ನು ಸಹ ಮಾಡಲಾಗುವುದು ಎಂದು ಮಾಹಿತಿ ನೀಡಿದರು.

ಶಿಕ್ಷಣ ಸಚಿವರಾಗಿ ನಾಲ್ಕನೇ ಬಾರಿಗೆ ಮಕ್ಕಳ ದಸರಾ ಆಚರಣೆಯಲ್ಲಿ ಪಾಲ್ಗೊಳ್ಳುತ್ತಿರುವುದು ನನಗೆ ತುಂಬಾ ಸಂತೋಷ ತಂದಿದೆ. ಮಾಜಿ ಸಿಎಂ ಸಿದ್ದರಾಮಯ್ಯ ಮತ್ತು ಸಿಎಂ ಡಿ.ಕೆ. ಶಿವಕುಮಾರ್ ಅವರು ಮಕ್ಕಳ ಸೇವೆ ಮಾಡಲು ಹಾಗೂ ಇಲಾಖೆಯಲ್ಲಿ ನನಗೆ ಸಂಪೂರ್ಣ ಅಧಿಕಾರ ನೀಡಿರುವುದಕ್ಕೆ ತುಂಬು ಹೃದಯದ ಧನ್ಯವಾದಗಳನ್ನು ಅರ್ಪಿಸುತ್ತೇನೆ ಎಂದರು.

ಧಾರಾವಾಹಿ ಕಲಾವಿದೆ ಬೆಂಗಳೂರಿನ ಕುಮಾರಿ ಟಿ.ಬಿ. ರಚನಾ, ಮೈಸೂರಿನ ಮೇದಿನಿ ಗ್ರಾಮದ ಕ್ರೀಡಾಪಟು ತನುಶ್ರೀ ಹಾಗೂ ವಿಶೇಷಚೇತನ ಕ್ರೀಡಾಪಟು ಧಾರವಾಡದ ವಿನಾಯಕ ಹಳ್ಳಿಕೇರಿ ಅವರನ್ನು ಸಚಿವ ಮಧು ಬಂಗಾರಪ್ಪ ಅವರು ಇದೇ ವೇಳೆ ಸನ್ಮಾನಿಸಿದರು.

ವಿವಿಧ ವೇಷಭೂಷಣ ಕಲಾಪ್ರಕಾರಗಳೊಂದಿಗೆ 1000 ಮಕ್ಕಳೊಂದಿಗೆ ಅರಮನೆಯ ಕೋಟೆ ಆಂಜನೇಯ ಸ್ವಾಮಿ ದೇವಸ್ಥಾನದಿಂದ ಡಿ. ದೇವರಾಜು ಅರಸು ರಸ್ತೆ ಮಾರ್ಗವಾಗಿ ಕಲಾಮಂದಿರದವರೆಗೆ ಕಲಾಥಾನ್ ಮೆರವಣಿಗೆ ನಡೆಯಿತು. ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ದಸರಾ ಉಪ ಸಮಿತಿ ಉಪ ವಿಶೇಷಾಧಿಕಾರಿ ಹಾಗೂ ಉಪ ಕಾರ್ಯದರ್ಶಿ(ಆಡಳಿತ) ಬಿ.ಎನ್. ಸವಿತಾ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಅರುಣ್ ಕುಮಾರ್, ಮಹಿಳಾ ಮತ್ತು ಮಕ್ಕಳ ದಸರಾ ಉಪ ಸಮಿತಿ ಅಧ್ಯಕ್ಷೆ ಚೂಡಾಮಣಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕ ಆರ್. ನಾಗರಾಜು, ಶಾಲಾ ಶಿಕ್ಷಣ ಇಲಾಖೆ ಉಪ ನಿರ್ದೇಶಕ ಡಿ.ಉದಯ ಕುಮಾರ್ ಸೇರಿದಂತೆ ಇತರರು ಇದ್ದರು.

## ಕಬ್ಬಿಗೆ ತಕ್ಷಣ ಎಸ್‌ಎಪಿ ದರ ನಿಗದಿಪಡಿಸಿ ಘೋಷಿಸಿ: ರಾಜ್ಯ ಸರ್ಕಾರಕ್ಕೆ ಸಂಸದ ಬಸವರಾಜ ಬೊಮ್ಮಾಯಿ ಒತ್ತಾಯ

**ಹಾವೇರಿ, ಅ.14:** ರಾಜ್ಯದಲ್ಲಿ ಕಬ್ಬು ಬೆಳೆಗಾರರು ಎದುರಿಸುತ್ತಿರುವ ಸಮಸ್ಯೆಗಳಿಗೆ ತಕ್ಷಣ ಪರಿಹಾರ ಕಲ್ಪಿಸಲು ಸರ್ಕಾರ ಕೂಡಲೇ ಎಸ್‌ಎಪಿ ದರವನ್ನು ನಿಗದಿಪಡಿಸಿ ಘೋಷಣೆ ಮಾಡಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಒತ್ತಾಯಿಸಿದ್ದಾರೆ.

ಕಬ್ಬು ಬೆಳೆಗಾರರಿಗೆ ನ್ಯಾಯಯುತ ಬೆಲೆ ಒದಗಿಸುವಲ್ಲಿ ರಾಜ್ಯ ಸರ್ಕಾರ ಪ್ರಮುಖ ಪಾತ್ರ ವಹಿಸಬೇಕಿದ್ದು, ತನ್ನ ಕರ್ತವ್ಯ ನಿರ್ವಹಿಸುವಲ್ಲಿ ವಿಫಲವಾಗಿದೆ ಎಂದು ಅವರು ಆರೋಪಿಸಿದ್ದಾರೆ.

ಹಾವೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಉತ್ತರ ಕರ್ನಾಟಕದ ವಿವಿಧ ಭಾಗಗಳಲ್ಲಿ ಕಬ್ಬಿನ ಬೆಲೆ ನಿಗದಿಗಾಗಿ ರೈತರು ನಡೆಸುತ್ತಿರುವ ಪ್ರತಿಭಟನೆಯಲ್ಲಿ ಹಲವು ನ್ಯಾಯಯುತ ಬೇಡಿಕೆಗಳಿವೆ. ರೈತರಿಗೆ ಸೂಕ್ತ ಬೆಲೆ ದೊರೆಯುವಂತೆ ಮಾಡಲು ಸರ್ಕಾರ ತಕ್ಷಣ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಕಬ್ಬು ಬೆಳೆಯುವ ದೇಶದ ವಿವಿಧ ರಾಜ್ಯಗಳು ರೈತರ ಹಿತಾಸಕ್ತಿ ಕಾಪಾಡಲು ಹೆಚ್ಚುವರಿ ಬೆಲೆ ಅಥವಾ ಪ್ರೋತ್ಸಾಹಧನ ನೀಡುತ್ತಿವೆ. ತಮಿಳುನಾಡು, ಮಹಾರಾಷ್ಟ್ರ ಮತ್ತು ಉತ್ತರ ಪ್ರದೇಶಗಳಲ್ಲಿ ರೈತರಿಗೆ ಹೆಚ್ಚುವರಿ ಆರ್ಥಿಕ ನೆರವು ನೀಡುವ ವ್ಯವಸ್ಥೆಗಳಿವೆ. ಉತ್ತರ ಪ್ರದೇಶದಲ್ಲಿ ಎಫ್‌ಆರ್‌ಪಿ ದರದ ಮೇಲೆ ಪ್ರತಿ ಟನ್‌ಗೆ ಸುಮಾರು 400 ಹೆಚ್ಚುವರಿ ಮೊತ್ತ ನೀಡಲಾಗುತ್ತಿದೆ ಎಂದು ಬೊಮ್ಮಾಯಿ ತಿಳಿಸಿದರು.



ಕರ್ನಾಟಕದಲ್ಲಿ ಎಸ್‌ಎಪಿ ಕಾನೂನಿನಡಿ ಸಕ್ಕರೆ ಹಾಗೂ ಕಬ್ಬಿನಿಂದ ಉತ್ಪಾದನೆಯಾಗುವ ಇತರ ಉಪ ಉತ್ಪನ್ನಗಳ ಆದಾಯದಲ್ಲಿ ರೈತರಿಗೆ ಪಾಲು ನೀಡುವ ನೀತಿಯಿದೆ. ಈ ಸೂತ್ರದ ಆಧಾರದಲ್ಲಿ ಈ ಹಂಗಾಮಿಗೆ ಎಷ್ಟು ದರ ನಿಗದಿಪಡಿಸಬಹುದು ಎಂಬುದನ್ನು ಲೆಕ್ಕಹಾಕಿ, ಸಕ್ಕರೆ ಕಾರ್ಖಾನೆಗಳಿಗೆ ರಾಜ್ಯ ಸರ್ಕಾರ ಆದೇಶ ನೀಡಬೇಕು ಎಂದು ಆಗ್ರಹಿಸಿದರು.ಸಕ್ಕರೆಯ ಜೊತೆಗೆ ವಿದ್ಯುತ್, ಮೊಲಾಸಿಸ್, ಆಲ್ಕೋಹಾಲ್ ಮತ್ತು ಎಥೆನಾಲ್ ಉತ್ಪಾದನೆಯಿಂದಲೂ ಆದಾಯ ಬರುತ್ತದೆ. ಈ ಉತ್ಪನ್ನಗಳಿಂದ ದೊರೆಯುವ ಆದಾಯದಲ್ಲಿ ರೈತರಿಗೆ ಎಷ್ಟು ಪಾಲು ನೀಡಬೇಕು ಎಂಬುದನ್ನು ಎಸ್‌ಎಪಿ ಸೂತ್ರದ ಅನ್ವಯ ನಿರ್ಧರಿಸಬೇಕು. ಇದರಿಂದ ರೈತರಿಗೆ ತಮ್ಮ ಬೆಳೆಗೆ ದೊರೆಯಬಹುದಾದ ಬೆಲೆಯ ಬಗ್ಗೆ ಸ್ಪಷ್ಟತೆ ಸಿಗಲಿದೆ ಎಂದರು.

ಎಂಎಸ್ಪಿ ಪರಿಷ್ಕರಣೆಗೆ ಕೇಂದ್ರ ಸರ್ಕಾರ ಕ್ರಮ ಕೈಗೊಳ್ಳಲಿ–ಕಬ್ಬಿನ ಬೆಲೆ ನಿಗದಿಗೆ ಸಂಬಂಧಿಸಿದಂತೆ ಕನಿಷ್ಠ ಬೆಂಬಲ ಬೆಲೆ (ಎಂಎಸ್‌ಪಿ) ಪರಿಷ್ಕರಣೆಯ ಅಗತ್ಯವಿದೆ ಎಂದು ಬೊಮ್ಮಾಯಿ ಅಭಿಪ್ರಾಯ ಪಟ್ಟರು. ದೀರ್ಘಕಾಲ ದಿಂದ ಎಂಎಸ್ಪಿ ಪರಿಷ್ಕರಣೆಯಾಗದಿರುವುದರಿಂದ ರೈತರ ಸಮಸ್ಯೆಗಳು ಹೆಚ್ಚಾಗಿವೆ. ಬೆಲೆಗಳನ್ನು ಕಾಲಕಾಲಕ್ಕೆ ಪರಿಷ್ಕರಿಸಿದ್ದರೆ ಈಗಿನ ಪರಿಸ್ಥಿತಿಯ ತೀವ್ರತೆ ಕಡಿಮೆಯಾಗುತ್ತಿತ್ತು ಎಂದರು. ಕಬ್ಬು ಬೆಳೆಗಾರರ ಹಿತಾಸಕ್ತಿ, ಸಕ್ಕರೆ ಬಳಕೆದಾರರ ಹಿತಾಸಕ್ತಿ ಹಾಗೂ ವಿವಿಧ ರಾಜ್ಯಗಳ ಬೇಡಿಕೆಗಳನ್ನು ಸಮತೋಲನಗೊಳಿಸಿ ಎಂಎಸ್ಪಿ ಪರಿಷ್ಕರಿಸಬೇಕು.

ಈ ನಿಟ್ಟಿನಲ್ಲಿ ಕೇಂದ್ರ ಸರ್ಕಾರ ರಚಿಸಿರುವ ಸಮಿತಿಯು ತಕ್ಷಣ ಕಾರ್ಯಾರಂಭ ಮಾಡಿ, ರೈತರ ಪ್ರತಿನಿಧಿಗಳು ಹಾಗೂ ತಜ್ಞರೊಂದಿಗೆ ಚರ್ಚಿಸಿ ಶೀಘ್ರ ನಿರ್ಧಾರ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಕೇಂದ್ರ ಸಚಿವ ಪ್ರಹ್ಲಾದ್ ಜೋಶಿ ಅವರ ಪ್ರಯತ್ನದಿಂದ ರೈತರ ಸಮಸ್ಯೆಗಳ ಕುರಿತು ಚರ್ಚಿಸಲು ಸಮಿತಿ ರಚನೆಯಾಗಿರುವುದನ್ನು ಉಲ್ಲೇಖಿಸಿದ ಅವರು, ಸಮಿತಿಯು ರೈತರಿಗೆ ಲಾಭದಾಯಕ ಬೆಲೆ ದೊರೆಯುವಂತೆ ಸೂಕ್ತ ನಿರ್ಧಾರ ಕೈಗೊಳ್ಳಲಿದೆ ಎಂಬ ವಿಶ್ವಾಸ ವ್ಯಕ್ತಪಡಿಸಿದರು.

## ರೈತ ದೇಶದ ಬೆನ್ನೆಲುಬು, ಅನ್ನದಾತನ ಬೇಡಿಕೆ ಈಡೇರಿಸಿ ಬೈಲೂರು ನಿಷ್ಕಲ ಮಂಟಪದ ನಿಜಗುಣಾನಂದ ಸ್ವಾಮೀಜಿ

**ಬೆಳಗಾವಿ, ಅ.14:** ರೈತ ದೇಶದ ಬೆನ್ನೆಲುಬು ಮಾತ್ರವಲ್ಲ; ದೇಶದ ದೇವರು. ನೀವು ಯಾವ್ಯಾವುದೋ ದೇವರುಗಳ ಪೂಜೆ ಮಾಡುವ ಬದಲು ರೈತರ ಬೇಡಿಕೆ ಈಡೇರಿಸಿ ಸಾಕು' ಎಂದು ಬೈಲೂರು ನಿಷ್ಕಲ ಮಂಟಪದ ನಿಜಗುಣಾನಂದ ಸ್ವಾಮೀಜಿ ಹೇಳಿದರು.

ಹಿರೇಬಾಗೇವಾಡಿ ಟೋಲ್ ನಾಕಾ ಬಳಿ ಕಬ್ಬು ಬೆಳೆಗಾರರು ನಡೆಸುತ್ತಿ ರುವ ಹೋರಾಟಕ್ಕೆ ಬುಧವಾರ ಲಿಂಗಾಯತ ಮಠಾಧೀಶರ ಪರವಾಗಿ ಬೆಂಬಲ ಸೂಚಿಸಿ ಮಾತನಾಡಿದ ಅವರು, ಬಸವಣ್ಣ ನವರು ಶತಮಾನಗಳ ಹಿಂದೆಯೇ ರೈತನ ಮಹತ್ವವನ್ನು ಸಾರಿದ್ದಾರೆ. ಕೃಷಿ ಕಾಯಕ ಮಾಡುವ ಸದ್ಭಕ್ತನ ಪಾದವನ್ನು ತೋರಿಸಿ ಬದುಕಿಸಯ್ಯ ಎಂದು ಬಸವಣ್ಣನವರು ಹೇಳಿರುವುದು ರೈತನ ತನು, ಮನ ಮತ್ತು ಭಾವದ ಶುದ್ಧತೆಯನ್ನು ಪ್ರತಿಬಿಂಬಿಸುತ್ತದೆ. ರೈತನ ಬದುಕು ದುಡಿಮೆಯ ಮೇಲೆ ನಿಂತಿದ್ದು, ಆತನಲ್ಲಿ ಮೋಸ, ವಂಚನೆಗೆ ಅವಕಾಶವಿಲ್ಲ' ಎಂದರು.



ರೈತರ ಹಕ್ಕು ಮತ್ತು ಬದುಕಿಗಾಗಿ ನಡೆಯುತ್ತಿರುವ ಹೋರಾಟವನ್ನು ಸರ್ಕಾರಗಳು ನಿರ್ಲಕ್ಷಿಸಬಾರದು. ರೈತರ ಬೇಡಿಕೆಗಳಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ತಕ್ಷಣ ಸ್ಪಂದಿಸಿ ನ್ಯಾಯ ಒದಗಿಸಬೇಕು' ಎಂದು ಆಗ್ರಹಿಸಿದರು.

ಕರ್ನಾಟಕದ ರೈತರ ಹೋರಾಟ ಸಾಮಾನ್ಯ ಹೋರಾಟವಲ್ಲ. ದೇಶದ ಭವಿಷ್ಯವನ್ನೇ ಬದಲಿಸುವ ಶಕ್ತಿ ಈ ಹೋರಾಟಕ್ಕಿದೆ. ಕರ್ನಾಟಕದ ರೈತರು ಪ್ರಗತಿಪರ ಚಿಂತನೆ ಹಾಗೂ ಸದೃಢ ಮನಸ್ಸು ಹೊಂದಿದ್ದಾರೆ. ರೈತರ ಹೋರಾಟದ ಇತಿಹಾಸವನ್ನು ಯುವಕರು ಅಧ್ಯಯನ ಮಾಡಬೇಕು. ರೈತ ಚಳವಳಿಯ ಇತಿಹಾಸವನ್ನು ತಿಳಿದುಕೊಳ್ಳಲು ಪ್ರೊ.ನಂಜುಂಡಸ್ವಾಮಿ ಅವರ ಬರಹಗಳನ್ನು ಓದಬೇಕು' ಎಂದು ಸಲಹೆ ನೀಡಿದರು. ಹಾಗೂ ರೈತರು ಶ್ರೀಮಂತರಲ್ಲ; ಬಹುತೇಕ ರೈತರು ಸಾಲದ ಹೊರೆ ಹೊತ್ತಿದ್ದಾರೆ. ಕೃಷಿ ವೆಚ್ಚ ನಿರಂತರವಾಗಿ ಹೆಚ್ಚುತ್ತಿರುವ ಸಂದರ್ಭದಲ್ಲಿ ರೈತರ ಉತ್ಪನ್ನಕ್ಕೆ ನ್ಯಾಯಯುತ ಬೆಲೆ ದೊರಕಬೇಕು. ರೈತರ ಸಂಕಷ್ಟವನ್ನು ಸರ್ಕಾರಗಳು ಅರ್ಥ ಮಾಡಿಕೊಂಡು ಹೋರಾಟ ಅಂತ್ಯಗೊಳ್ಳುವಂತೆ ತಕ್ಷಣ ಕ್ರಮ ಕೈಗೊಳ್ಳಬೇಕು' ಎಂದು ನಿಜಗುಣಾನಂದ ಸ್ವಾಮೀಜಿ ಒತ್ತಾಯಿಸಿದರು.ಚನ್ನಮ್ಮನ ಕಿತ್ತೂರಿನ ರಾಜಗುರು ಸಂಸ್ಥಾನ ಮಠದ ಮಡಿವಾಳ ರಸಕಯೋಗೀಂದ್ರ ಸ್ವಾಮೀಜಿ ಕೂಡ ಬೆಂಬಲ ಸೂಚಿಸಿ ಮಾತನಾಡಿದರು.

### ಮಾಜಿ ಸಚಿವ ರಮೇಶ್ ಜಾರಕಿಹೊಳಿ ಅಭಿಮತ

## ಸ್ಟಿಂಗ್ ಆಪರೇಷನ್: ಸಿದ್ದರಾಮಯ್ಯ ತಡೆಯಾಜ್ಞೆ ತರದೆ ಹೋರಾಡಬೇಕಿತ್ತು



**ಮೈಸೂರು, ಅ.14:** ರಾಜ್ಯ ರಾಜಕಾರಣದಲ್ಲಿ ತೀವ್ರ ಸದ್ದು ಮಾಡುತ್ತಿರುವ ಸ್ಟಿಂಗ್ ಕಾರ್ಯಾಚರಣೆ ಭಾಗವಾಗಿ ವೀಡಿಯೊ ಹೊರಬಿದ್ದಿದೆ ಎಂಬ ಊಹಾಪೋಹಗಳ ನಡುವೆ, ಮಾಜಿ ಸಿಎಂ ಸಿದ್ದರಾಮಯ್ಯ ನ್ಯಾಯಾಲಯದಿಂದ ತಡೆಯಾಜ್ಞೆ ತರದೆ ಧೈರ್ಯವಾಗಿ ಎದುರಿಸಿ ಹೋರಾಡಬೇಕಿತ್ತು ಎಂದು ಮಾಜಿ ಸಚಿವ ಹಾಗೂ ಬಿಜೆಪಿ ಶಾಸಕ ರಮೇಶ್ ಜಾರಕಿಹೊಳಿ ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

ಮೈಸೂರಿನಲ್ಲಿರುವ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿದ ರಮೇಶ್ ಜಾರಕಿಹೊಳಿ ಅರ್ಧ ಗಂಟೆಗೂ ಹೆಚ್ಚು ಕಾಲ ಗೌಪ್ಯ ಮಾತುಕತೆ ನಡೆಸಿದ ಬಳಿಕ ಮಾಧ್ಯಮಗಳೊಂದಿಗೆ ಮಾತನಾಡಿದರು. ತಮ್ಮ ಭೇಟಿಯ ವಿವರ ನೀಡಲು ನಿರಾಕರಿಸಿದ ಜಾರಕಿಹೊಳಿ, ಸಿದ್ದರಾಮಯ್ಯ ಯಾವ ಪಕ್ಷದಲ್ಲಿದ್ದರೂ ಅವರು ನಮ್ಮ ನಾಯಕರು. ನಾನು ಈಗ ಆ ಸ್ಟಿಂಗ್ ವಿಚಾರವಾಗಿ ಹೆಚ್ಚು ಮಾತನಾಡುವುದಿಲ್ಲ. ನಾನು ಬೇರೆಯದೇ ವಿಚಾರವಾಗಿ ಅವರನ್ನು ಮಾತನಾಡಿಸಲು ಬಂದಿದ್ದೆ. ಇದು ಖಾಸಗಿ ಭೇಟಿ ಎಂದಷ್ಟೇ ಹೇಳಿದರು.



ನಾಳೆ ಅಕ್ಟೋಬರ್ 15 ರಂದು

ಆರೋಗ್ಯದ ಶುಭ ಹಾರೈಕೆಯೊಂದಿಗೆ

ಮಂಗಳೂರಿಗೆ ಆಗಮಿಸುತ್ತಿರುವ

ಸಹಕಾರ ರತ್ನ

# ಡಾ.ಎಂ.ಎನ್. ರಾಜೇಂದ್ರ ಕುಮಾರ್

ಅವರಿಗೆ

# ಹೃತ್ಪೂರ್ವಕ ಸ್ವಾಗತ

**ಸಹಕಾರ ರಂಗದ ಧೀಮಂತ ನಾಯಕ**
**ಮಹಿಳಾ ಸಬಲೀಕರಣದ ಹರಿಕಾರ,**
**ನವೋದಯ ಸ್ವಸಹಾಯ ಸಂಘಗಳ ನೇತಾರ, ಬಡವರ ಬಂಧು**
'ಸಹಕಾರ ರತ್ನ' **ಡಾ. ಎಂ.ಎನ್. ರಾಜೇಂದ್ರ ಕುಮಾರ್**
ಅವರು ಅನಾರೋಗ್ಯದಿಂದ ಚೇತರಿಸಿಕೊಂಡು ಮತ್ತೆ ತಮ್ಮ
ಎಂದಿನ ಕೆಲಸ ಕಾರ್ಯಗಳಿಗೆ ಮರಳಿರುವುದು ಸಹಕಾರಿಗಳೆಲ್ಲರಿಗೂ
ನಿಜಕ್ಕೂ ಸಂತಸದ ವಿಚಾರ. ಆರೋಗ್ಯದ ಸವಾಲುಗಳನ್ನು ದಾಟಿ
ತಮ್ಮ ಜವಾಬ್ದಾರಿಗಳತ್ತ ಮರಳುವ ಈ ಸಂದರ್ಭದಲ್ಲಿ ಅವರಿಗೆ

## ಹೃತ್ಪೂರ್ವಕ ಅಭಿನಂದನೆಗಳು

ಹಾಗೂ **ಶುಭ ಹಾರೈಕೆಗಳು.**

ಅವರ ಮುಂದಿನ ದಿನಗಳು ಉತ್ತಮ ಆರೋಗ್ಯ, ನೆಮ್ಮದಿ
ಮತ್ತು ಕಾರ್ಯಕ್ಷೇತ್ರ ಯಶಸ್ಸಿನಿಂದ ಕೂಡಿರಲಿ. ಸಹಕಾರ ಕ್ಷೇತ್ರದ
ಮೂಲಕ ಸಮಾಜದ ಅಭಿವೃದ್ಧಿಗೆ ಕೊಡುಗೆ ನೀಡುವ ಅವರ
ಪಯಣ ಇನ್ನಷ್ಟು ಸಾರ್ಥಕವಾಗಲಿ. ಅವರ ಅನುಭವ,
ಬದ್ಧತೆ ಮತ್ತು ಸೇವಾ ಮನೋಭಾವ ಮುಂದಿನ ದಿನಗಳಲ್ಲಿಯೂ
ಸಹಕಾರಿಗಳೆಲ್ಲರಿಗೂ ಉಪಯುಕ್ತವಾಗಲಿ.
ಅನಾರೋಗ್ಯದಿಂದ ಚೇತರಿಕೆ , ಕಾರ್ಯಕ್ಷೇತ್ರಕ್ಕೆ
ಪುನರಾಗಮನ, ಸಹಕಾರದ ಸೇವೆಗೆ ಹೊಸ ಚೈತನ್ಯ.

ಸಹಕಾರ ರತ್ನ

## ಡಾ. ಎಂ.ಎನ್. ರಾಜೇಂದ್ರ ಕುಮಾರ್

ಅವರಿಗೆ ಶ್ರೀ ಭಗವಂತ ಆರೋಗ್ಯಪೂರ್ಣ, ಸಂತಸದ
ಮತ್ತು ಸಾರ್ಥಕ ಬದುಕನ್ನು ಕರುಣಿಸಲಿ ಎಂಬ

## ಶುಭ ಹಾರೈಕೆಗಳೊಂದಿಗೆ

**ವಿನಯ್ ಕುಮಾರ್ ಸೂರಿಂಜೆ**
ಉಪಾಧ್ಯಕ್ಷರು

**ಗೋಪಾಲಕೃಷ್ಣ ಭಟ್ ಕೆ.**
ಮುಖ್ಯ ಕಾರ್ಯನಿರ್ವಹಣಾಧಿಕಾರಿ (ಪ್ರಭಾರ)

**ನಿರ್ದೇಶಕರುಗಳಾದ ಸರ್ವಶ್ರೀ :** ಟಿ.ಜಿ.ರಾಜಾರಾಮ ಭಟ್, ಭಾಸ್ಕರ್ ಎಸ್. ಕೋಟ್ಯಾನ್,
ಎಂ. ವಾದಿರಾಜ ಶೆಟ್ಟಿ , ಶಶಿಕುಮಾರ್ ರೈ ಬಿ., ದೇವಿಪ್ರಸಾದ್ ಶೆಟ್ಟಿ ,
ಎಸ್. ಬಿ. ಜಯರಾಮ ರೈ, ಮೋನಪ್ಪ ಶೆಟ್ಟಿ ಎಕ್ಕಾರು, ಎಂ. ಮಹೇಶ್ ಹೆಗ್ಡೆ ,
ಬಿ. ಅಶೋಕ್ ಕುಮಾರ್ ಶೆಟ್ಟಿ , ಕೆ.ಜೈರಾಜ್ ಬಿ.ರೈ, ಕುಶಲಪ್ಪಗೌಡ ಪಿ,
ಎಸ್.ಎನ್. ಮನ್ಮಥ, ರಾಜೇಶ್ ರಾವ್, ಸದಾಶಿವ ಉಳ್ಳಾಲ್,
ರಮೇಶ್ ಹೆಚ್.ಎನ್ (ಸಹಕಾರ ಸಂಘಗಳ ಉಪನಿಬಂಧಕರು, ದ.ಕ.ಜಿಲ್ಲೆ , ಮಂಗಳೂರು) ಮತ್ತು ಸಿಬ್ಬಂದಿ ವರ್ಗ

**ವಿ.ಸೂ.: ಹಿತೈಷಿಗಳು ಯಾರೂ ಹೂ ಹಾರ, ಹೂಗುಚ್ಛವನ್ನು ತರಬಾರದಾಗಿ ವಿನಂತಿ.**

## ದಕ್ಷಿಣ ಕನ್ನಡ ಜಿಲ್ಲಾ ಕೇಂದ್ರ ಸಹಕಾರಿ ಬ್ಯಾಂಕ್ ನಿ.

## SCDCC BANK LTD.

H.O. MANGALORE

ಪ್ರಧಾನ ಕಛೇರಿ: 'ಉತ್ಕೃಷ್ಟ ಸಹಕಾರಿ ಸೌಧ', ಕೊಡಿಯಾಲ್‌ಬೈಲ್, ಮಂಗಳೂರು - 3
ದೂರವಾಣಿ: 0824-2440381, 2440882, 2441341, 2441243